ಸಂಪುಟ: 14 Volume | ಸಂಚಿಕೆ: 37 Issue | ಪುಟಗಳು 08 Pages | ಮಂಗಳವಾರ 12 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**
ನಿಮ್ಮಷ್ಟಕ್ಕೆ ನೀವೇ ಬೆಳೆಯಬೇಕು.ಅದಕ್ಕಾಗಿ ಬೇರೊಬ್ಬ ಶಿಕ್ಷಕನಿರುವುದಿಲ್ಲ.
–ಸ್ವಾಮಿ ವಿವೇಕಾನಂದ

# ಮಲ್ಲಮ್ಮ ನುಡಿ

ಕನ್ನಡ ಕಿರಣ
Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ
ಸಂಪಾದಕರು: ರಮೇಶ ರೆಡ್ಡಿ

## ತತ್ವಪದ ವಿಮರ್ಶಾ: ರಾಜ್ಯ ಮಟ್ಟದ ಸ್ಪರ್ಧೆ

**ಬೀದರ್:** ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರವು ತತ್ವಪದ ವಿಮರ್ಶಾ ಲೇಖನ ರಾಜ್ಯಮಟ್ಟದ ಸ್ಪರ್ಧೆಯನ್ನು ಏರ್ಪಡಿಸಲು ಉದ್ದೇಶಿಸಿದೆ. 18 ರಿಂದ 40 ವರ್ಷ ವಯೋಮಿತಿಯುಳ್ಳವರು ಈ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಸ್ಪರ್ಧೆಗೆ ಅಧ್ಯಯನ ಕೇಂದ್ರವು ನೀಡಿರುವ ವಿಷಯಗಳಲ್ಲಿ ಯಾವುದಾದರು ಒಂದು ವಿಷಯವನ್ನು ಆಯ್ಕೆ ಮಾಡಿ ವಿಮರ್ಶಾ ಲೇಖನವನ್ನು ರಚಿಸಿ ಸ್ಪರ್ಧೆಗೆ ಆಹ್ವಾನ ನೀಡಿದ ದಿನಾಂಕದಿಂದ ಒಂದು ತಿಂಗಳ ಒಳಗೆ ಅಂದರೆ ಜೂನ್.5 ರೊಳಗಾಗಿ ಭಾಗವಹಿಸುವ ಸ್ಪರ್ಧಿಯು ಅರ್ಜಿ ಮತ್ತು ವಿಮರ್ಶಾ ಲೇಖನವನ್ನು ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಕಲಾಗ್ರಾಮ, ಮತ್ತಹಳ್ಳಿ, ಬೆಂಗಳೂರು–560056 ಈ ವಿಳಾಸಕ್ಕೆ ಕಳುಹಿಸಿಕೊಡಬೇಕು. ಅರ್ಜಿಯನ್ನು ಅಂಚೆ/ಕೊರಿಯರ್/ಇಮೇಲ್ ಅಥವಾ ಖುದ್ದಾಗಿ ಸಲ್ಲಿಸಬಹುದು. ಅರ್ಜಿ ನಮೂನೆಯನ್ನು ವೆಬ್‌ಸೈಟ್: https://kanakadasaresearchcenter.karnataka.gov.in ನಲ್ಲಿ ಅಪಲೋಡ್ ಮಾಡಲಾಗಿದ್ದು, ವೆಬ್‌ಸೈಟ್‌ನಲ್ಲಿ ಡೌನಲೋಡ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ 9743545865 ಗೆ ಸಂಪರ್ಕಿಸಬಹುದಾಗಿದೆ ಎಂದು ಬೀದರ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಧಿಕೃತ ಸಿಬ್ಬಂದಿ ಬಳಕೆಯ ಬಗ್ಗೆ ಅಸಮಾಧಾನ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ರಾಜ್ಯದ ವಿದ್ಯುತ್ ಇಲಾಖೆಯಲ್ಲಿ ನಡೆಯುತ್ತಿರುವ ಅನಿಯಮಿತತೆ, ಸಾರ್ವಜನಿಕರ ಸಮಸ್ಯೆಗಳ ನಿರ್ಲಕ್ಷ್ಯ ಹಾಗೂ ಅನಧಿಕೃತ ಸಿಬ್ಬಂದಿ ಬಳಕೆಯ ಬಗ್ಗೆ ಜನರಲ್ಲಿ ತೀವ್ರ ಅಸಮಾಧಾನ ವ್ಯಕ್ತವಾಗುತ್ತಿದೆ. ವಿಶೇಷವಾಗಿ ಗ್ರಾಮೀಣ ಭಾಗಗಳಲ್ಲಿ ಪದೇ ಪದೇ ವಿದ್ಯುತ್ ಕಡಿತ, ದುರಸ್ತಿ ಕಾರ್ಯಗಳಲ್ಲಿ ವಿಳಂಬ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯ ಜನರ ಆಕ್ರೋಶಕ್ಕೆ ಕಾರಣವಾಗಿದೆ.



"ವಿದ್ಯುತ್ ಇಲಾಖೆ ಜನಸೇವೆಗೆ ಇದೆಯೇ ಹೊರತು ಕೆಲ ಅಧಿಕಾರಿಗಳ ದರ್ಬಾರ್ ನಡೆಸಲು ಅಲ್ಲ" ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಇಲಾಖೆಯಲ್ಲಿ ಅನಧಿಕೃತ ಲೈನ್‌ಮನ್‌ಗಳ ಸೇವೆ ಪಡೆಯುತ್ತಿರುವ ಆರೋಪಗಳು ಕೇಳಿಬರುತ್ತಿದ್ದು, ಇದರಿಂದ ಸುರಕ್ಷತಾ ಸಮಸ್ಯೆಗಳು ಕೂಡ ಹೆಚ್ಚಾಗುತ್ತಿವೆ ಎಂದು ಜನರು ಹೇಳುತ್ತಿದ್ದಾರೆ.


ರಾಜ್ಯದ ಇಂಧನ ಸಚಿವರಾದ ಏ. ಎ. ಉಜಂಡಿಂಜ ಅವರು ಈ ಸಮಸ್ಯೆಗಳ ಬಗ್ಗೆ ಗಂಭೀರವಾಗಿ ಗಮನಹರಿಸಿ, ಇಲಾಖೆಯ ಕಾರ್ಯವೈಖರಿಯನ್ನು ಪರಿಶೀಲಿಸಬೇಕು ಎಂಬ ಆಗ್ರಹ ಸಾರ್ವಜನಿಕ ವಲಯದಲ್ಲಿ ಹೆಚ್ಚಾಗಿದೆ. ಖಾಲಿ ಹುದ್ದೆಗಳ ಭರ್ತಿ, ಅಧಿಕಾರಿಗಳ ಹೊಣೆಗಾರಿಕೆ ನಿಗದಿ ಹಾಗೂ ಜನರಿಗೆ ತ್ವರಿತ ಸೇವೆ ಒದಗಿಸುವ ವ್ಯವಸ್ಥೆ ಜಾರಿಯಾಗಬೇಕು ಎಂದು ಜನರು ಒತ್ತಾಯಿಸಿದ್ದಾರೆ. ಹುಮನಾಬಾದ್ ಸೇರಿದಂತೆ ಹಲವು ಭಾಗಗಳಲ್ಲಿ ರೈತರು, ವ್ಯಾಪಾರಸ್ಥರು ಹಾಗೂ ವಿದ್ಯಾರ್ಥಿಗಳು ವಿದ್ಯುತ್ ಸಮಸ್ಯೆಯಿಂದ ಸಂಕಷ್ಟ ಅನುಭವಿಸುತ್ತಿದ್ದಾರೆ. ರಾತ್ರಿ ವೇಳೆಯಲ್ಲಿನ ನಿರಂತರ ವಿದ್ಯುತ್ ವ್ಯತ್ಯಯ ಜನರ ಬದುಕಿನ ಮೇಲೂ ದುಷ್ಪರಿಣಾಮ ಬೀರುತ್ತಿದೆ. ಸಮಸ್ಯೆಗಳಿಗೆ ಪರಿಹಾರ ಸಿಗದಿದ್ದರೆ ಜನರು ಹೋರಾಟದ ದಾರಿ ಹಿಡಿಯುವ ಸಾಧ್ಯತೆಯೂ ಇದೆ ಎಂಬ ಎಚ್ಚರಿಕೆ ಕೇಳಿಬರುತ್ತಿದೆ.

## 3.69 ಲಕ್ಷ ಮೌಲ್ಯದ ಚಿನ್ನಾಭರಣ ಕಳವು

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮದುವೆ ಸಮಾರಂಭದಲ್ಲಿ 3.69 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವಾಗಿರುವ ಘಟನೆ ನಗರದಲ್ಲಿ ನಡೆದಿದೆ. ನಗರದ ಮೋಮಿನಪೂರ ನಿವಾಸಿಯಾಗಿರುವ ಖಾಸಗಿ ಶಾಲಾ ಶಿಕ್ಷಕಿ ಮಹ್ಮದಿ ಬೇಗಂ ಅವರ ಚಿನ್ನಾಭರಣ ಕಳವಾಗಿದ್ದು, ಅವರು ಈ ಸಂಬಂಧ ಎಂ.ಬಿ.ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

ಉಸ್ಮಾನೀಯಾ ಕಾಲೋನಿಯಲ್ಲಿರುವ ಫಂಕ್ಷನ್ ಹಾಲ್‌ನಲ್ಲಿ ಅತ್ತಿಗೆ ಸೈಯಧಾ ಉಮಯ್ಯಾ ಅವರ ಮದುವೆ ಸಮಾರಂಭ ಇದ್ದ ಪ್ರಯುಕ್ತ ಮಹ್ಮದಿ ಬೇಗಂ ಅವರು ಕುಟುಂಬ ಸಮೇತ ಮದುವೆ ಸಮಾರಂಭಕ್ಕೆ ಹೋಗಿದ್ದು, ಪಂಕ್ಷನ್ ಹಾಲ್‌ನಲ್ಲಿ ರೆಡಿಯಾಗಲು ಆಭರಣಗಳಿರುವ ಪರ್ಸನ್ನು ವಧುವಿನ ಕುರ್ಚಿಯ ಕೆಳಗಡೆ ಇಟ್ಟು ಸಂಬಂಧಿಕರೊಂದಿಗೆ ಮಾತನಾಡುತ್ತ



ವೇದಿಕೆ ಬಳಿ ಕುಳಿತಿದ್ದಾಗ 1,62,500 ರೂ.ಮೌಲ್ಯದ 13 ಗ್ರಾಂ.ಬಂಗಾರದ ಲಾಕೆಟ್, 75 ಸಾವಿರ ರೂ.ಮೌಲ್ಯದ 6 ಗ್ರಾಂ.ಬಂಗಾರದ ಕಿವಿಯೋಲೆ, 1.25 ಲಕ್ಷ ರೂ. ಮೌಲ್ಯದ 10 ಗ್ರಾಂ.ಬಂಗಾರದ 4 ಉಂಗುರುಗಳು ಮತ್ತು 6,500 ರೂ.ಮೌಲ್ಯದ 25 ಗ್ರಾಂ.ಬೆಳ್ಳಿಯ ಕಾಲಚೈನ್‌ಗಳಿದ್ದ ಪರ್ಸ್ ಮಂಗಮಾಯವಾಗಿದೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ.

# ಪಿಟಿಗೆ ಸಿಎಂ ಎದಿರೇಟು

## ಪಿಎಂ ಮೋದಿ ದೇಶದ ಪ್ರಧಾನಿಯೋ? | ರಾಜ್ಯ ಬಿಜೆಪಿ ಅಧ್ಯಕ್ಷರೊ?: ಸಿದ್ರಾಮಯ್ಯ ವಾಗ್ದಾಳಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿಯವರು ಬೆಂಗಳೂರಿನಲ್ಲಿ ಮಾತನಾಡಿದ್ದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.

ನರೇಂದ್ರ ಮೋದಿ ಅವರು ದೇಶದ ಪ್ರಧಾನಿಯಾಗಿಯೋ? ಅಥವಾ ರಾಜ್ಯ ಬಿಜೆಪಿ ಅಧ್ಯಕ್ಷರೋ?, ರಾಜ್ಯದ ಪ್ರತಿಪಕ್ಷದ ನಾಯಕರೊ? ಎನ್ನುವುದನ್ನು ಅವರೇ ಸ್ಪಷ್ಟಪಡಿಸಿ ಸಾರ್ವಜನಿಕರಲ್ಲಿ ಮೂಡಿರುವ ಗೊಂದಲವನ್ನು ಬಗೆಹರಿಸಬೇಕು ಎಂದು ಒತ್ತಾಯಿಸಿದ್ದಾರೆ.

**ವೈಫಲ್ಯದ ವಿರುದ್ಧ ಕಿಡಿ:** ಪ್ರಧಾನಮಂತ್ರಿಯವರು ರಾಜ್ಯದ ಕಾಂಗ್ರೆಸ್ ಸರ್ಕಾರವನ್ನು ಉದ್ದೇಶಿಸಿ ಮಾತನಾಡಿದ್ದರೂ ಅವರ ಮಾತಿನಲ್ಲಿ ಕೇಂದ್ರದಲ್ಲಿರುವ ಅವರದ್ದೇ ಸರ್ಕಾರದ ವೈಫಲ್ಯ ಮತ್ತು ರಾಜ್ಯದಲ್ಲಿರುವ ಅವರ ಪಕ್ಷದ ದುಸ್ಥಿತಿಯಯನ್ನು ಸರಿಪಡಿಸಲಾಗದ ಅಸಹಾಯಕತೆ ಇತ್ತು.

**ಢೋಂಗಿ ಭಾಷಣದ ಬುದ್ಧಿ:** ದೇಶದ ಯಾವೊಬ್ಬ ಪ್ರಧಾನಮಂತ್ರಿ ಎಂದೂ ಕೆಟ್ಟ ರಾಜಕಾರಣಿಗಳಂತೆ ಭಾಷಣ ಮಾಡಿಲ್ಲ. ಆದರೆ ತನ್ನ ಎಲೆ ಮೇಲೆ ಆನೆ ಬಿದ್ದಿದ್ದರೂ ಎದುರಾಳಿಗಳ ಎಲೆ ಮೇಲೆ ಸತ್ತುಬಿದ್ದ ನೊಣವನ್ನು ಹುಡುಕಾಡುವ ಢೋಂಗಿ ಬುದ್ಧಿಯೂ ಅವರ ಭಾಷಣದಲ್ಲಿ ಇತ್ತು ಸಿಎಂ ಟೀಕಿಸಿದ್ದಾರೆ.





### ಯಾರೂ ಮಾಡದ ದ್ವೇಷಾಸೂಯೆ ಭಾಷಣ

ಪಂಡಿತ್ ನೆಹರೂ, ಇಂದಿರಾಗಾಂಧಿ, ಅಟಲ್ ಬಿಹಾರಿ ಅವರು ಪ್ರತಿಪಕ್ಷಗಳನ್ನು ಹಳಿಯಲು ಹೋಗಿಲ್ಲ. ಅವರೆಲ್ಲರೂ ಕಾಪಾಡಿಕೊಂಡು ಬಂದಿದ್ದ ಪ್ರಧಾನಿ ಕುರ್ಚಿಯ ಘನತೆ, ಗಾಂಭಿರ್ಯ, ಔಚಿತ್ಯವನ್ನು ಮೋದಿಯವರು ತಮ್ಮ ಸುಳ್ಳು, ಕೀಳು ಅಭಿರುಚಿ, ದ್ವೇಷಾಸೂಯೆಗಳ ಭಾಷಣಗಳ ಮೂಲಕ ಮಣ್ಣುಪಾಲು ಮಾಡುತ್ತಿದ್ದಾರೆ ಎಂದು ಸಿಎಂ ಕುಟುಕಿದ್ದಾರೆ.

### ಪ್ರಗತಿಯ ಪುರಾವೆ ಸಾಕೆ?

ಕರ್ನಾಟಕದ ಆರ್ಥಿಕ ಪರಿಸ್ಥಿತಿ ಸುಭದ್ರವಾಗಿದೆ. ದೇಶದ ಆದಾಯ ರೂ.2.11 ಲಕ್ಷ ರೂ. ಇದ್ರೆ ಕರ್ನಾಟಕದ್ದು 4.33 ಲಕ್ಷ ರೂ.ದೇಶದ ಜಿಡಿಪಿ ಬೆಳವಣಿಗೆಯ ದರ ಶೇ.7.4 ಇದ್ರೆ, ನಮ್ದು ಶೇ.8.1 ಆಗಿದೆ. ಜಿಎಸ್ಟಿ ಸಂಗ್ರಹದಲ್ಲಿ ಮಹಾರಾಷ್ಟ್ರಬಳಿಕ ಕರ್ನಾಟಕದ್ದೇ ಅತ್ಯಧಿಕ ಪಾಲು. ಪ್ರಧಾನಿಗಳೇ, ನಾಡು ಪ್ರಗತಿಯ ಪಥದಲ್ಲಿರುವುದಕ್ಕೆ ಇನ್ನೇನು ಪುರಾವೆ ಬೇಕು ಎಂದು ಪ್ರಶ್ನಿಸಿದ್ದಾರೆ.

### ಇದ್ಯಾವ ಬಗೆಯ ಪ್ರಗತಿ?

ದೇಶದ ಬಡತನವನ್ನು ನಿರ್ಮೂಲನೆ ಮಾಡಿ ಆಗಿದೆ ಎಂದು ತನ್ನ ಬೆನ್ನನ್ನು ತಾನೇ ತಟ್ಟಿಕೊಂಡಿದ್ದ ಪ್ರಧಾನಿಯವರು ಈಗ ಚಿನ್ನ ಖರೀದಿಸಬೇಡಿ, ಪೆಟ್ರೋಲ್ ಮತ್ತು ಖಾದ್ಯ ಎಣ್ಣೆ ಕಡಿಮೆ ಬಳಸಿ, ವಿದೇಶ ಪ್ರವಾಸ ಮಾಡಬೇಡಿ, ಗೊಬ್ಬರ ಬಳಕೆ ತಗ್ಗಿಸಿ ಎಂದು ಬೇಡಿಕೊಳ್ಳುತ್ತಿರುವುದು ಯಾವ ಅಭಿವೃದ್ಧಿಯ ಲಕ್ಷಣ ಎಂಬುದನ್ನು ಮೋದಿಯವರೇ ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

### ವೈಫಲ್ಯಕ್ಕೆ ಯಾರು ಹೊಣೆ?

ಇರಾನ್ ವಿರುದ್ಧ ಇಸ್ರೇಲ್ ಮತ್ತು ಅಮೆರಿಕ ಜಂಟಿಯಾಗಿ ನಡೆಸುತ್ತಿರುವ ಯುದ್ಧದ ನಡುವೆ ಭಾರತ ಸಿಕ್ಕಿಹಾಕಿಕೊಂಡು ಒದ್ದಾಡುತ್ತಿದೆ. ಇಂತಹ ಸಂದರ್ಭದಲ್ಲಿ ನ್ಯಾಯ ಮತ್ತು ನೀತಿಯ ಪರವಾಗಿ ಗಟ್ಟಿಯಾದ ನಿಲುವು ತೆಗೆದುಕೊಂಡಿದ್ದರೆ ಭಾರತ ಇಂದಿನ ದುಸ್ಥಿತಿಯನ್ನು ಎದುರಿಸುತ್ತಿರಲಿಲ್ಲ. ಮೋದಿಯವರೇ, ಈ ವೈಫಲ್ಯಕ್ಕೆ ಯಾರನ್ನು ದೂರುತ್ತೀರಿ ಎಂದು ಪ್ರಶ್ನಿಸಿದ್ದಾರೆ.

## ಸೇತುವೆ ಮೇಲಿಂದ ಜಿಗಿದು ಆತ್ಮಹತ್ಯೆ

**ಕಲಬುರಗಿ:** ಸೇತುವೆ ಮೇಲಿಂದ ಜಿಗಿದು ಯುವಕನೋರ್ವ ಆತ್ಮಹತ್ಯೆ ಮಾಡಿಕೊಂಡ ಘಟನೆ ಕಮಲಾಪುರ ತಾಲೂಕಿನ ಕುರಿಕೋಟಾ ಗ್ರಾಮದ ಸಮೀಪ ನಡೆದಿದೆ. ಶಹಾಬಾದ್ ತಾಲೂಕಿನ ನಂದೂರು ಗ್ರಾಮದ ಅಮರನಾಥ ನಿಂಗಣ್ಣ ದೊಡ್ಡಮನಿ (30) ಆತ್ಮಹತ್ಯೆ ಮಾಡಿಕೊಂಡ ಯುವಕ ಎಂದು ಗುರುತಿಸಲಾಗಿದೆ.



ಶುಕ್ರವಾರ ಸಂಜೆ ಮನೆಯಿಂದ ಹೊರಟು ಹೋದ ಅಮರನಾಥ, ಕುರಿಕೋಟಾ ಸೇತುವೆ ಬಳಿ ತನ್ನ ದ್ವಿಚಕ್ರ ವಾಹನ ನಿಲ್ಲಿಸಿ ಸೇತುವೆಯಿಂದ ಜಿಗಿದಿರುವುದನ್ನು ಸ್ಥಳೀಯರು ಗಮನಿಸಿದ್ದರು ಎನ್ನಲಾಗಿದೆ. ಶನಿವಾರ ಬೆಳಗ್ಗೆಯಿಂದ ಅಗ್ನಿಶಾಮಕ ದಳದ ಸಿಬ್ಬಂದಿ ಹುಡುಕಾಟ ಆರಂಭಿಸಿದ್ದು, ಭಾನುವಾರ ಮಧ್ಯಾಹ್ನ ಮೃತದೇಹ ಪತ್ತೆಯಾಗಿದೆ. ಘಟನಾ ಸ್ಥಳಕ್ಕೆ ಕಮಲಾಪುರ ಸಿಪಿಐ ಶಿವಶಂಕರ ಸಾಹು, ಮಹಾಗಾಂವ್ ಪಿಎಸ್‌ಐ ಬಸವರಾಜ್ ಚಿತ್ತಕೋಟೆ ಹಾಗೂ ವಿಶ್ವನಾಥ್ ಬಾಕಳೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಮಹಾಗಾಂವ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಈಜಲು ಹೋದವ ನೀರು ಪಾಲು

**ಭಾಲ್ಕಿ:** ತಾಲ್ಲೂಕಿನ ಡಾವರಗಾವ–ಜೊಳದಾಪಕಾ ರಸ್ತೆಯಲ್ಲಿರುವ ಕಾರಂಜಾ ಬಲ ಕಾಲುವೆಯಲ್ಲಿ ಈಜುಲು ಹೋದ ಜೊಳದಪಕಾ ಗ್ರಾಮದ ಬಾಲಕ ಸೋಹೈಲ್ ಶಬ್ಬೀರ್ ಷಾ (13) ಶನಿವಾರ ಮಧ್ಯಾಹ್ನ ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾನೆ. ಒಟ್ಟು ನಾಲ್ಕು ಜನ ಸ್ನೇಹಿತರು ಈಜಲು ಹೋಗಿದ್ದಾರೆ. ಉಳಿದ ಮೂವರು ಸ್ನೇಹಿತರಿಗೆ ಈಜಲು ಬರುತ್ತಿತ್ತು. ಆದರೆ ಮೃತ ಬಾಲಕನಿಗೆ ಈಜಲು ಬರುತ್ತಿರಲಿಲ್ಲ. ಹಾಗಾಗಿ ಈ ದುರ್ಘಟನೆ ನಡೆದಿದೆ ಎಂದು ತಿಳಿದು ಬಂದಿದೆ. ಈ ಸಂಬಂಧ ಮೃತ ಬಾಲಕನ ತಂದೆ ಶಬ್ಬೀರ್ ಮಕ್ಬುಲ್ ಷಾ ನೀಡಿದ ದೂರಿನ ಮೇರೆಗೆ ಧನ್ನೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಬೀದಿನಾಯಿ ಹಾವಳಿ ನಿಯಂತ್ರಣಕ್ಕೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ನನ್ನ ವಿಧಾನ ಸಭಾ ಕ್ಷೇತ್ರದ ಹುಮನಾಬಾದ ತಾಲೂಕಿನ ದಬಲಗುಂಡಿ ಗ್ರಾಮದಲ್ಲಿ ಮನೆಯ ಪಡಸಾಲೆಯಲ್ಲಿ ಮಲಗಿದ್ದ 5 ತಿಂಗಳ ಕಂದಮ್ಮನ ಮೇಲೆ ಬೀದಿ ನಾಯಿ ದಾಳಿ ಮಾಡಿದ್ದು, ಚಿಕಿತ್ಸೆ ಫಲಕಾರಿ ಆಗದೆ ಮೃತಪಟ್ಟಿರುವ ಬಗ್ಗೆ ಮಾಜಿ ಸಚಿವ ರಾಜಶೇಖರ ಪಾಟೀಲ ಕಂಬನಿ ಮಿಡಿದಿದ್ದಾರೆ.



ಮೃತ ಕಂದಮ್ಮನ ಕುಟುಂಬದವರೊಂದಿಗೆ ಈ ನೋವಿನ ಸಂದರ್ಭದಲ್ಲಿ ಸರ್ಕಾರ ನಿಲ್ಲುವಂತೆ ಮನವಿ ಮಾಡಲಾಗಿದೆ. ದೇವರು ಮೃತ ಮಗುವಿನ ಆತ್ಮಕ್ಕೆ ಚಿರಶಾಂತಿ ನೀಡಲಿ, ತಂದೆ ತಾಯಿಗಳಿಗೆ ಅಗಲಿಕೆಯ ನೋವನ್ನು ತಡೆದುಕೊಳ್ಳುವ ಶಕ್ತಿ ನೀಡಲಿ ಎಂದು ಪಾಟೀಲ ಪ್ರಾರ್ಥಿಸಿದ್ದಾರೆ.

ಕೂಡಲೇ ನೊಂದ ಕುಟುಂಬಕ್ಕೆ ಪರಿಹಾರ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ಜನರ ಮೇಲೆ ದಾಳಿ ಮಾಡುವ ಬೀದಿ ನಾಯಿಗಳನ್ನು ಗುರುತಿಸಿ ಕ್ರಮ ಕೈಗೊಳ್ಳುವಂತೆಯೂ ಅವರು ಸರ್ಕಾರಕ್ಕೆ ಒತ್ತಾಯ ಮಾಡಿದ್ದಾರೆ.

## ರಸ್ತೆ ಅಪಘಾತದಲ್ಲಿ ವಿದ್ಯಾರ್ಥಿ ದುರ್ಮರಣ

• ಮಲ್ಲಮ್ಮ ನುಡಿ ವಾರ್ತೆ ಜೇವರ್ಗಿ

ಚಿಗರಹಳ್ಳಿ ಮತ್ತು ಜೇವರ್ಗಿಯ ಮಧ್ಯೆ ರಸ್ತೆಯಲ್ಲಿ ಜಗದಂಬ ಪೆಟ್ರೋಲ್ ಪಂಪ್ ಹತ್ತಿರ ರಸ್ತೆಯಲ್ಲಿ ಯುವಕರು ತಮ್ಮ ದ್ವಿತೀಯ ಪಿಯುಸಿ ಪರೀಕ್ಷೆಯನ್ನ ಬರೆದು ಜೇವರ್ಗಿಯಿಂದ ಯಡ್ರಾಮಿ ಗ್ರಾಮಕ್ಕೆ ತೆರಳುವಾಗ ಶೌಚ ಮಾಡಲು ನಿಂತಿರುತ್ತಾರೆ ಆ ಸಂದರ್ಭದಲ್ಲಿ ಆದರ್ಶ ತಂದೆ ಮಡಿವಾಳಪ್ಪ ಗುರುಶೆಟ್ಟಿ ಎಂಬುವ ಯುವಕನ ಹಾಲ್ ಟಿಕೆಟ್ ಪರೀಕ್ಷೆ ಪ್ರವೇಶ ಪತ್ರ ಗಾಳಿಗೆ ಹಾರಿ ರಸ್ತೆ ಮಧ್ಯಬಿದ್ದಾಗ ಅದನ್ನು ತೆಗೆದುಕೊಳ್ಳಲು ಆದರ್ಶ ಎಂಬ ಯುವಕ ಓಡಿ ಹೋದಾಗ ಶಹಪುರ್ ಕಡೆಯಿಂದ ವೇಗವಾಗಿ ಬರ್ತಾ ಇದ್ದ ಶಿಫ್ಟ್ ಡಿಸೈರ್ ಕಾರ್ ಒಂದು ಸ್ಪೀಡ್ ಆಗಿ ಬಂದ ಕಾರಣದಿಂದ ಆ ಯುವಕನಿಗೆ ಡಿಕ್ಕಿ ಹೊಡೆದಿರುತ್ತದೆ ಕಾರಿನ ದಿಕ್ಕಿಯಿಂದಾಗಿ ಬಾಳಿ ಬದುಕಬೇಕಾದ 18ರ ಹರೆಯದ ಯುವಕ ಸ್ಥಳದಲ್ಲೇ ಸಾವನ್ನಪ್ಪಿರುತ್ತಾನೆ. ಜೇವರ್ಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಜಾರಿಯಲ್ಲಿದೆ.



## ಗ್ರಾಮೀಣ ಮಕ್ಕಳ ಬೇಸಿಗೆ ಶಿಬಿರಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ

ತಾಲೂಕಿನ ತಂಬ್ರಹಳ್ಳಿಯ ಅರಿವು ಕೇಂದ್ರದಲ್ಲಿ ಗ್ರಾಮೀಣ ಮಕ್ಕಳಿಗಾಗಿ ಉಚಿತ ಬೇಸಿಗೆ ಶಿಬಿರ ಕಾರ್ಯಕ್ರಮವನ್ನು ಸೋಮವಾರ ಹಮ್ಮಿಕೊಳ್ಳಲಾಗಿದ್ದು, ಆರಕ್ಷಕ ಠಾಣೆಯ ಪಿಎಸ್‌ಐ ಶ್ರೀ ನಾಗರಾಜ್ ಕೊಟಗಿ ಅವರು ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಮಕ್ಕಳಿಗೆ ರಸ್ತೆ ಸುರಕ್ಷತೆ ಬಗ್ಗೆ ಜಾಗೃತಿ ಮೂಡಿಸಿ, ರಸ್ತೆ ಮೇಲೆ ಸಂಚರಿಸುವಾಗ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು, ನಿಯಮಗಳನ್ನು ಉಲ್ಲಂಘಿಸಿದರೆ ಅಪಾಯಕ್ಕೆ ಸಿಲುಕುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಲಹಾ ಸಮಿತಿಯ ಸದಸ್ಯ ಹಾಗೂ ನಿವೃತ್ತ ಶಿಕ್ಷಕ ಬಣಕಾರ್ ಶಿವಾನಂದಪ್ಪ, ಬೇಸಿಗೆ ಅವಧಿಯಲ್ಲಿ ಇಂತಹ ಶಿಬಿರಗಳು ಮಕ್ಕಳಿಗೆ ಬಹಳ ಉಪಯುಕ್ತವಾಗುತ್ತವೆ. ಮಕ್ಕಳು ಕೆರೆಕಟ್ಟೆಗಳಿಗೆ ಹೋಗುವುದು ಅಥವಾ ಬಿಸಿಲಿನಲ್ಲಿ ಅಲೆಯುವುದನ್ನು ತಪ್ಪಿಸಿ, ಚಟುವಟಿಕೆಗಳ ಮೂಲಕ ಕಲಿತ ವಿಷಯಗಳನ್ನು ಪುನರಾವರ್ತನೆ ಮಾಡಿಕೊಳ್ಳಲು ಶಿಬಿರ ಸಹಾಯಕವಾಗುತ್ತದೆ ಎಂದರು.

ಲಕ್ಷ್ಮಿ ಮಾಲಾಶ್ರೀ ಎಚ್‌ಎಂ ಗೀತಾ ಅವರು ಪ್ರಾರ್ಥನೆ ಸಲ್ಲಿಸಿದರು. ಗ್ರಂಥಾಲಯ ಮೇಲ್ವಿಚಾರಕರಾದ ಟಿ. ಪಾಂಡುರಂಗಪ್ಪ ಅವರು ಶಿಬಿರದಲ್ಲಿ ನಡೆಯುವ ವಿವಿಧ ಅಧಿವೇಶನಗಳ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಗ್ರಂಥಾಲಯ ಸಲಹಾ ಸಮಿತಿಯ ಸದಸ್ಯರಾದ ಸುಣಗಾರ ಪರಶುರಾಮ್, ಗದ್ದಿಕೇರಿ ಆಶಾ, ಆರಕ್ಷಕ ಸಿಬ್ಬಂದಿಗಳಾದ ಪ್ರಸನ್ನ, ಚಿದಾನಂದಯ್ಯ, ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ಕೆ. ನಾಗರಾಜ ಹಾಗೂ ಕಡ್ಡಿ ಪ್ರಕಾಶ್ ಸೇರಿದಂತೆ ಮಕ್ಕಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.



**ಮನರಂಜನಾ ಚಟುವಟಿಕೆಯ ಮ್ಯೂಸಿಕಲ್ ಚೇರ್**
ಈ ಸಂದರ್ಭದಲ್ಲಿ ರಸ್ತೆ ಸುರಕ್ಷತೆ ಕುರಿತು ಉಪನ್ಯಾಸ ನೀಡಿದ ಪಿಎಸ್‌ಐ ನಾಗರಾಜ್ ಕೊಟಗಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ನಂತರ ಮಕ್ಕಳಿಗೆ ಮನರಂಜನಾ ಚಟುವಟಿಕೆಯಾಗಿ ಮ್ಯೂಸಿಕಲ್ ಚೇರ್ ಆಟವನ್ನು ಆಯೋಜಿಸಲಾಯಿತು.

## ಪಾಲಿಕೆ ಮುಂದೆ ಕಮ್ಯೂನಿಸ್ಟರಿಂದ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರ್ಗಿ

ನಗರದ ವಿವಿಧ ಬಡಾವಣೆಗಳಲ್ಲಿ ಕಲುಷಿತ ನೀರು ಪೂರೈಕೆಯಾಗುವುದನ್ನು ಖಂಡಿಸಿ ಭಾರತ ಕಮ್ಯುನಿಸ್ಟ್ ಪಕ್ಷದ ಕಾರ್ಯಕರ್ತರು ಸೋಮವಾರ ಮಹಾನಗರ ಪಾಲಿಕೆಯ ಮುಂದೆ ಪ್ರತಿಭಟನಾ ಪ್ರದರ್ಶನ ಮಾಡಿದರು.

ಪಕ್ಷದ ಜಿಲ್ಲಾ ಕಾರ್ಯದರ್ಶಿ ಡಾ. ಮಹೇಶಕುಮಾರ್ ರಾಠೋಡ್ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಪದ್ಮಾವತಿ ಎನ್. ಮಾಲಿಪಾಟೀಲ್, ಮೀನಾಕ್ಷಿ ಹಿಪ್ಪರಗಿ, ಜಗದೇವಿ ಕುಂಬಾರ್, ಉಷಾ ಭಜಂತ್ರಿ, ವಿಜಯಲಕ್ಷ್ಮೀ ದನ್ನೂರ್, ಅರುಣಾ, ಪ್ರಭಾವತಿ ಆಲಮೇಲ್, ಜ್ಯೋತಿ ಶಹಾಪುರ, ಸಂಗೀತಾ ಸಜ್ಜನ್, ಸುಷ್ಮಿತಾ ಸಜ್ಜನ್, ಪೂನಾ ಠಾಕೂರ್, ಸುಜಾತಾ ಪಾಟೀಲ್, ಜ್ಞಾನೇಶ್ವರಿ ಮಠ, ಕೋಕಿಲಾ, ಶಾಲಿನಿ, ಜಗದೇವಿ ಹೆಗಡೆ, ಶ್ರೀದೇವಿ ಎಸ್. ನೆಲೋಗಿ ಮುಂತಾದವರು ಪಾಲ್ಗೊಂಡಿದ್ದರು. ಪ್ರತಿಭಟನೆಕಾರರು ನಂತರ ಪಾಲಿಕೆಯ ಆಯುಕ್ತರಿಗೆ ಮನವಿ ಪತ್ರ ಸಲ್ಲಿಸಿ, ನಗರದ ಮತ್ತು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದೆ. ಅದನ್ನು ನಿರ್ವಹಿಸಲು ಮಹಾನಗರ ಪಾಲಿಕೆ ಮತ್ತು ಜಿಲ್ಲಾ ಪಂಚಾಯಿತಿ ಆಡಳಿತ ಸಂಪೂರ್ಣ ವಿಫಲವಾಗಿದ್ದು, ಜನರು ಶುದ್ಧವಾದ ಕುಡಿಯುವ ನೀರು ಸಿಗದೇ ತತ್ತರಿಸುವಂತಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ನಗರ ಸೇರಿದಂತೆ, ತಾಲ್ಲೂಕಿನ ಹಲವು ಗ್ರಾಮಗಳು ಕುಡಿಯುವ ನೀರಿಗಾಗಿ ದಿನಗಟ್ಟಲೇ ಒಡಾಡುವ ಪರಿಸ್ಥಿತಿ ಬಂದಿದೆ. ನೀರು ದೊರೆತರೂ ಸಹ ಆ ನೀರು ಗಡಸು ನೀರಾಗಿದ್ದು ಕುಡಿಯಲು ಯೋಗ್ಯವಾಗಿಲ್ಲ. ಆದ್ದರಿಂದ ಕೂಡಲೇ ಸಮಸ್ಯೆ ಇತ್ಯರ್ಥಕ್ಕೆ ಮುಂದಾಗಬೇಕೆಂದು ಅವರು ಒತ್ತಾಯಿಸಿದರು.



ಅಧಿಕಾರಿಗಳು ಎಸಿ ಕಚೇರಿಗಳಲ್ಲಿ ಕುಳಿತು. ಎಸಿ ವಾಹನಗಳಲ್ಲಿ ಒಡಾಡುತ್ತ ಕಾಲಹರಣ ಮಾಡುತ್ತಿದ್ದಾರೆ. ಮೇಲಾಧಿಕಾರಿಗಳಿಗೆ ತೋರಿಸಲು ಕಾಟಾಚಾರಕ್ಕೆ ಕೆಲಸ ಮಾಡುತ್ತಿದ್ದಾರೆ. ಆದ್ದರಿಂದ ನಗರಾಡಳಿತ ಕೂಡಲೇ ಅಧಿಕಾರಿಗಳ ತಂಡಗಳನ್ನು ನೀರಿನ ಸಮಸ್ಯೆ ಇರುವ ಪ್ರತಿ ವಾರ್ಡಗಳೂ ಸೇರಿದಂತೆ ನಗರಕ್ಕೆ ಹತ್ತಿಕೊಂಡಿರುವ ಹೊಸ ಬಡಾವಣೆಗಳಿಗೂ ಭೇಟಿ ಕೊಟ್ಟು ಅಲ್ಲಿಯ ಜನರ ಸಮಸ್ಯೆಗಳನ್ನು ಆಲಿಸಿ ತಕ್ಷಣಕ್ಕೆ ಟ್ಯಾಂಕರ್ ವ್ಯವಸ್ಥೆ ಸೇರಿದಂತೆ ಅವಶ್ಯವಿರುವ ಎಲ್ಲ ರೀತಿಯ ವ್ಯವಸ್ಥೆ ಮಾಡಬೇಕೆಂದು ಅವರು ಒತ್ತಾಯಿಸಿದರು.

ಇದೇ ಸಂದರ್ಭವನ್ನು ಬಳಸಿಕೊಂಡು ಅಧಿಕಾರಿಗಳು ಜನರ ನೀರಿನ ಹೆಸರಿನಲ್ಲಿ ಟ್ಯಾಂಕರ್ ಸರಬರಾಜು ಮಾಡುತ್ತಿದ್ದೇವೆಂದು ಅಧಿಕಾರಿಗಳೂ ಸುಳ್ಳು ವರದಿಗಳನ್ನು ಸಲ್ಲಿಸಿ, ನೀರಿನ ಹೆಸರಿನಲ್ಲಿಯೂ ಭ್ರಷ್ಟಾಚಾರ ಮಾಡುತ್ತಿರುವ ಅಮಾನವೀಯತೆಯುಳ್ಳ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸಿ ಅಂತಹ ಅಧಿಕಾರಿಗಳನ್ನು ಕೆಲಸದಿಂದ ವಜಾ ಮಾಡಬೇಕೆಂದು ಅವರು ಆಗ್ರಹಿಸಿದರು.

## ರಾಜಕೀಯ ಹೊರತಾಗಿ ಮೋದಿಯವರ ಮಾತು ಅರ್ಥಮಾಡಿಕೊಳ್ಳಿ: ಬಿವೈ ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

## ದೇಶಕ್ಕೆ ಅನ್ನ ಹಾಕುವ ರೈತರ ನೆರವಿಗೆ ಸರ್ಕಾರ ಮುಂದೆ ಬರಬೇಕು

ಭಾರತ ಕೃಷಿ ಪ್ರಧಾನ ದೇಶ. ದೇಶದ ಆರ್ಥಿಕತೆ, ಜನರ ಜೀವನ ಮತ್ತು ಆಹಾರ ಭದ್ರತೆ ಎಲ್ಲವೂ ರೈತರ ಮೇಲೆ ಅವಲಂಬಿತವಾಗಿವೆ. ರೈತನು ಹೊಲದಲ್ಲಿ ಬೆವರು ಸುರಿಸಿದಾಗಲೇ ದೇಶದ ಪ್ರತಿಯೊಬ್ಬರ ಮನೆಗೆ ಅನ್ನ ತಲುಪುತ್ತದೆ. ಇಂತಹ ಅನ್ನದಾತರ ಬದುಕು ಇಂದು ಸಂಕಷ್ಟದ ನಡುವೆ ಸಾಗುತ್ತಿರುವುದು ವಿಷಾದನೀಯ ಸಂಗತಿ.

### ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೊ: 9845028349



ಅಕಾಲಿಕ ಮಳೆ, ಬರ, ಬೆಳೆ ನಾಶ, ಸಾಲದ ಬಾಧೆ, ರಾಸಾಯನಿಕ ಗೊಬ್ಬರ ಮತ್ತು ಬೀಜಗಳ ಬೆಲೆ ಏರಿಕೆ ಸೇರಿದಂತೆ ಅನೇಕ ಸಮಸ್ಯೆಗಳು ರೈತರನ್ನು ಕಂಗೆಡಿಸಿವೆ. ಬೆಳೆ ಬೆಳೆದರೂ ಸರಿಯಾದ ಬೆಲೆ ಸಿಗದೇ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಕೆಲವೊಮ್ಮೆ ಬೆಳೆದ ಬೆಳೆಯನ್ನು ರಸ್ತೆ ಬದಿಯಲ್ಲಿ ಸುರಿಯುವ ಪರಿಸ್ಥಿತಿಯೂ ನಿರ್ಮಾಣವಾಗುತ್ತಿದೆ. ಇದು ದೇಶದ ಕೃಷಿ ವ್ಯವಸ್ಥೆಯ ದುಸ್ಥಿತಿಯನ್ನು ತೋರಿಸುತ್ತದೆ.

ರೈತರಿಗೆ ಕೇವಲ ಘೋಷಣೆಗಳು ಸಾಕಾಗುವುದಿಲ್ಲ. ಸರ್ಕಾರಗಳು ನೇರವಾಗಿ ರೈತರ ನೆರವಿಗೆ ಬರಬೇಕು. ಬೆಳೆ ವಿಮೆ ಯೋಜನೆಗಳನ್ನು ಸರಳಗೊಳಿಸಿ, ನಷ್ಟವಾದ ಬೆಳೆಗಳಿಗೆ ತಕ್ಷಣ ಪರಿಹಾರ ನೀಡಬೇಕು. ಕೃಷಿ ಸಾಲ ಮನ್ನಾ, ಉಚಿತ ಅಥವಾ ಕಡಿಮೆ ದರದಲ್ಲಿ ವಿದ್ಯುತ್, ನೀರಾವರಿ ಸೌಲಭ್ಯ, ಗುಣಮಟ್ಟದ ಬೀಜ ಹಾಗೂ ರಾಸಾಯನಿಕ ಗೊಬ್ಬರಗಳನ್ನು ಒದಗಿಸುವುದು ಅತ್ಯವಶ್ಯಕ.

ಇದರ ಜೊತೆಗೆ ರೈತರು ಬೆಳೆದ ಬೆಳೆಗೆ ನ್ಯಾಯಯುತ ಬೆಂಬಲ ಬೆಲೆ ನೀಡಬೇಕು. ಮಧ್ಯವರ್ತಿಗಳ ಹಾವಳಿಯನ್ನು ತಡೆದು ರೈತರಿಗೆ ನೇರ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಶೀತಗೃಹ, ಗೋದಾಮು ಹಾಗೂ ಕೃಷಿ ಸಂಸ್ಕರಣಾ ಘಟಕಗಳನ್ನು ನಿರ್ಮಿಸಿದರೆ ರೈತರಿಗೆ ಹೆಚ್ಚಿನ ಲಾಭ ದೊರೆಯುತ್ತದೆ.

ರೈತರು ಉಳಿದರೆ ದೇಶ ಉಳಿಯುತ್ತದೆ ಎನ್ನುವುದು ಕೇವಲ ಮಾತಲ್ಲ, ಅದು ನಿಜವಾದ ಸತ್ಯ. ದೇಶದ ಜನರಿಗೆ ಅನ್ನ ನೀಡುವ ರೈತರ ಬದುಕು ಸುರಕ್ಷಿತವಾಗಿದ್ದಾಗ ಮಾತ್ರ ದೇಶ ಅಭಿವೃದ್ಧಿಯ ದಾರಿಗೆ ಸಾಗಲು ಸಾಧ್ಯ. ಆದ್ದರಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರಾಜಕೀಯ ಬದಿಗಿಟ್ಟು ರೈತರ ಸಂಕಷ್ಟಗಳಿಗೆ ಸ್ಪಂದಿಸಿ, ಅನ್ನದಾತರ ಬದುಕು ಹಸನಾಗಿಸಲು ಶಾಶ್ವತ ಯೋಜನೆಗಳನ್ನು ಜಾರಿಗೆ ತರಬೇಕು.

## ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

**ಕಲಬುರಗಿ:** ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಬೆಂಗಳೂರಿನಿಂದ ರೈಲಿನ ಮೂಲಕ ಮೇ 12 ರಂದು ಬೆಳಿಗ್ಗೆ 5.45 ಗಂಟೆಗೆ ಕಲಬುರಗಿಗೆ ಆಗಮಿಸುವರು. ನಂತರ ಕಲಬುರಗಿ ಹಾಗೂ ಸೇಡಂಗಳಲ್ಲಿ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು.

## ಉಚಿತ ಕೌಶಲ್ಯ ತರಬೇತಿ: ಅರ್ಜಿ ಆಹ್ವಾನ

**ಕಲಬುರಗಿ:** ಮೈಸೂರು ಕೇಂದ್ರ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಆಂಡ್ ಟೆಕ್ನಾಲಜಿ ಸಂಸ್ಥೆ (CIPET) ವತಿಯಿಂದ ಪ್ರಧಾನಮಂತ್ರಿ ಕೌಶಲ್ ವಿಕಾಸ್ ಯೋಜನೆ (ಪಿ.ಎಮ್.ಕೆ.ವಿ.ವೈ.4.0) ಅಡಿ "ಮೆಷಿನ್ ಆಪರೇಟರ್ ಆಂಡ್ ಪ್ರೊಗ್ರಾಮರ್–ಸಿಎಸಿ ಮಿಲ್ಲಿಂಗ್" ವಿಷಯದಲ್ಲಿ ಉಚಿತವಾಗಿ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಇದಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ನಿರ್ದೇಶಕರು ತಿಳಿಸಿದ್ದಾರೆ.

ಪಿ.ಯು.ಸಿ., ಐಟಿಐ, ಡಿಪ್ಲೋಮಾ ಹಾಗೂ ಯಾವುದೇ ಪದವಿ ಪಾಸಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಈ ತರಬೇತಿ ಅವಧಿಯಲ್ಲಿ ಉಚಿತ ಆಹಾರ ಹಾಗೂ ವಸತಿ ಸೌಲಭ್ಯ ಒದಗಿಸಲಾಗುತ್ತದೆ. ತರಬೇತಿ ಅವಧಿ ಮೂರುವರೆ ತಿಂಗಳು ಇದ್ದು, ಈ ತರಬೇತಿಯು 2026ರ ಮೇ 18 ರಿಂದ ತರಬೇತಿ ಪ್ರಾರಂಭವಾಗಲಿದೆ. ಮತ್ತಿತರ ಹೆಚ್ಚಿನ ಮಾಹಿತಿಗಾಗಿ CIPET: CSTS, Mysuru 437/ಂ, ಹೆಬ್ಬಾಳ ಕೈಗಾರಿಕಾ ಪ್ರದೇಶ, ಮೈಸೂರು– 570016 ಹಾಗೂ ಮೊಬೈಲ್ ಸಂಖ್ಯೆ 9483431968 / 9739196375 ಹಾಗೂ www.cipet.gov.in ಗೆ ವೆಬ್‌ಸೈಟ್‌ಗೆ ಸಂಪರ್ಕಿಸಲು ಕೋರಲಾಗಿದೆ.

## ಸಂಪನ್ಮೂಲ ವ್ಯಕ್ತಿಗಳಾಗಿ ಬೋಧನೆ ಮಾಡಲು ಅರ್ಜಿ

**ಕಲಬುರಗಿ:** ಮೈಸೂರು(ಕಾವಾ) ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು ಸಂಸ್ಥೆಯಲ್ಲಿ 2026–27ನೇ ಶೈಕ್ಷಣಿಕ ಸಾಲಿಗೆ ಮಾತ್ರ ಗೌರವ ಸಂಭಾವನೆ ಆಧಾರದ ಮೇಲೆ (ಷರತ್ತು ಹಾಗೂ ನಿಬಂಧನೆಗೊಳಪಟ್ಟು) ಅತಿಥಿ ಉಪನ್ಯಾಸಕ/ಸಂಪನ್ಮೂಲ ವ್ಯಕ್ತಿಗಳಾಗಿ ಬೋಧನೆ ಮಾಡಲು ಇಚ್ಛೆಯುಳ್ಳ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಮೈಸೂರು (ಕಾವಾ) ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜಿನ ಡೀನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅನ್ವಯಕಲೆ, ಚಿತ್ರಕಲೆ, ಶಿಲ್ಪಕಲೆ, ಅಚ್ಚುಕಲೆ(ಗ್ರಾಫಿಕ್ಸ್), ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ, ಕಲಾ ಇತಿಹಾಸ, ಕನ್ನಡ, ಇಂಗ್ಲೀಷ, ಹಿಂದಿ, ಭಾರತ ಮತ್ತು ಭಾರತೀಯ ಸಂವಿಧಾನ ಹಾಗೂ ಸಂವಿಧಾನದ ಮೌಲ್ಯಗಳು, ಪರಿಸರ ಅಧ್ಯಯನ ವಿಷಯಗಳಲ್ಲಿ ಬೋಧನೆ ಮಾಡಲು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹ ಅಭ್ಯರ್ಥಿಗಳು https://www.cavamysore.karnataka.gov.in ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ 2026ರ ಮೇ 15 ರ ಸಂಜೆ 5.30 ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬೇಕು. ಮೇ 19 ರಂದು ಬೆಳಿಗ್ಗೆ 11 ಗಂಟೆಗೆ ಸಂಸ್ಥೆಯಲ್ಲಿ ಸಂದರ್ಶನ ನಡೆಯಲಿದೆ.

ಆಸಕ್ತಿಯುಳ್ಳ ಅಭ್ಯರ್ಥಿಗಳು www.mysore.nic.in ºÁUÀÆ https://www.cavamysore.karnataka.gov.in ವೆಬ್‌ಸೈಟ್‌ನಲ್ಲಿ ಹಾಗೂ ಕಚೇರಿ ಸಹಾಯವಾಣಿಗೆ ಕಚೇರಿ ಸಮಯದಲ್ಲಿ 0821–2438931 ಗೆ ಸಂಪರ್ಕಿಸಲು ಕೋರಲಾಗಿದೆ.

# ಆನೆಕಾಲು ರೋಗ ಪತ್ತೆಗಾಗಿ ರಾತ್ರಿ ರಕ್ತ ಲೇಪನ ಸಮೀಕ್ಷೆ





• ಮಲ್ಲಮ್ಮ ನುಡಿ ವಾರ್ತೆ ಬೀದರ

ತಾಲೂಕಿನ ಶಿರ್ಸಿ (ಎ) ಗ್ರಾಮದಲ್ಲಿ ಆನೆಕಾಲು ರೋಗ ಪತ್ತೆಗಾಗಿ ರಾತ್ರಿರಕ್ತ ಲೇಪನ ಸಮೀಕ್ಷೆಯನ್ನು ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಡಾ.ಧ್ಯಾನೇಶ್ವರ ನೀರಗುಡೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಬೀದರ ಹಾಗು ಡಾ. ಶಂಕ್ರೆಪ್ಪಾ ಬೊಮ್ಮ ಜಿಲ್ಲಾ ಸರ್ವೇಕ್ಷಣ ಅಧಿಕಾರಿಗಳು ಬೀದರ ರವರ ನಿರ್ದೇಶನದಂತೆ ದಿನಾಂಕ 9–5–2026 ರಂದು ಶಿರ್ಸಿ (ಎ) ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಬಗದಲ್ ವತಿಯಿಂದ ಆನೆಕಾಲು ರೋಗ (ಲಿಂಫಾಟಿಕ್ ಫೈಲೇರಿಯಾಸಿಸ್) ನಿಯಂತ್ರಣಕ್ಕಾಗಿ ಹಮ್ಮಿಕೊಳ್ಳಲಾಗಿದ್ದ ರಾತ್ರಿರಕ್ತ ಲೇಪನ ಮಾದರಿ ಸಂಗ್ರಹಣೆ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ರಾತ್ರಿ ಸಮೀಕ್ಷೆಯ ಮಹತ್ವದ ಕುರಿತು ಜಿಲ್ಲಾ ಆನೆಕಾಲು ರೋಗ ನಿಯಂತ್ರಣ ಘಟಕ ಬೀದರ ಕಚೇರಿಯ ಮೇಲ್ವಿಚಾರಕರಾದ ವೀರಶೆಟ್ಟಿ ಚನ್ನಶೆಟ್ಟಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳು ಆನೆಕಾಲು ರೋಗಕ್ಕೆ ಕಾರಣವಾಗುವ ಮೈಕ್ರೋಫೈಲೇರಿಯಾ ಎಂಬ ಸೂಕ್ಷ್ಮ ರೋಗಾಣುಗಳು ಹಗಲಿನಲ್ಲಿ ಶ್ವಾಸಕೋಶದ ಆಳದಲ್ಲಿ ಅಡಗಿದ್ದು, ಕೇವಲ ರಾತ್ರಿ ವೇಳೆ ಮಾತ್ರ ದೇಹದ ರಕ್ತ ಪರಿಚಲನೆಯಲ್ಲಿ ಸಕ್ರಿಯವಾಗಿರುತ್ತವೆ. ಈ ಕಾರಣಕ್ಕಾಗಿ ಸೋಂಕನ್ನು ನಿಖರವಾಗಿ ಪತ್ತೆ ಹಚ್ಚಲು ರಾತ್ರಿಯ ವೇಳೆಯೇ ರಕ್ತದ ಮಾದರಿಯನ್ನು ರಾತ್ರಿ 10 ಗಂಟೆಯ ನಂತರ ಸಂಗ್ರಹಿಸಲಾಗುತ್ತದೆ ಎಂದು ತಿಳಿಸಿದರು.

ಮುಂಜಾಗ್ರತಾ ಕ್ರಮದ ಬಗ್ಗೆ ಮಹಮ್ಮದ್ ಹಾದಿ ತಬರೆಜ್ ಆರೋಗ್ಯ ನಿರೀಕ್ಷಣಾಧಿಕಾರಿಗಳು ಸೊಳ್ಳೆಗಳಿಂದ ರಕ್ಷಣೆ ಪಡೆಯಲು ಸೊಳ್ಳೆ ಪರದೆ ಬಳಸುವುದು ಮತ್ತು ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವುದು ಹಾಗೂ ಆನೆಕಾಲು ರೋಗವು ಕ್ಯೂಲೆಕ್ಸ್ ಜಾತಿಯ ಹೆಣ್ಣು ಸೊಳ್ಳೆ ಕಚ್ಚುವುದರಿಂದ ಹರಡುತ್ತದೆ ಭಾರತವನ್ನು 2027 ರ ವೇಳೆಗೆ ಆನೆಕಾಲು ರೋಗ ಮುಕ್ತವಾಗಿಸುವ ಉದ್ದೇಶದಿಂದ ಈ ಜಾಗೃತಿ ಮತ್ತು ಪರೀಕ್ಷಾ ಅಭಿಯಾನವನ್ನು ನಡೆಸಲಾಗುತ್ತಿದೆ ಎಂದು ಹೇಳಿದರು.

ಜಿಲ್ಲೆಯ ಮೇಲ್ವಿಚಾರಕರಾದ ಅಬುಬಕರ್ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ತಂಡವು ರಚಿಸಿ ಶಿರ್ಸಿ ಗ್ರಾಮದ ವಿವಿಧ ಮನೆಗಳಿಗೆ ಭೇಟಿ ನೀಡಿ ಸಾರ್ವಜನಿಕರಿಂದ ರಕ್ತದ ಮಾದರಿಯನ್ನು ಪಡೆದು ಸಮೀಕ್ಷೆಯಲ್ಲಿ ಸೋಂಕು ಪತ್ತೆಯಾದ ವ್ಯಕ್ತಿಗಳಿಗೆ ತಕ್ಷಣವೇ ಉಚಿತ ಚಿಕಿತ್ಸೆ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಸಮಿಯೋದ್ದಿನ್, ನಂದಕುಮಾರ, ಶಿವಕುಮಾರ, ಸಮುದಾಯ ಆರೋಗ್ಯ ಅಧಿಕಾರಿಗಳಾದ ರಿಟ್ಟಾ, ಶಿವಲಿಲಾ, ಪ್ರಾರ್ಥನಾ, ಶಿಲ್ಪಾ, ಸುವರ್ಣಾ, ಗ್ಲೊರಿ, ರಾಣಿಬಾಯಿ, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳಾದ ಶ್ರೀದೇವಿ, ಆಶಾಲತಾ, ನೇಹಾಕುಮಾರಿ, ದೀಪಾಲಿ, ಗ್ರಾಮದ ಹಿರಿಯರು, ಆಶಾ ಕಾರ್ಯಕರ್ತೆಯರು ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಅರ್ಜಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

2026–27ನೇ ಸಾಲಿಗೆ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ "ಅರಿವು ಶೈಕ್ಷಣಿಕ" ಸಾಲ ಯೋಜನೆಯಡಿ ವಿದ್ಯಾಭ್ಯಾಸ ಸಾಲಕ್ಕಾಗಿ ಮತೀಯ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಕಲಬುರಗಿ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

ಮತೀಯ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್ಖರು, ಭೌದ್ಧರು, ಪಾರ್ಸಿ ಮತ್ತು ಆಂಗ್ಲೋ ಇಂಡಿಯನ್ ಜನಾಂಗಕ್ಕೆ ಸೇರಿದ ಸಿ.ಇ.ಟಿ/ನೀಟ್ ಪರೀಕ್ಷೆಗೆ ಆಯ್ಕೆಯಾದ ವಿವಿಧ ವೃತ್ತಿಪರ ಕೋರ್ಸಗಳಾದ ವೈದ್ಯಕೀಯ (ಎಮ್.ಬಿ.ಬಿ.ಎಸ್.) ಹಾಗೂ ಬಿ.ಡಿ.ಎಸ್, ಬಿಇ/ಬಿ–ಟೆಕ್, ಬ್ಯಾಚುಲರ್ ಆಫ್ ಆರ್ಕಟೆಕ್ಚರ್, ಫಾರ್ಮಸಿ, ಆಯುಶ್, ಕೃಷಿ ವಿಜ್ಞಾನ ಮತ್ತು ಪಶು ವೈದ್ಯಕೀಯ ಇಂತಹ ಪದವಿ ಕೋರ್ಸಗಳಿಗೆ ಆಯ್ಕೆಯಾದ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ "ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಸಾಲ ಪಡೆಯಲು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಹ ಅಭ್ಯರ್ಥಿಗಳು ನಿಗಮದ https//kmdconline.karnataka.gov.in ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ 2026ರ ಮೇ 30 ರೊಳಗಾಗಿ ಅರ್ಜಿ ಸಲ್ಲಿಸಬೇಕು. ನಂತರ ಅಭ್ಯರ್ಥಿಗಳು ಸದರಿ ಅರ್ಜಿಯ ಜೊತೆಗೆ ಆನ್‌ಲೈನ್‌ನಲ್ಲಿ ನೊಂದಾಯಿಸಿರುವ ಎಲ್ಲಾ ದಾಖಲಾತಿಗಳನ್ನು ಸದರಿ ಜಿಲ್ಲಾ ಕಚೇರಿಯಲ್ಲಿ 2026ರ ಜೂನ್ 6 ರೊಳಗಾಗಿ ಸಲ್ಲಿಸಬೇಕು.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ(ನಿ), ಎಸ್.ಆರ್. ರೆಸಿಡೆನ್ಸಿ, ಪ್ಲಾಟ್ ನಂ: 1881, ಮೊದಲನೆ ಮಹಡಿ, ಡಾ॥ ಎಲ್.ಎಸ್. ರಾಠಿ ಆಸ್ಪತ್ರೆ ಎದುರುಗಡೆ, ಜೇವರ್ಗಿ ರಸ್ತೆ, ಕಲಬುರಗಿ–585102 ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472–232425 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ಸಿಎಂ ಬದಲಾವಣೆ ಇಲ್ಲ: ಡಿಕೆ ಶಿವಕುಮಾರ

• ಮಲ್ಲಮ್ಮ ನುಡಿ ವಾರ್ತೆ ಮುದಗಲ್



ರಾಜ್ಯದ ರಾಜಕೀಯದಲ್ಲಿ ಸಧ್ಯ ಮುಖ್ಯಮಂತ್ರಿ ಸ್ಥಾನ ಬದಲಾವಣೆ ಇಲ್ಲ. ವಿರೋಧ ಪಕ್ಷದವರು ಊಹಾ ಪೋಹಗಳ ಮಾತು ಹೇಳುತ್ತಿದ್ದಾರೆ ಎಂದು ಉಪ ಮುಖ್ಯ ಡಿ.ಕೆ ಶಿವಕುಮಾರ ರವಿವಾರ ಹೇಳಿದರು.

ಲಿಂಗಸಗೂರು ಕ್ಷೇತ್ರದ ಮಾಜಿ ಶಾಸಕ ಡಿ.ಎಸ್ ಹೂಲಗೇರಿ ಅವರ ಮಗಳ ಮದುವೆ ಸಮಾರಂಭಕ್ಕೆ ಹೆಲಿಕ್ಯಾಪ್ಟರಲ್ಲಿ ಆಗಮಿಸಿದ ಸ್ಥಳದಲ್ಲಿಯೇ ಜಿಲ್ಲಾ ಸಶಸ್ತ್ರ ಪೋಲಿಸರಿಂದ ಗಾಢಫನ್ ಗೌರವ ಸಲ್ಲಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕಾಂಗ್ರೇಸ್ ಪಕ್ಷದ ಸಚಿವ ಸಂಪುಟದ ಆತ್ಮೀಯ ಸುಧಾಕರ ನಿಧನದಿಂದ ಪಕ್ಷಕ್ಕೆ ತುಂಬಲಾಗದ ನಷ್ಟವಾಗಿದೆ. ಆ ಭಗವಂತ ಅವರ ಆತ್ಮಕ್ಕೆ ಶಾಂತಿ ನೀಡಲಿ ಎಂದು ಪ್ರಾರ್ಥನೆ ಮಾಡಿದರು. ಕುಟುಂದ ಜೊತೆ ಸದಾ ನಮ್ಮ ಪಕ್ಷವಿರುತ್ತದೆ. ಯಾರು ಧೈರ್ಯ ಕಳೆದುಕೊಳ್ಳಬಾರದು. ಮುದಗಲ್ ಪಟ್ಟಣಕ್ಕೆ ಸಮರ್ಪಕ ಕುಡಿಯುವ ನೀರಿನ ಉಲ್ಬಣದ ವಿಷಯ ನನ್ನ ಗಮನಕ್ಕಿಲ್ಲ, ಸಂಭಂದ ಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು ಎಂದು ಹೇಳಿದರು. ನಂತರ ವೇದಿಕೆಯಲ್ಲಿ ವಧು ವರರಿಗೆ ಆಶೀರ್ವದಿಸಿ ಶುಭಾಶಯ ಕೋರಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ, ಮಸ್ಕಿ ಶಾಸಕ ಆರ್ ಬಸವನಗೌಡ ತುರುವಿಹಾಳ, ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪುರ, ಬಸವನಗೌಡ ಬಾದರ್ಲಿ, ಕುಷ್ಟಗಿ ಮಾಜಿ ಶಾಸಕ ಅಮರೇಗೌಡ ಪಾಟೀಲ್ ಬಯ್ಯಾಪುರ, ತುಂಗಭದ್ರ ಕಾಡಾ ಅಧ್ಯಕ್ಷ ಹಸನ್ ಸಾಬ ದೋಟಿಹಾಳ, ಎಸ್ಪಿ ಅರಣಾಂಶ್ಸುಗಿರಿ, ಸಿಇಓ ಈಶ್ವರ ಕುಮಾರ ಕಾಂದು, ಎ.ಸಿ ಬಸವಣ್ಣೆಪ್ಪ ಕಲಶೆಟ್ಟಿ, ತಹಶೀಲ್ದಾರ ಸತ್ಯಮ್ಮ, ವೆಂಕಟೇಶ ಮಾಡಗೇರಿ ಸೇರಿದಂತೆ ಇತರರಿದ್ದರು.

# ಅಕ್ರಮ ಖಾತಾ ಮ್ಯೂಟೇಶನ್ ಆರೋಪ: ತನಿಖೆಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಬೀದರ ಮಹಾನಗರ ಪಾಲಿಕೆಯ ವಲಯ–1 ಮತ್ತು ವಲಯ–2 ಆಯುಕ್ತರಾಗಿರುವ ಶ್ರೀ ನಾಗಣ್ಣಾ ಎಂ.ಪಿ. (ಕೆ.ಎಂ.ಎ.ಎಸ್) ಅವರು ಅಕ್ರಮವಾಗಿ ನಿರ್ಮಾಣಗೊಂಡಿರುವ ಲೇಔಟ್‌ಗಳಲ್ಲಿ ಸುಮಾರು 800 ಕ್ಕೂ ಹೆಚ್ಚು ಖಾತಾ ಮ್ಯೂಟೇಶನ್ ಹಾಗೂ ಡಿಜಿಟಲ್ ಖಾತಾಗಳನ್ನು ಮಾಡಿಕೊಟ್ಟಿರುವ ಕುರಿತು ಜಿಲ್ಲಾಧಿಕಾರಿಗಳಿಗೆ ವಿವಿಧ ಸಂಘಟನೆಗಳ ಮುಖಂಡರು ದೂರು ಸಲ್ಲಿಸಿದ್ದಾರೆ.

ಬೀದರ ನಗರಸಭೆ ಮಹಾನಗರ ಪಾಲಿಕೆಯಾಗಿದ ನಂತರ ಗ್ರಾಮೀಣ ಭಾಗದ ಸುಮಾರು 16 ಗ್ರಾಮಗಳನ್ನು ಪಾಲಿಕೆಗೆ ಸೇರ್ಪಡೆ ಮಾಡಲಾಗಿದ್ದು, ಈ ಹಿನ್ನೆಲೆ ನಗರ ಪ್ರದೇಶಗಳಲ್ಲಿ ಭೂಮಿ ಹಾಗೂ ನಿವೇಶನಗಳ ಮೌಲ್ಯ ಹೆಚ್ಚಾಗಿದೆ. ಈ ಪರಿಸ್ಥಿತಿಯನ್ನು ದುರುಪಯೋಗಪಡಿಸಿಕೊಂಡು ಕೆಲ ಭ್ರಷ್ಟ ಅಧಿಕಾರಿಗಳು ಅಕ್ರಮ ಚಟುವಟಿಕೆಗಳಲ್ಲಿ ತೊಡಗಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಅಕ್ರಮ ಲೇಔಟ್‌ಗಳಲ್ಲಿ ಕೃಷಿ ಭೂಮಿಯನ್ನು ನಿವೇಶನಗಳಾಗಿ ಪರಿವರ್ತಿಸಿ, ಪ್ರತಿಯೊಂದು ಖಾತಾ ಮ್ಯೂಟೇಶನ್ ಮತ್ತು ಡಿಜಿಟಲ್ ಖಾತಾಗಳಿಗಾಗಿ ರೂ.50 ಸಾವಿರದಿಂದ ರೂ.1 ಲಕ್ಷದವರೆಗೆ ಹಣ ಪಡೆದು ಖಾತಾಗಳನ್ನು ಮಂಜೂರು ಮಾಡಲಾಗಿದೆ ಎಂದು ಸಂಘಟನೆಗಳು ಗಂಭೀರ ಆರೋಪ ಮಾಡಿವೆ.

ವಲಯ–2 ಆಯುಕ್ತರಾಗಿ ಬಂದ ನಂತರ ನಾಗಣ್ಣಾ ಎಂ.ಪಿ. ಅವರು ವಲಯ–1 ರ ಪ್ರಭಾರಿಯನ್ನೂ ವಹಿಸಿಕೊಂಡು, ಬೀದರ ನಗರ ಹಾಗೂ ಹೊಸದಾಗಿ ಸೇರ್ಪಡೆಗೊಂಡ ಗ್ರಾಮಗಳಲ್ಲಿನ ಆಸ್ತಿಗಳಿಗೆ ಅಕ್ರಮವಾಗಿ ಖಾತಾಗಳನ್ನು ನೀಡಿರುವುದರಿಂದ ಸರ್ಕಾರಕ್ಕೆ ನೂರಾರು ಕೋಟಿ ರೂಪಾಯಿ ನಷ್ಟ ಉಂಟಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಈ ಕುರಿತು ತಕ್ಷಣ ತನಿಖಾ ಸಮಿತಿ ರಚಿಸಿ, ಅಕ್ರಮವಾಗಿ ನೀಡಿರುವ ಖಾತಾ ಮ್ಯೂಟೇಶನ್ ಹಾಗೂ ಡಿಜಿಟಲ್ ಖಾತಾಗಳನ್ನು ರದ್ದುಪಡಿಸಿ, ಸಂಬಂಧಪಟ್ಟ ಅಧಿಕಾರಿಯನ್ನು ಅಮಾನತು ಮಾಡಬೇಕೆಂದು ಸಂಘಟನೆಗಳ ನಾಯಕರು ಆಗ್ರಹಿಸಿದ್ದಾರೆ.

ಒಂದು ವಾರದೊಳಗೆ ಕ್ರಮ ಕೈಗೊಳ್ಳದಿದ್ದಲ್ಲಿ ಬೀದರ ಮಹಾನಗರ ಪಾಲಿಕೆ ಎದುರು ಧರಣಿ ಸತ್ಯಾಗ್ರಹ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ರಾಷ್ಟ್ರೀಯ ದಲಿತ ಬ್ರಿಗೇಡ್ ಜಿಲ್ಲಾಧ್ಯಕ್ಷರಾದ ಅವಿನಾಶ ದೀನೆ, ಯುವ ಘಟಕ ರಾಜ್ಯಾಧ್ಯಕ್ಷರಾದ ಶಿವ ಜೀರ್ಗೆ, ಜೈ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷರು ಕಲ್ಯಾಣರಾವ ಗುನಳ್ಳಿಕರ, ಸಂಜು ಲಕ್ಷೀದೊಡ್ಡೆ, ಲಕ್ಷ್ಮಣ ಕಾಂಬಳೆ, ಮೋಹನ ಸಾಗರ, ಸಂತೋಷ ಪಾಟೀಲ, ಪ್ರದೀಪ ಸಾಗರ ಸೇರಿದಂತೆ ಇನ್ನಿತ್ತರರು ಉಪಸ್ಥಿತರಿದ್ದರು.

# ಕರ್ನಾಟಕ ಸ್ವಾಭಿಮಾನ ನಡಿಗೆ: ವೀಣಾ.ಎಸ್

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಲಿಂಗತ್ವ ಮತ್ತು ಲೈಂಗಿಕ ಅಲ್ಪಸಂಖ್ಯಾತರ ಹಕ್ಕುಗಳ ರಕ್ಷಣೆ, ಸ್ವ–ಗುರುತಿನ ಗೌರವ ಹಾಗೂ ಸಂವಿಧಾನಾತ್ಮಕ ಹಕ್ಕುಗಳ ಪರವಾಗಿ "ಕರ್ನಾಟಕ ಸ್ವಾಭಿಮಾನ ನಡಿಗೆ–2026" ಕಾರ್ಯಕ್ರಮವು ನಾಳೆ(ಮೇ 13ರಂದು ಬುಧವಾರ) ಬೀದರ್‌ನಲ್ಲಿ ನಡೆಯಲಿದೆ ಎಂದು ಸಂಗಮ ಸಂಸ್ಥೆಯ ವಲಯ ಸಂಯೋಜಕಿ ವೀಣಾ.ಎಸ್ ತಿಳಿಸಿದರು.

ಸೋಮವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ನಾಳೆ ಬೆಳಗ್ಗೆ 11 ಗಂಟೆಗೆ ನಗರದ ಅಂಬೇಡ್ಕರ್ ವೃತ್ತದಿಂದ ಸ್ವಾಭಿಮಾನ ನಡಿಗೆ ಆರಂಭವಾಗಲಿದ್ದು, ಬಳಿಕ ಮಧ್ಯಾಹ್ನ 12:30ಕ್ಕೆ ಮೈಲೂರು ಕ್ರಾಸ್‌ನಲ್ಲಿರುವ ಹೋಟಲ ಕೃಷ್ಣ ರೆಸಿಡೆನ್ಸಿಯಲ್ಲಿ ಅವರಣದಲ್ಲಿ ಸಾರ್ವಜನಿಕ ಸಭೆ ನಡೆಯಲಿದೆ. ಸಮುದಾಯದ ಸದಸ್ಯರು, ಬೆಂಬಲಿಗರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಈ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಎಂದರು.

ಜೂನ್ 29, 1969ರಂದು ಅಮೆರಿಕದ ನ್ಯೂಯಾರ್ಕ್ ನಗರದ ಗ್ರೀನ್ವಿಚ್ ಪ್ರದೇಶದ ಸ್ಟೋನ್ವಾಲ್ ಇನ್ ಮೇಲೆ ನಡೆದ ಪೊಲೀಸ್ ದಾಳಿ ಮತ್ತು ಅದರ ವಿರುದ್ಧ ಲಿಂಗತ್ವ ಹಾಗೂ ಲೈಂಗಿಕ ಅಲ್ಪಸಂಖ್ಯಾತ ಸಮುದಾಯದ ಪ್ರತಿರೋಧವು ಜಾಗತಿಕ ಪ್ರೈಡ್ ಚಳುವಳಿಗೆ ನಾಂದಿ ಹಾಡಿತ್ತು. ಅದರ ಸ್ಮರಣಾರ್ಥ ಪ್ರತಿ ವರ್ಷ ಪ್ರೈಡ್ ಅಥವಾ ಸ್ವಾಭಿಮಾನ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಬೀದರ್‌ನಲ್ಲಿ ಈ ವರ್ಷ ಎರಡನೇ ಬಾರಿ ಈ ನಡಿಗೆ ನಡೆಯುತ್ತಿದೆ ಎಂದರು.

ಕಳೆದ ದಶಕದಲ್ಲಿ ಒಂದೇ ಲಿಂಗದ ವ್ಯಕ್ತಿಗಳ ನಡುವಿನ ಸಮ್ಮತಿಯ ಲೈಂಗಿಕ ಸಂಬಂಧಗಳ ನಿರಪರಾಧೀಕರಣ, ಲಿಂಗತ್ವ ಅಲ್ಪಸಂಖ್ಯಾತರ ಗುರುತಿನ ಮಾನ್ಯತೆ ಹಾಗೂ ಕರ್ನಾಟಕದಲ್ಲಿ ಸರ್ಕಾರಿ ಉದ್ಯೋಗಗಳಲ್ಲಿ 1% ಮೀಸಲಾತಿ ಸೇರಿದಂತೆ ಹಲವು ಮಹತ್ವದ ಸಾಧನೆಗಳು ಸಾಧ್ಯವಾಗಿವೆ. ಆದರೆ, ಕೇಂದ್ರ ಸರ್ಕಾರ ಪರಿಚಯಿಸಿ ಅಂಗೀಕರಿಸಿರುವ ಟ್ರಾನ್ಸ್ಜೆಂಡರ್ ವ್ಯಕ್ತಿಗಳು (ಹಕ್ಕುಗಳ ರಕ್ಷಣೆಯ) ತಿದ್ದುಪಡಿ ಕಾಯ್ದೆ–2026 ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಲಾಗಿದೆ. ಈ ತಿದ್ದುಪಡಿ ಸ್ವ–ಗುರುತಿನ ಹಕ್ಕನ್ನು ಹತ್ತಿಕ್ಕಿ, ವ್ಯಕ್ತಿಯ ಲಿಂಗತ್ವವನ್ನು ನಿರ್ಧರಿಸುವ ಅಧಿಕಾರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ಹಾಗೂ ವೈದ್ಯಕೀಯ ಮಂಡಳಿಗಳಿಗೆ ಒಪ್ಪಿಸುತ್ತಿದೆ ಎಂದು ಅವರು ಆರೋಪಿಸಿದರು.

ಈ ಕಾಯ್ದೆಯು ಟ್ರಾನ್ಸ್ ಪುರುಷರು, ಟ್ರಾನ್ಸ್ ಮಹಿಳೆಯರು, ಜೆಂಡರ್‌ಕ್ವಿಯರ್ ಮತ್ತು ನಾನ್–ಬೈನರಿ ವ್ಯಕ್ತಿಗಳಂತಹ ಅನೇಕ ಗುರುತುಗಳನ್ನು ಹೊರತುಪಡಿಸುವ ಮೂಲಕ ಸಮುದಾಯದ ಹಕ್ಕುಗಳನ್ನು ಕುಗ್ಗಿಸುತ್ತಿದೆ. ಜೊತೆಗೆ "ಆಕರ್ಷಣೆ" (allurement) ಎಂಬ ಅಸ್ಪಷ್ಟ ವಿಧಿಗಳನ್ನು ಸೇರಿಸುವ ಮೂಲಕ ಹೋರಾಟಗಾರರು ಮತ್ತು ಸಮುದಾಯ ಬೆಂಬಲ ಸಂಘಟನೆಗಳ ಮೇಲೆ ದಮನಕ್ಕೆ ಅವಕಾಶ ಕಲ್ಪಿಸಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಆ ಕಾನೂನನ್ನು ಈಗಾಗಲೆ ತೆಲಂಗಾಣಾ ಸೇರಿದಂತೆ ಕೆಲವು ರಾಜ್ಯಗಳು ವಿರೋಧಿಸಿವೆ. ಇಲ್ಲಿಯ ಮುಖ್ಯಮಂತ್ರಿ ಸಿದ್ಧರಾಮಯ್ಯ ಸಹ ಅದನ್ನು ವಿರೋಧಿಸಿ ಅದನ್ನು ಜಾರಿಗೆ ತರಕೂಡದು. ಇದರಿಂದ ಲಿಂಗತ್ವ ಅಲ್ಪಸಂಖ್ಯಾತರು ತಮಗೆ ಆಶಿರ್ವದಿಸಲಿದ್ದಾರೆ. ಕೇಂದ್ರವು ನಮ್ಮ ಮೇಲೆ ಹಿಂದುತ್ವವನ್ನು ಹೋರಿಸುವ ಕೆಲಸ ಮಾಡಿರುವುದು ಖಂಡನಿಯ ಎಂದರು.

ಸುಪ್ರೀಂ ಕೋರ್ಟ್ನ ಓಂಐಖಂ ತೀರ್ಪಿನ ಅನ್ವಯ ಕಾನೂನು ತಿದ್ದುಪಡಿ ಮಾಡಿ, ಸಂವಿಧಾನದ ವಿಧಿ 14, 15, 19 ಮತ್ತು 21ರ ಪಾಲನೆ ಖಚಿತಪಡಿಸಬೇಕು, ಹಾನಿಕಾರಕ ಅನುಷ್ಠಾನಕ್ಕೆ ತಡೆ ನೀಡಬೇಕು. ಸ್ವ–ಗುರುತು, ಗೌರವ ಮತ್ತು ಗೌಪ್ಯತೆಯನ್ನು ಹಾಳುಮಾಡುವ ನಿಯಮಗಳನ್ನು ಜಾರಿಗೆ ತರಬಾರದು, ರಾಜ್ಯದ ಸಂಸದರು ಮತ್ತು ಶಾಸಕರು ತಮ್ಮ ನಿಲುವುಗಳನ್ನು ಸಾರ್ವಜನಿಕವಾಗಿ ಪ್ರಕಟಿಸಬೇಕು, ಸಾಂವಿಧಾನಿಕ ಸವಾಲುಗಳಿಗೆ ಕಾನೂನು ಮತ್ತು ಸಾಂಸ್ಥಿಕ ಸಹಾಯ ಒದಗಿಸಬೇಕು, ಆರೋಗ್ಯ, ಶಿಕ್ಷಣ, ವಾಸಸ್ಥಳ ಮತ್ತು ಜೀವನೋಪಾಯ ಕ್ಷೇತ್ರಗಳಲ್ಲಿ ಟ್ರಾನ್ಸ್ಜೆಂಡರ್ ಸಮುದಾಯಕ್ಕೆ ಹೆಚ್ಚಿನ ಅವಕಾಶ ಮತ್ತು ಬಜೆಟ್ ಮೀಸಲಾತಿ ಕಲ್ಪಿಸಬೇಕು, "ನಾವು ಬದುಕಿದ್ದೇವೆ, ಅನ್ಯಾಯದ ವಿರುದ್ಧ ಪ್ರತಿರೋಧಿಸುತ್ತೇವೆ, ಅದಕ್ಕೇ ಹೆಮ್ಮೆಯಿಂದ ನಡೆಯುತ್ತಿದ್ದೇವೆ" ಎಂಬ ಘೋಷ ವಾಕ್ಯದೊಂದಿಗೆ ಈ ಸ್ವಾಭಿಮಾನ ನಡಿಗೆ ನಡೆಯಲಿದ್ದು, ಸಮಾಜದಲ್ಲಿ ಸಮಾನತೆ ಮತ್ತು ಗೌರವದ ಸಂದೇಶ ಸಾರಲಿದೆ ಎಂದು ವೀಣಾ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಎಮ್.ಜಿ.ಎಸ್.ಪಿ ಸದಸ್ಯ ಭೀಮಾ, ಸಂಗಮಿತ್ರಾ ಸೇವಾ ಸಂಸ್ಥೆಯ ಅಧ್ಯಕ್ಷೆ ಸಪ್ನಾ, ಬುದ್ದ ಬೆಳಕು ಟ್ರಸ್ಟ್ ಅಧ್ಯಕ್ಷ ಮಹೇಶ ಗೋರನಾಳಕರ್, ಸಾಮಾಜಿಕ ಹೋರಾಟಗಾರ ವಿನಯ ಮಾಳಗೆ, ಸಾಹಿತಿ ಜಗದೀಶ್ವರ ಬಿರಾದಾರ, ಶರಣತತ್ವ ಪ್ರಸಾರ ಮತ್ತು ಗ್ರಾಮೀಣಾಭಿವೃದ್ಧಿ ಸೇವಾ ಸಂಸ್ಥೆಯ ಬಸವರಾಜ.ಸಿ ಮಾತನಾಡಿದರು.

# ಬಳ್ಳಾರಿ ಜಿಲ್ಲೆಯಲ್ಲಿ ಗರ್ಭಕಂಠ ಕ್ಯಾನ್ಸರ್ ತಡೆಗೆ ಲಸಿಕಾ ಅಭಿಯಾನ
# 14 ವರ್ಷದ 5,658 ಹೆಣ್ಣು ಮಕ್ಕಳಿಗೆ ಲಸಿಕೆ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

:ಹೆಣ್ಣು ಮಕ್ಕಳ ಆರೋಗ್ಯದ ದೃಷ್ಟಿಯಿಂದ ಅತ್ಯಂತ ಮಾರಕವಾಗಿರುವ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಜಿಲ್ಲೆಯಾದ್ಯಂತ 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತವಾಗಿ ಹೆಚ್.ಪಿ.ವಿ (ಹ್ಯೂಮನ್ ಪ್ಯಾಪಿಲೋಮ ವೈರಸ್) ಲಸಿಕೆಯನ್ನು ನೀಡಲಾಗುತ್ತಿದೆ. ಪೋಷಕರು ಯಾವುದೇ ವದಂತಿಗಳಿಗೆ ಕಿವಿಗೊಡದೆ ತಮ್ಮ ಮಕ್ಕಳಿಗೆ ಈ ಸುರಕ್ಷಿತ ಲಸಿಕೆಯನ್ನು ಹಾಕಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಮನವಿ ಮಾಡಿದ್ದಾರೆ.

ವೈಯಕ್ತಿಕ ಶುಚಿತ್ವದ ಕೊರತೆ ಹಾಗೂ ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ ಹರಡುವ ಹೆಚ್.ಪಿ.ವಿ ಸೋಂಕು ಕಾಲಕ್ರಮೇಣ ಕ್ಯಾನ್ಸರ್ ಆಗಿ ಮಾರ್ಪಡುತ್ತದೆ. ಇದನ್ನು ತಡೆಯಲು 14 ವರ್ಷದ ಹರೆಯದಲ್ಲೇ ಲಸಿಕೆ ನೀಡುವುದು ಅತ್ಯಂತ ಪರಿಣಾಮಕಾರಿ ಕ್ರಮವಾಗಿದೆ. ಈ ಲಸಿಕೆಯನ್ನು ಪಡೆಯುವುದರಿಂದ ಗರ್ಭಕಂಠದ ಕ್ಯಾನ್ಸರ್ ಅನ್ನು ಶೇ.99 ರಷ್ಟು ತಡೆಯಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ಅಭಿಯಾನವು ಮಾರ್ಚ್ 11ರಿಂದ ಪ್ರಾರಂಭವಾಗಿದ್ದು, ಒಟ್ಟು 90 ದಿನಗಳ ಕಾಲ ನಡೆಯಲಿದೆ. 14 ವರ್ಷದ ಎಲ್ಲಾ ಹೆಣ್ಣು ಮಕ್ಕಳು ಈ ಲಸಿಕೆಯನ್ನು ಪಡೆಯಲು ಅರ್ಹರಾಗಿದ್ದು, ಲಸಿಕೆ ಪಡೆಯಲು ಬರುವಾಗ ಪೋಷಕರು ಜೊತೆಯಲ್ಲಿರಬೇಕು ಮತ್ತು ಮಗುವಿನ ಜನನ ಪ್ರಮಾಣ ಪತ್ರವನ್ನು ತರುವುದು ಕಡ್ಡಾಯವಾಗಿದೆ. ಇದುವರೆಗೆ ಲಸಿಕೆ ಪಡೆದ ಮಕ್ಕಳಲ್ಲಿ ಯಾವುದೇ ಅಡ್ಡಪರಿಣಾಮಗಳು ಕಂಡುಬಂದಿಲ್ಲ ಎಂದು ಜಿಲ್ಲಾ



ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಸ್ಪಷ್ಟಪಡಿಸಿದ್ದಾರೆ.

*ಗುರಿ:* ಜಿಲ್ಲೆಯಲ್ಲಿ ಒಟ್ಟು 16,495 ಹೆಣ್ಣು ಮಕ್ಕಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದ್ದು, ಈವರೆಗೆ 5,658 ಮಕ್ಕಳಿಗೆ ಲಸಿಕೆ ನೀಡಲಾಗಿದೆ.

*ತಾಲ್ಲೂಕುವಾರು ಪ್ರಗತಿ ವಿವರ:*

ಬಳ್ಳಾರಿ ತಾಲ್ಲೂಕಿನಲ್ಲಿ 7,578 ಹೆಣ್ಣು ಮಕ್ಕಳ ಗುರಿ ಹೊಂದಲಾಗಿದ್ದು, ಇದುವರೆಗೆ 2,324 ಮಕ್ಕಳಿಗೆ ಲಸಿಕೆ ನೀಡಲಾಗಿದೆ. ಅದರಂತೆ, ಸಂಡೂರು ತಾಲ್ಲೂಕಿನಲ್ಲಿ 2,840 ಮಕ್ಕಳಲ್ಲಿ 881 ಮಕ್ಕಳಿಗೆ ಹಾಕಲಾಗಿದೆ. ಸಿರುಗುಪ್ಪ ತಾಲ್ಲೂಕಿನಲ್ಲಿ 3,054 ಮಕ್ಕಳಲ್ಲಿ 1,453 ಹೆಣ್ಣು ಮಕ್ಕಳಿಗೆ ಲಸಿಕೆ ನೀಡಲಾಗಿದೆ. ಕುರುಗೋಡು ತಾಲ್ಲೂಕು ವ್ಯಾಪ್ತಿಯಲ್ಲಿ 1,543 ಮಕ್ಕಳಲ್ಲಿ 630 ಮಂದಿಗೆ ಲಸಿಕೆ ನೀಡಲಾಗಿದೆ ಹಾಗೂ ಕಂಪ್ಲಿ ತಾಲ್ಲೂಕಿನ 1,480 ಹೆಣ್ಣು ಮಕ್ಕಳಲ್ಲಿ 370 ಹೆಣ್ಣು ಲಸಿಕೆ ನೀಡಲಾಗಿದೆ.

ಸಾಮಾಜಿಕ ಜಾಲತಾಣಗಳಲ್ಲಿ ಲಸಿಕೆಯ ಬಗ್ಗೆ ಹರಡುತ್ತಿರುವ ತಪ್ಪು ಮಾಹಿತಿಯನ್ನು ನಂಬಬೇಡಿ. ಕ್ಯಾನ್ಸರ್ ಮುಕ್ತ ನಾಳೆಗಾಗಿ ಇಂದು ನಿಮ್ಮ ಮಕ್ಕಳಿಗೆ ಲಸಿಕೆಯ ಸುರಕ್ಷಾ ಕವಚವನ್ನು ನೀಡಿ.

ಹೆಚ್ಚಿನ ಮಾಹಿತಿಗಾಗಿ ಅಥವಾ ಲಸಿಕೆ ಪಡೆಯಲು ಪೋಷಕರು ತಮ್ಮ ಹತ್ತಿರದ ಸರ್ಕಾರಿ ಆಸ್ಪತ್ರೆ ಅಥವಾ ಆರೋಗ್ಯ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರತಿಷ್ಠಿತ ಶಾಲೆಗಳ ಪ್ರವೇಶ ಪರೀಕ್ಷೆ ಮುಂದೂಡಿಕೆ; ಮೇ 16ಕ್ಕೆ ದಿನ ನಿಗದಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಜಿಲ್ಲೆಯ ಪ್ರತಿಷ್ಠಿತ ಶಾಲೆಗಳ 6ನೇ ತರಗತಿ ಪ್ರವೇಶಕ್ಕಾಗಿ ನಡೆಯಬೇಕಿದ್ದ ಅರ್ಹತಾ ಪರೀಕ್ಷೆಯನ್ನು ಮುಂದೂಡಲಾಗಿದ್ದು, ಈ ಮೊದಲು ಮೇ 12 ರಂದು ನಿಗದಿಯಾಗಿದ್ದ ಪ್ರವೇಶ ಪರೀಕ್ಷೆಯನ್ನು ಈಗ ಮೇ 16 ರಂದು ನಡೆಸಲು ತೀರ್ಮಾನಿಸಲಾಗಿದೆ.

ಮೇ 16 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಹೆಡ್ ಪೋಸ್ಟ್ ಆಫೀಸ್ ಹತ್ತಿರದ ಸರ್ಕಾರಿ ಬಾಲಕಿಯರ ಜೂನಿಯರ್ ಕಾಲೇಜಿನಲ್ಲಿ ನಡೆಯಲಿದೆ.

ನಗರದ ಅಲ್ಲೀಪುರದ ವಿಶ್ವೇಶ್ವರಯ್ಯ ಪ್ರೌಢ ಶಾಲೆ(ಬೆಸ್ಟ್ ಸ್ಕೂಲ್), ವಿದ್ಯಾನಗರದ ನಂದ ವಸತಿ ಶಾಲೆ, ಬೆಳಗಲ್ ಕ್ರಾಸ್ ನ ಶ್ರೀ ನಂದಿ ಪ್ರೌಢಶಾಲೆ (ಸಿ.ಬಿ.ಎಸ್.ಇ) (ವಸತಿ ರಹಿತ), ಸಿರುಗುಪ್ಪದ ವಿಜಯಮೇರಿ ಪ್ರಾಥಮಿಕ ಶಾಲೆ (ವಸತಿ ಸಹಿತ), ದಮ್ಮೂರಿನ ಬೃಂದಾ ಇಂಟರ್ ನ್ಯಾಷನಲ್ ಸ್ಕೂಲ್(ವಸತಿ ಸಹಿತ) ಶಾಲೆಗಳಿಗೆ ಅರ್ಜಿ ಸಲ್ಲಿಸಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳು ನಿಗದಿತ ಸಮಯದಲ್ಲಿ ಪರೀಕ್ಷಾ ಕೇಂದ್ರಕ್ಕೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು–ಬಳ್ಳಾರಿ ಮೊ.8495026070, ಸಿರುಗುಪ್ಪ ಮೊ.9742581434 ಹಾಗೂ ಸಂಡೂರು ಮೊ.9448316710 ಗೆ ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಣ್ಣ ಆಹಾರ ಉದ್ಯಮಗಳಿಗೆ ಪಿಎಂಎಫ್ಎಂಇ ಯೋಜನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

:ಸಣ್ಣ ಮತ್ತು ಕಿರು ಆಹಾರ ಉದ್ಯಮಿಗಳನ್ನು ಪ್ರೋತ್ಸಾಹಿಸಲು ಹಾಗೂ ಗ್ರಾಮೀಣ ಭಾಗದ ಉದ್ಯಮಗಳನ್ನು ಆರ್ಥಿಕವಾಗಿ ಸಬಲೀಕರಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಯೋಗದೊಂದಿಗೆ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆಯನ್ನು ಜಾರಿಗೆ ತರಲಾಗಿದ್ದು, ಜಿಲ್ಲೆಯ ರೈತರು ಮತ್ತು ಯುವ ಉದ್ಯಮಿಗಳಿಗೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಈ ಯೋಜನೆಯಡಿ ಸಣ್ಣ ಆಹಾರ ಸಂಸ್ಕರಣಾ ಘಟಕಗಳನ್ನು ನಡೆಸುತ್ತಿರುವ ಉದ್ಯಮಿಗಳು ತಮ್ಮ ವ್ಯವಹಾರವನ್ನು ಅಧಿಕೃತವಾಗಿ ನೋಂದಾಯಿಸಿಕೊಳ್ಳಲು ಮತ್ತು ಆಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಲು ಅವಕಾಶವಿದೆ.

ಆಹಾರ ಸಂಸ್ಕರಣಾ ಯಂತ್ರೋಪಕರಣಗಳ ಖರೀದಿಗೆ ಒಟ್ಟು ಶೇ.50 ಸಹಾಯಧನ ದೊರೆಯಲಿದೆ. ಇದರಲ್ಲಿ ಕೇಂದ್ರ ಸರ್ಕಾರದ ಪಾಲು ಶೇ.35 ಆಗಿದ್ದರೆ, ರಾಜ್ಯ ಸರ್ಕಾರವು ಶೇ.15 ರಷ್ಟು ನೆರವು ನೀಡುತ್ತದೆ. ಉದ್ದಿಮೆದಾರರಿಗೆ ಬ್ಯಾಂಕ್‌ಗಳ ಮೂಲಕ ಶೇ.90 ರಷ್ಟು ಸುಲಭ ಸಾಲದ ಸೌಲಭ್ಯವನ್ನು ಒದಗಿಸಲಾಗುವುದು.

ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಲು ಮತ್ತು ಗುಣಮಟ್ಟವನ್ನು ಕಾಯ್ದುಕೊಳ್ಳಲು ಅಗತ್ಯವಾದ ತಾಂತ್ರಿಕ ತರಬೇತಿಯನ್ನು ನೀಡಲಾಗುತ್ತದೆ. ಸಣ್ಣ ಉದ್ಯಮಿಗಳು ತಯಾರಿಸಿದ ಉತ್ಪನ್ನಗಳಿಗೆ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಮಾರುಕಟ್ಟೆ ಪ್ರವೇಶಿಸಲು ನೆರವು ನೀಡಲಾಗುತ್ತದೆ.

*ಯಾರು ಅರ್ಜಿ ಸಲ್ಲಿಸಬಹುದು?:*

ಸಣ್ಣ ಆಹಾರ ಉತ್ಪಾದಕರು, ಮನೆಯಲ್ಲಿಯೇ ಆಹಾರ ಉತ್ಪನ್ನಗಳನ್ನು ತಯಾರಿಸುವ ಉದ್ಯಮಿಗಳು, ಸ್ವಸಹಾಯ ಗುಂಪುಗಳು ಹಾಗೂ ರೈತ ಉತ್ಪಾದಕ ಸಂಸ್ಥೆಗಳು ಈ ಯೋಜನೆಯ ಲಾಭ ಪಡೆಯಲು ಅರ್ಹರಾಗಿರುತ್ತಾರೆ.

*ಬಳ್ಳಾರಿ ಜಿಲ್ಲೆಗೆ ವಿಶೇಷ ಅವಕಾಶ:*

ಬಳ್ಳಾರಿ ಜಿಲ್ಲೆಯು ಭತ್ತ, ಮೆಕ್ಕೆಜೋಳ, ಮೆಣಸಿನಕಾಯಿ, ದಾಳಿಂಬೆ ಹಾಗೂ ಸಿರಿಧಾನ್ಯಗಳ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿದೆ. ರೈತರು ತಮ್ಮ ಈ ಬೆಳೆಗಳನ್ನು ಕೇವಲ ಕಚ್ಚಾ ರೂಪದಲ್ಲಿ ಮಾರಾಟ ಮಾಡದೆ, ಈ ಯೋಜನೆಯಡಿ ಸಂಸ್ಕರಿಸಿ ಮಾರಾಟ ಮಾಡುವುದರಿಂದ ಹೆಚ್ಚಿನ ಲಾಭ ಗಳಿಸಲು ಸಾಧ್ಯವಿದೆ.

ಆತ್ಮನಿರ್ಭರ ಭಾರತದ ಕನಸನ್ನು ನನಸು ಮಾಡುವಲ್ಲಿ ಮತ್ತು ರೈತರ ಆದಾಯವನ್ನು ದ್ವಿಗುಣಗೊಳಿಸುವಲ್ಲಿ ಪಿಎಂಎಫ್ಎಂಇ ಯೋಜನೆ ಮಹತ್ವದ ಪಾತ್ರ ವಹಿಸುತ್ತದೆ. ಜಿಲ್ಲೆಯ ಯುವಕರು ಮತ್ತು ಮಹಿಳೆಯರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು. ಆಸಕ್ತರು ಪಿಎಂಎಫ್ಎಂಇ ಅಧಿಕೃತ ವೆಬ್‌ಸೈಟ್ ಮೂಲಕ ಅಥವಾ ತಮ್ಮ ಸಮೀಪದ ರೈತ ಸಂಪರ್ಕ ಕೇಂದ್ರಗಳ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ರೈತರು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನು ಅಥವಾ ರೈತ ಕೇಂದ್ರದ ಉಚಿತ ಸಹಾಯವಾಣಿ ಸಂಖ್ಯೆ 1800–425–3553 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಖಿ ಒನ್ ಸ್ಟಾಪ್ ಸೆಂಟರ್‌ನ ಕಾನೂನು ಸಲಹೆಗಾರರ ಹುದ್ದೆಗೆ ನೇಮಕಾತಿ ಪ್ರಕ್ರಿಯೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕೇಂದ್ರಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ 'ಸಖಿ' ಒನ್ ಸ್ಟಾಪ್ ಸೆಂಟರ್ ಯೋಜನೆಯಡಿ ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ವೈದ್ಯಕೀಯ, ಪೊಲೀಸ್ ಸಹಾಯ, ಕಾನೂನು ನೆರವು, ಸಮಾಲೋಚನೆ ಹಾಗೂ ತಾತ್ಕಾಲಿಕ ವಸತಿ ಒಳಗೊಂಡು ಸಮಗ್ರ ಸೇವೆಗಳನ್ನು ನೀಡಲು ಅಗತ್ಯವಿರುವ ಇಬ್ಬರು ಕಾನೂನು ಸಲಹೆಗಾರರ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ಪ್ರಗತಿಯಲ್ಲಿದೆ.



ಈ ಹುದ್ದೆಗಳು ಸಂಪೂರ್ಣವಾಗಿ ತಾತ್ಕಾಲಿಕವಾಗಿದ್ದು, 11 ತಿಂಗಳ ಅವಧಿಗೆ ಗುತ್ತಿಗೆ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತಿದೆ. ಆಯ್ಕೆಯಾದ ಅಭ್ಯರ್ಥಿಗಳು ವಾರದ 24*7 ಅವಧಿಯಲ್ಲಿ ಪಾಳಿ ಆಧಾರದ ಮೇಲೆ ಕೆಲಸ ನಿರ್ವಹಿಸಬೇಕಿರುತ್ತದೆ.

ಏ.27 ರಂದು ಟಾಸ್ಕ್ ಫೋರ್ಸ್ ಸಮಿತಿ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿಗಳು ಹಾಗೂ ಸದಸ್ಯರ ನೇತೃತ್ವದಲ್ಲಿ ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆ ನಡೆಸಲಾಯಿತು. ಈ ಪ್ರಕ್ರಿಯೆಯಲ್ಲಿ ಒಟ್ಟು 7 ಅಭ್ಯರ್ಥಿಗಳು ಹಾಜರಿದ್ದು, ಇಬ್ಬರು ಅಭ್ಯರ್ಥಿಗಳು ಗೈರುಹಾಜರಾಗಿದ್ದರು. ಹಾಜರಿದ್ದ 7 ಅರ್ಹ ಅಭ್ಯರ್ಥಿಗಳಿಗೆ ಮುಂದಿನ ಹಂತದ ಸಂದರ್ಶನ ಪ್ರಕ್ರಿಯೆ ನಡೆಯಲಿದ್ದು, ಅದರ ದಿನಾಂಕವನ್ನು ಶೀಘ್ರದಲ್ಲೇ ಪ್ರತ್ಯೇಕವಾಗಿ ಪ್ರಕಟಿಸಲಾಗುವುದು.

*ಆಯ್ಕೆಯ ಮಾನದಂಡಗಳು (ಒಟ್ಟು 100 ಅಂಕ):*

ಅಭ್ಯರ್ಥಿಗಳ ಆಯ್ಕೆಯನ್ನು ಈ ಕೆಳಕಂಡ ಪಾರದರ್ಶಕ ಮಾನದಂಡಗಳ ಆಧಾರದ ಮೇಲೆ ನಡೆಸಲಾಗುತ್ತದೆ. ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳು–ಶೇ.65, ಕೆಲಸದ ಅನುಭವ ಪ್ರತಿ 2 ವರ್ಷಕ್ಕೆ 2 ಅಂಕಗಳಂತೆ ಒಟ್ಟು 10, ಸಂವಹನ ಕೌಶಲ್ಯಗಳು–10 ಅಂಕ, ವಿಷಯ ಜ್ಞಾನ–10 ಅಂಕ ಹಾಗೂ ಕಾರ್ಯನಿರ್ವಹಣೆ –05 ಅಂಕ ಸೇರಿ ಒಟ್ಟು 100 ಅಂಕಗಳಿಗೆ ಸಂದರ್ಶನಕ್ಕೆ ಪರಿಗಣಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ದೇಶಕ್ಕೆ ಮೋದಿ, ರಾಜ್ಯಕ್ಕೆ ಕುಮಾರಣ್ಣ ಅಗತ್ಯ: ಶಾಸಕ ಶರಣಗೌಡ ಕಂದಕೂರ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಮೇ.11: ಕ್ಷೇತ್ರದಲ್ಲಿ ಜೆಡಿಎಸ್ ಪಕ್ಷ ಸೇರ್ಪಡೆಗೆ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದ್ದು, "ಇದು ಕೇವಲ ಟ್ರೈಲರ್ ಮಾತ್ರ, ಮುಂದೆ ಪಿಕ್ಚರ್ ಅಭಿ ಬಾಕಿ ಹೈ" ಎಂದು ಶರಣಗೌಡ ಕಂದಕೂರ್ ಹೇಳಿದರು.ಗುರುಮಠಕಲ್ ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಭಾನುವಾರ ಕಾಂಗ್ರೆಸ್ ತೊರೆದು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾದ ಯುವಕರು ಹಾಗೂ ಮುಖಂಡರನ್ನು ಸ್ವಾಗತಿಸಿ ಅವರು ಮಾತನಾಡಿದರು. "ನಮ್ಮ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ನೂರಾರು ಜನ ಪಕ್ಷಕ್ಕೆ ಬರುತ್ತಿದ್ದಾರೆ. ಜನರ ಕಷ್ಟ–ಸುಖಗಳಲ್ಲಿ ಭಾಗಿಯಾಗುವುದು ನನ್ನ ಕರ್ತವ್ಯ" ಎಂದರು.

"ರಾಜ್ಯದಲ್ಲಿ ಪ್ರಾದೇಶಿಕ ಪಕ್ಷವಾಗಿರುವ ಜೆಡಿಎಸ್ ಗಟ್ಟಿಯಾಗಿ ಬೇರೂರಿದೆ. ಅದನ್ನು ಅಲುಗಾಡಿಸಲು ಯಾರಿಂದಲೂ ಸಾಧ್ಯವಿಲ್ಲ. ದೇಶಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವ ಅಗತ್ಯವಿದ್ದರೆ, ರಾಜ್ಯಕ್ಕೆ ಎಚ್.ಡಿ.ಕುಮಾರಸ್ವಾಮಿ ಅವರ ಆಡಳಿತ ಅವಶ್ಯಕ" ಎಂದು ಹೇಳಿದರು.

ಹತ್ತಿಕುಣಿ ನಾಲಾ ಆಧುನೀಕರಣಕ್ಕೆ ಸರ್ಕಾರ ಅನುದಾನ ನೀಡಿದೆ ಎಂದು ಕಾಂಗ್ರೆಸ್ ನಾಯಕರು ಹೇಳುತ್ತಿದ್ದಾರೆ. ಆದರೆ ಮೂರು ವರ್ಷಗಳಿಂದ ಕ್ಷೇತ್ರಕ್ಕೆ ಸಮರ್ಪಕ ಕುಡಿಯುವ ನೀರೇ ನೀಡದ ಸರ್ಕಾರ ಕೋಟ್ಯಂತರ ಅನುದಾನ ಕೊಡುತ್ತದೆಯೇ ಎಂದು ಪ್ರಶ್ನಿಸಿದರು.



"ಕ್ಷೇತ್ರದ ಕುಡಿಯುವ ನೀರಿನ ಸಮಸ್ಯೆ ಕುರಿತು ವಿಧಾನಸಭೆಯಲ್ಲಿ ಎಂಟು ಬಾರಿ ಪ್ರಶ್ನೆ ಕೇಳಿದ್ದೇನೆ. ಇದುವರೆಗೂ ಸ್ಪಷ್ಟ ಉತ್ತರ ಸಿಕ್ಕಿಲ್ಲ. ಕ್ಷೇತ್ರದ ಅಭಿವೃದ್ಧಿಗೆ ಯಾರು ಸಹಕಾರ ನೀಡಿದ್ದಾರೆ, ಯಾರು ಅಡ್ಡಿಯಾಗಿದ್ದಾರೆ ಎಂಬುದು ನನಗೆ ಚೆನ್ನಾಗಿ ಗೊತ್ತಿದೆ. ಅದನ್ನು ಗ್ರಾಮಗಳಿಗೆ ಬಂದು ಜನರ ಮುಂದೆಯೇ ಹೇಳುತ್ತೇನೆ" ಎಂದರು.ಈ ವೇಳೆ ಮಾತನಾಡಿದ ಪುರಸಭೆ ಮಾಜಿ ಅಧ್ಯಕ್ಷ ಭೀಮಶಪ್ಪ ಗುಡಸೆ, "ಶಾಸಕ ಶರಣಗೌಡ ಕಂದಕೂರ ಕ್ಷೇತ್ರದ ಅಭಿವೃದ್ಧಿಗೆ ನಿರಂತರ ಹೋರಾಟ ನಡೆಸುತ್ತಿದ್ದಾರೆ. ಪ್ರತಿಯೊಂದು ಅಧಿವೇಶನದಲ್ಲೂ ಜನರ ಸಮಸ್ಯೆಗಳನ್ನು ಪ್ರಸ್ತಾಪಿಸುತ್ತಿದ್ದಾರೆ. ಇಂಥ ನಾಯಕರ ಕೈ ಬಲಪಡಿಸಲು ಯುವಕರು ಮುಂದೆ ಬರಬೇಕು" ಎಂದು ಹೇಳಿದರು.

ಮುಖಂಡ ನರಸಪ್ಪ ಕವಡೆ ಮಾತನಾಡಿ, "ಜೆಡಿಎಸ್ ಹಾಗೂ ನಮ್ಮ ನಾಯಕರ ವಿರುದ್ಧ ಕಾಂಗ್ರೆಸ್ ನಾಯಕರು ನಿರಾಧಾರ ಆರೋಪ ಮಾಡುತ್ತಿದ್ದಾರೆ. ನಮ್ಮ ಶಾಸಕರು ಯಾವುದೇ ಅಕ್ರಮದಲ್ಲಿ ಭಾಗಿಯಾಗಿದ್ದಾರೆ ಎಂಬುದಕ್ಕೆ ದಾಖಲೆ ನೀಡಲಿ, ಇಲ್ಲವೇ ಬಹಿರಂಗ ಚರ್ಚೆಗೆ ಬರಲಿ" ಎಂದು ಸವಾಲು ಹಾಕಿದರು.

ಕಡೇಚೂರು ಕೈಗಾರಿಕಾ ಪ್ರದೇಶದ ಭೂಸ್ವಾಧೀನ ವಿಚಾರ ಪ್ರಸ್ತಾಪಿಸಿದ ಅವರು, "ಅಂದು ದಿ. ನಾಗನಗೌಡ ಕಂದಕೂರು ರೈತರ ಪರವಾಗಿ ಉರಿ ಬಿಸಿಲಿನಲ್ಲಿ ಹೋರಾಟ ನಡೆಸಿದ್ದರು. ಕಾಂಗ್ರೆಸ್ ನಾಯಕರು ಮೌನವಾಗಿದ್ದರು. ಇಂದು ಸರ್ಕಾರ ಭೂಸ್ವಾಧೀನ ಕೈಬಿಡಲು ಶಾಸಕ ಶರಣಗೌಡ ಅವರ ಹೋರಾಟವೇ ಕಾರಣ" ಎಂದರು.ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಷ್ಚಂದ್ರ ಕಟಕಟಿ ಮಾತನಾಡಿ, "ಕಾಂಗ್ರೆಸ್ ಜಿಲ್ಲಾಧ್ಯಕ್ಷ ಬಸಿರಡ್ಡಿ ಅನಪುರ ಮೊದಲು ಕನ್ನಡವನ್ನು ಶುದ್ಧವಾಗಿ ಮಾತನಾಡಲು ಕಲಿಯಲಿ. ನಮ್ಮ ಶಾಸಕರ ಬಗ್ಗೆ ಹಗುರವಾಗಿ ಮಾತನಾಡುವುದನ್ನು ನಿಲ್ಲಿಸದಿದ್ದರೆ ಕಾರ್ಯಕರ್ತರು ತಕ್ಕ ಉತ್ತರ ನೀಡುತ್ತಾರೆ" ಎಂದು ಎಚ್ಚರಿಸಿದರು.

ಯರಗೋಳ, ಹೋರುಂಚಾ, ಬದ್ದೆಪಲ್ಲಿ, ತುರಕನದೊಡ್ಡಿ, ಹಿರೇನೂರ, ಸಾವೂರು ಹಾಗೂ ಸೈದಾಪುರ ಗ್ರಾಮಗಳ ಯುವಕರು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾದರು.

ಕಾರ್ಯಕ್ರಮದಲ್ಲಿ ರಾಜ್ಯದ ಯೋಜನೆ ಮತ್ತು ಸಾಂಖಿಕ ಇಲಾಖೆ ಸಚಿವ ಡಿ. ಸುಧಾಕರ್ ನಿಧನಕ್ಕೆ ಸಂತಾಪ ಸೂಚಿಸಲಾಯಿತು. ಕಾರ್ಯಕ್ರಮದಲ್ಲಿ ಬ್ಲಾಕ್ ಅಧ್ಯಕ್ಷ ಶರಣು ಆವಂಟಿ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ರಾಮಣ್ಣ ಯಡ್ಡಳ್ಳಿ, ಮಲ್ಲನಗೌಡ ಹಳಿಮನಿ ಕೌಳೂರು, ಅಜಯರಡ್ಡಿ ಯಲ್ಹೇರಿ, ಬಸ್ಸಣ್ಣ ದೇವರಳ್ಳಿ, ಈಶ್ವರ ನಾಯಕ್, ವೆಂಕಟೇಶ ಕಡದ್, ಗುರುನಾಥರಡ್ಡಿ ಸೈದಾಪುರ, ಶರಣಯ್ಯಸ್ವಾಮಿ ಅರಿಕೇರಾ, ಚಂದ್ರುಗೌಡ ಸೈದಾಪುರ, ಬಸವರಾಜ ಕಣೇಕಲ್, ಜಯೇಂದ್ರ ಚೌವ್ಹಾಣ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮುತ್ತತ್ತಿಯಲ್ಲಿ ಇಂದು ಸಾಮೂಹಿಕ ವಿವಾಹ

• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ

ತಾಲ್ಲೂಕಿನ ಮುತ್ತತ್ತಿ ಗ್ರಾಮದಲ್ಲಿ ಮೇ 12 ರಂದು ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ ಜರುಲಿದೆ.

ಸ್ಥಳೀಯ ಶಿವಶರಣ ಮಾದಾರ ಚೆನ್ನಯ್ಯ ಸೇವಾ ಸಮೀತಿ ದಾಳಮ್ಮದೇವಿ ಹಾಗೂ ದುರ್ಗಾಪರಮೇಶ್ವರಿ ಜಾತ್ರಾ ಮಹೋತ್ಸವ ನಿಮಿತ್ತ ಮಂಗಳವಾರ 11.45 ಗಂಟೆಗೆ ಹಮ್ಮಿಕೊಂಡಿರುವ ವಿವಾಹ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಗುರುಲಿಂಗ ಶಿವಾಚಾರ್ಯ ಸ್ವಾಮೀಜಿ ವಹಿಸುವರು.

ಮಾಜಿ ಶಾಸಕ ವೀರಣ್ಣ ಚರಂತಿಮಠ ಕಾರ್ಯಕ್ರಮ ಉದ್ಘಾಟಿಸಲಿದ್ದು, ಶಾಸಕ ಉಮೇಶ ಮೇಟಿ ವಧು ವರರಿಗೆ ಉಚಿತವಾಗಿ ಮಾಂಗಲ್ಯ ವಿತರಣೆ ಮಾಡುವರು. ಅಧ್ಯಕ್ಷತೆಯನ್ನು ಪದವಿ ಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕ ಶಿವಾನಂದ ಮೋಟಗಿ ವಹಿಸುವರು. ಮುಖ್ಯ ಅತಿಥಿಗಳಾಗಿ ಸುರೇಶ ಕೊಣ್ಣೂರ, ಡಾ.ದೇವರಾಜ ಪಾಟೀಲ, ಬಿ.ಎಚ್.ಮೇಟಿ, ರಾಜು ಮುದೇನೂರ, ಲಕ್ಷ್ಮಣ ಯಂಕಂಚಿ, ಬಸವರಾಜ ಕಟಗೇರಿ, ಅರುಣ ಲೋಕಾಪುರ, ಮುತ್ತಣ್ಣ ಬೆನ್ನೂರ ಸೇರಿ ಅನೇಕ ಪ್ರಮುಖರು ಪಾಲ್ಗೊಳ್ಳಲಿದ್ದಾರೆ ಎಂದು ಮಾದಾರ ಚೆನ್ನಯ್ಯ ಸೇವಾ ಸಮೀತಿ ಪ್ರಕಟಣೆ ತಿಳಿಸಿದೆ.

## ಮೇ 12-13ರಂದು ಮನಗೂಳಿ ಹಿರೇಮಠದ ಸಂಗನಬಸವ ಶಿವಾಚಾರ್ಯರ ಹಾಗೂ ಡಾ. ಮಹಾಂತ ಶಿವಾಚಾರ್ಯರ 13ನೇ ಯಾತ್ರಾ ಮಹೋತ್ಸವ



• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ

ತಾಲೂಕಿನ ಸಂಸ್ಥಾನ ಹಿರೇಮಠದ ಶತಾಯುಷಿ ಸಂಗನಬಸವ ಶಿವಾಚಾರ್ಯ ಸ್ವಾಮಿಜಿಯವರ 43ನೇ ಪುಣ್ಯಸ್ಮರಣೋತ್ಸವ ಹಾಗೂ ಲಿಂ.ಡಾ. ಮಹಾಂತ ಶಿವಾಚಾರ್ಯ ಸ್ವಾಮೀಜಿಯವರ ಯಾತ್ರಾ ಮಹೋತ್ಸವದ ಹಿನ್ನಲೆಯಲ್ಲಿ ಮೇ. 12 ಮತ್ತು 13ರಂದು ಎರಡು ದಿನಗಳ ಕಾಲ ವಿವಿಧ ಕಾರ್ಯಕ್ರಮಗಳು ಜರುಗಲಿವೆ ಎಂದು ಶ್ರೀಮಠದ ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ತಿಳಿಸಿದ್ದಾರೆ.

ಈ ಬಾರಿಯ ರಾಜ್ಯ ಮಟ್ಟದ ಸಂಗನಬಸವಶ್ರೀ ಪ್ರಶಸ್ತಿಯನ್ನು ಬಸವನಬಾಗೇವಾಡಿಯ ವಿದ್ಯುತ್ ಗುತ್ತಿಗೆದಾರ ಬಸವರಾಜ ಈ ಬದ್ರಗೊಂಡ ಅವರಿಗೆ ಪ್ರದಾನ ಮಾಡಲಾಗುವುದು.
ಅಭಿನವ ಸಂಗನಬಸವ ಶಿವಾಚಾರ್ಯಸ್ವಾಮೀಜಿ.ಮನಗೂಳಿ.

ಕಳೆದ 30ರಿಂದ ನಿತ್ಯ ಜರುಗುತ್ತಿರುವ ಶಿವಶರಣೆ ಅಕ್ಕಮಹಾದೇವಿ ಪುರಾಣ ಕಾರ್ಯಕ್ರಮವು 12ರಂದು ಸಂಜೆ ಮಹಾಮಂಗಲ ಹಾಗೂ ಧರ್ಮ ಚಿಂತನೆ ಸಮಾರಂಭ ಜರುಗಲಿದೆ. ಜಾಲಹಳ್ಳಿಯ ಜಯಶಾಂತಲಿಂಗೇಶ್ವರ ಶಿವಾಚಾರ್ಯ ಸ್ವಾಮೀಜಿ, ಯರನಾಳದ ಗುರುಸಂಗನಬಸವ ಸ್ವಾಮೀಜಿ, ಮನಗೂಳಿಯ ಡಾ. ಮಹಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ಸೇರಿದಂತೆ ನಾನಾ ಸ್ವಾಮೀಜಿಗಳು, ಶಾಸಕರಾದ ರಾಜುಗೌಡ ಪಾಟೀಲ, ಮುಖಂಡರಾದ ವಿಜುಗೌಡ ಪಾಟೀಲ, ಹಣಮಂತ ನಿರಾಣಿ ಸೇರಿದಂತೆ ಅನೇಕ ಜನಪ್ರತಿನಿಧಿಗಳ ಆಗಮಿಸುವರು.

13ರಂದು ಬೆಳಿಗ್ಗೆ ಪಂಚಾಚಾರ್ಯ ಧ್ವಜಾರೋಹಣ, ಕುಂಬೋತ್ಸವ ದೇವಸ್ಥಾನದಿಂದ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸುವುದು.

ಮಧ್ಯಾಹ್ನ ಜರುಗುವ ರಾಜ್ಯ ಮಟ್ಟದ ಸಂಗನಬಸವ ಶ್ರೀ ಪ್ರಶಸ್ತಿ ಪ್ರದಾನ ಹಾಗೂ ಧರ್ಮಸಭೆಯಲ್ಲಿ ಬಬಲೇಶ್ವರದ ಡಾ. ಮಹಾದೇವ ಶಿವಾಚಾರ್ಯ ಸ್ವಾಮೀಜಿ ಸೆರಿದಂತೆ ನಾನಾ ಮಠಾಧೀಶರು, ಸಚಿವರಾದ ಶಿವಾನಂದ ಎಸ್ ಪಾಟೀಲ, ಶಾಸಕ ಅಶೋಕ ಮನಗೂಳಿ ಸೇರಿದಂತೆ ಅನೇಕ ಜನಪ್ರತಿನಿಧಿಗಳು ಆಗಮಿಸುವರು.

## ಉಮೇಶ ಮೇಟಿ ಗೆಲುವು ಹರಕೆ ತೀರಿಸಿದ ಅಭಿಮಾನಿಗಳು



• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ

ಬಾಗಲಕೋಟೆ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ ಮೇಟಿ ಗೆಲುವು ಸಾಧಿಸಿದ್ದಕ್ಕೆ ಹಳ್ಳೂರ ಗ್ರಾಮದ ಉಮೇಶ ಅವರ ಐವರು ಅಭಿಮಾನಿಗಳು ಶ್ರೀಶೈಲಕ್ಕೆ ತೆರಳಿ ಮಲ್ಲಿಕಾರ್ಜುನ ಸ್ವಾಮಿಗೆ ಕಾಯಿ, ಕರ್ಪುರ ಅರ್ಪಿಸಿ ಹರಕೆ ತೀರಿಸಿದ್ದಾರೆ.

ಚುನಾವಣೆಯಲ್ಲಿ ಉಮೇಶ ಮೇಟಿ ಗೆದ್ದರೆ ಶ್ರೀಶೈಲಕ್ಕೆ ತೆರಳಿ ಮಲ್ಲಿಕಾರ್ಜುನ ಸ್ವಾಮಿಯ ದರ್ಶನ ಪಡೆದು ಕಾಯಿ, ಕರ್ಪೂರ ಸಮರ್ಪಿಸಿ ಹರಕೆ ತೀರಿಸುವುದಾಗಿ ಹಳ್ಳೂರ ಗ್ರಾಮದ ಮಹಾಂತೇಶ ಬಾದರದಿನ್ನಿ, ಪರಶುರಾಮ ಕಂಬಾರ, ಸಂಗಣ್ಣ ಮಾಗಿ, ಇಸ್ಮಾಯಿಲ್ ಹಣಗಿ ಹಾಗೂ ತಿಪ್ಪಣ್ಣ ಜಡ್ರಾಮಕುಂಟಿ ಹರಕೆ ಹೊತ್ತಿದ್ದರು.

ಉಮೇಶ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಐವರೂ ಶ್ರೀಶೈಲಗೆ ತೆರಳಿ ಮಲ್ಲಿಕಾರ್ಜುನ ಸ್ವಾಮಿ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿ ಬಂದಿದ್ದಾರೆ.

ಕರ್ನಾಟಕ ಸರ್ಕಾರ
**ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಆಳಂದ ತಾ॥ ಆಳಂದ ಜಿ॥ ಕಲಬುರಗಿ**

ಸಂಖ್ಯೆ : ಸ.ಸಾ.ಆ.ಆ/ಸಿಬ್ಬಂದಿ/10/2026–27 ದಿನಾಂಕ: 11/05/2026

:: ಟೆಂಡರ ಪ್ರಕಟಣೆ ::

ಸರ್ಕಾರಿ ಸಾರ್ವಜನಿಕ ಆಸ್ಪತ್ರೆ, ಆಳಂದನಲ್ಲಿ ಖಾಲಿ ಇರುವ ಗ್ರೂಪ್–ಡಿ ಮತ್ತು ನಾನ್ ಕ್ಲಿನಿಕ್ ಹುದ್ದೆಗಳನ್ನು 2026–27ನೇ ಸಾಲಿಗಾಗಿ ಆಸ್ಪತ್ರೆಯ ದೈನಂದಿನ ಸೇವೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಇ–ಪ್ರೋಕ್ಯೂರಮೆಂಟ್ ಅಡಿ ದ್ವಿ–ಲಕೋಟೆ ಪದ್ಧತಿಯಲ್ಲಿ ಟೆಂಡರ್ ಆಹ್ವಾನಿಸಲಾಗಿದೆ.

**ಟೆಂಡರ್ ಪ್ರಕಟಣೆಯ ವಿವರಗಳು, ದಿನಾಂಕ ಮತ್ತು ಸಮಯ**

1) ಟೆಂಡರ್ ಪ್ರಕಟಣೆ ಸಂಖ್ಯೆ & ದಿನಾಂಕ: **ಸಂಖ್ಯೆ: ಸಆಅ/ಅಟೆ/10/2026–27 ದಿನಾಂಕ: 11/05/2026,** 2) ಟೆಂಡರ್ ಅಂದಾಜು ಮೊತ್ತ: **2152728/–,** 3) ಇ.ಎಂ.ಡಿ (ಟೆಂಡರ್ ಮೊತ್ತಕ್ಕೆ) (2.5%): 53818/–, 4) E-Portal ಟೆಂಡರ್ ಸಲ್ಲಿಸುವ ಪ್ರಾರಂಭ & ಅಂತಿಮ ದಿನಾಂಕ ಮತ್ತು ಸಮಯ: **11/05/2026 ರಿಂದ 20/05/2026 ಸಮಯ 01.30 ಗಂಟೆ,** 5) E-Portal ತಾಂತ್ರೀಕ ಬಿಡ್ ತೆರೆಯುವ ದಿನಾಂಕ ಮತ್ತು ಸಮಯ **21/05/2026 ಸಮಯ 01.30 ಗಂಟೆ,** 6) ತಾಂತ್ರಿಕ ಬಿಡ್ ದಾಖಲಾತಿಗಳನ್ನು ಪರಿಶೀಲನೆ ಮಾಡುವ ದಿನಾಂಕ ಮತ್ತು ಸಮಯ: **25/05/2026 ಸಮಯ 01.30 ಗಂಟೆ,** 7) ಆರ್ಥಿಕ ಬಿಡ್ ತೆರೆಯುವ ದಿನಾಂಕ ಮತ್ತು ಸಮಯ: **26/05/2026 01.30 ಗಂಟೆ,** 8) ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ಕಛೇರಿ ವಿಳಾಸ ಮತ್ತು ದೂರವಾಣಿ ಸಂಖ್ಯೆ: ಸರ್ಕಾರಿ ಸಾರ್ವಜನಿಕ ಆಸ್ಪತ್ರೆ, ಆಳಂದ alandggh@gmail.com 9886124465

**ಸೂಚನೆ:** ಬಿಡ್ ಸಲ್ಲಿಸುವ ಅಂತಿಮ ದಿನಾಂಕದಂದು ಸಾರ್ವತ್ರಿಕ ರಜೆ ಇದ್ದಲ್ಲಿ, ಮುಂದಿನ ಕರ್ತವ್ಯದ ದಿನದಂದು ಬಿಡ್ ಸಲ್ಲಿಸಲು ಅಂತಿಮ ದಿನವೆಂದು ತಿಳಿಯತಕ್ಕದ್ದು. ಕ್ರಮ ಸಂಖ್ಯೆ 5,6&7ರ ದಿನಾಂಕ ಬದಲಾವಣೆಗೆ ಒಳಪಟ್ಟಿರುತ್ತದೆ. ಹೆಚ್ಚಿನ ವಿವರಗಳನ್ನು www.kppp.karanatak.gov.in ಈ ವೆಬ್‌ಸೈಟನಲ್ಲಿ ಪಡೆಯಬಹುದು. ಇಲ್ಲವೇ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ, ಆಳಂದ ತಾ॥ ಆಳಂದ ಕಛೇರಿಯಿಂದ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/– ಮುಖ್ಯ ವೈದ್ಯಾಧಿಕಾರಿಗಳು,**
**ಸ.ಸಾರ್ವಜನಿಕ ಆಸ್ಪತ್ರೆ, ಆಳಂದ. ತಾ. ಆಳಂದ**

ವಾ.ಸಾ.ಸಂ.ಇ/ಕಲಬುರಗಿ/110/ಕೆ.ಎಸ್.ಎಂ.ಸಿ.&ಎ/2026–27

# ಸರಸ್ವತಿ ರಾಂಪುರೆ ಇನ್ನಿಲ್ಲ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ತಾಲೂಕಿನ ಡಿಗ್ಗಿ ಗ್ರಾಮದ ಹಿರಿಯ ಜೀವಿ ಶ್ರೀಮತಿ ಸರಸ್ವತಿ ಗಂಡ ಶರಣಪ್ಪ ರಾಂಪುರೆ (88) ಅವರು ಸೋಮವಾರ ಸಂಜೆ ಅನಾರೋಗ್ಯದಿಂದ ನಿಧನರಾಗಿದ್ದಾರೆ.

ಕಳೆದ ಕೆಲವು ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದಿದ್ದಾರೆ. ಮೃತರು ಮೂವರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಅಂತ್ಯಕ್ರಿಯೆ ವಿವರ: ಮೃತರ ಮೋಕ್ಷ ಕಾರ್ಯ (ಅಂತ್ಯಕ್ರಿಯೆ) ದಿನಾಂಕ 12–05–2026ರ ಮಂಗಳವಾರದಂದು ಮಧ್ಯಾಹ್ನ 1 ಗಂಟೆಗೆ ಡಿಗ್ಗಿ ಗ್ರಾಮದ ಅವರ ಹೊಲದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಡಿ. ಸುಧಾಕರ್ ನಿಧನಕ್ಕೆ
## ಬಾಬುರಾವ್ ಚಿಂಚನಸೂರ್ ಸಂತಾಪ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕರ್ನಾಟಕ ವಿಧಾನಸಭೆಯ ಹಿರಿಯ ಸದಸ್ಯರು ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರಾಗಿದ್ದ ಡಿ.ಸುಧಾಕರ್ ಅವರ ನಿಧನದ ಸುದ್ದಿ ತಿಳಿದು ಅಪಾರ ದುಃಖವಾಗಿದೆ ಎಂದು ಮಾಜಿ ಸಚಿವರು ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ತಿಳಿಸಿದ್ದಾರೆ.



ಡಿ. ಸುಧಾಕರ್ ಅವರು 4 ಬಾರಿ ವಿಧಾನಸಭಾ ಸದಸ್ಯರಾಗಿ, ಸಮಾಜ ಕಲ್ಯಾಣ ಸಚಿವರಾಗಿ ಹಾಗೂ ವಿವಿಧ ಪ್ರಮುಖ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದ, ಸರಳ ವ್ಯಕ್ತಿತ್ವ ಮತ್ತು ಜನಪರ ಕಾರ್ಯಗಳಿಂದ ಅವರು ಜನಮನದಲ್ಲಿ ವಿಶೇಷ ಸ್ಥಾನ ಪಡೆದಿದ್ದರು. ಭದ್ರ ಮೇಲ್ದಂಡೆ ಯೋಜನೆ ಜಾರಿಗೆ ಹೋರಾಟ ಮಾಡಿದ್ದರು. ಭಾರತ ಜೋಡೋ ಯಾತ್ರೆ ವೇಳೆ ಐದು ದಿನದ ಜವಾಬ್ದಾರಿಯನ್ನು ಅವರೇ ವಹಿಸಿದ್ದರು. ಅವರ ಅಗಲಿಕೆ ರಾಜ್ಯಕ್ಕೆ ಮತ್ತು ಚಿತ್ರದುರ್ಗ ಜಿಲ್ಲೆಯ ಹಿರಿಯೂರು ಮತಕ್ಷೇತ್ರದ ಜನತೆಗೆ ತುಂಬಲಾರದ ನಷ್ಟವಾಗಿದೆ.

ಅವರ ಅಗಲಿಕೆಯ ದುಃಖವನ್ನು ಭರಿಸುವ ಸರ್ವ ಶಕ್ತಿಯನ್ನು ಅವರ ಕುಟುಂಬದವರಿಗೆ, ಬಂಧುಗಳಿಗೆ ಮತ್ತು ರಾಜ್ಯದ ಜನತೆಗೆ ನೀಡಲಿ ಹಾಗೂ ಅಗಲಿದ ಆತ್ಮಕ್ಕೆ ಚಿರಶಾಂತಿ ದೊರಕಲಿ ಎಂದು ಪ್ರಾರ್ಥಿಸಿದ್ದಾರೆ.

## ಪ್ರತಿಭಾವಂತ ಪ.ಜಾತಿ ವಿದ್ಯಾರ್ಥಿ 6ನೇ ತರಗತಿಗೆ ಪ್ರವೇಶ ಪರೀಕ್ಷೆ ಮೂಲಕ ಆಯ್ಕೆಗೆ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 11 : 2026–27ನೇ ಸಾಲಿನ ಸಮಾಜ ಕಲ್ಯಾಣ ಇಲಾಖೆಯ ಪ್ರತಿಭಾವಂತ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು ಪ್ರತಿಷ್ಠಿತ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶ ಪರೀಕ್ಷೆ ಮೂಲಕ ಆಯ್ಕೆ ಮಾಡಲು ಆಹ್ವಾನಿಸಲಾಗಿದೆ ಎಂದು ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಚನ್ನಬಸಪ್ಪ ಅವರು ತಿಳಿಸಿದ್ದಾರೆ.

ವಿದ್ಯಾರ್ಥಿಗಳಲ್ಲಿ ಅರ್ಹರಿರುವ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಪರೀಕ್ಷೆಯು 2026ರ ಮೇ 12ರ ಮಂಗಳವಾರ ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1 ಗಂಟೆಯ ವರೆಗೆ ಲಿಂಗೇರಿ ಕೊನಪ್ಪ ಆರ್.ನಾಡಗೌಡ (ನ್ಯೂ ಕನ್ನಡ ಹೈಸ್ಕೂಲ್) ಕನಕನಗರ ಯಾದಗಿರಿ ಪ್ರವೇಶ ಪರೀಕ್ಷೆಗಳು ನಡೆಯಲಿವೆ. ಈ ಪರೀಕ್ಷೆಗೆ ಅರ್ಹರಾದ ವಿದ್ಯಾರ್ಥಿಗಳ ಪ್ರವೇಶ ಪತ್ರವನ್ನು ಆಯಾ ತಾಲೂಕಿನ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಯಾದಗಿರಿ, ಶಹಾಪೂರ, ಸುರಪುರ ರವರಿಂದ (ತಪ್ಪಿದಲ್ಲಿ ಪರೀಕ್ಷಾ ಕೇಂದ್ರದ ಹತ್ತಿರ) ಪಡೆದು ಪರೀಕ್ಷೆಗೆ ನಿಗದಿತ ಸಮಯಕ್ಕೆ ಹಾಜರಾಗಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ಗ್ರಾಹಕರ ಸಂವಾದ ಸಭೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 11 : ಸುರಪುರ ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಕಾರ್ಯ ಮತ್ತು ಪಾಲನೆ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರು (ವಿ) ಕಛೇರಿಯಲ್ಲಿ ಇದೇ 2026ರ ಮೇ 12 ರಂದು ಬೆಳಿಗ್ಗೆ 10 ಗಂಟೆಗೆ ವಿದ್ಯುತ್ ಗ್ರಾಹಕರ ಸಭೆಯನ್ನು ಆಯೋಜಿಸಲಾಗಿದೆ ಎಂದು ಸುರಪುರ ಕಾರ್ಯನಿರ್ವಾಹಕ ಅಭಿಯಂತರರು ಅವರು ತಿಳಿಸಿದ್ದಾರೆ.

ಅಂದು ಸುರಪುರ ಉಪ ವಿಭಾಗ ಕಾರ್ಯ ಮತ್ತು ಪಾಲನೆ ಕಲಬುರಗಿ, ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಕಾರ್ಯ ಮತ್ತು ಪಾಲನೆ ವಲಯ ಅಧಿಕ್ಷಕರ ಅಭಿಯಂತರರು (ವಿ) ಅಧ್ಯಕ್ಷತೆಯಲ್ಲಿ ಹಾಗೂ ಸುರಪುರ ಜೆಸ್ಕಾಂ ವಿಭಾಗ ಕಾರ್ಯ ಮತ್ತು ಪಾಲನೆ ವಲಯ ಕಾರ್ಯನಿರ್ವಾಹಕ ಅಭಿಯಂತರರು (ವಿ) ಅವರ ಉಪಸ್ಥಿತಿಯಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆ ಜರುಗಲಿದೆ, ಸುರಪುರ ವಿಭಾಗದ ರೈತರು, ವಿದ್ಯುತ್ ಗ್ರಾಹಕರು ಈ ಸಭೆಯ ಸದುಪಯೋಗಪಡೆಯಬೇಕು, ತಮ್ಮ ಸಮಸ್ಯೆಗಳನ್ನು ಇತ್ಯರ್ಥಪಡಿಸಿಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೆಣ್ಣು ಮಕ್ಕಳಿಗೆ ಆದರ್ಶಗಳನ್ನು ತೋರಿಸಿಕೊಟ್ಟ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕಷ್ಟ ಕಾರ್ಪಣ್ಯಗಳ ಸಾಗರ ಬೆನ್ನು ಹತ್ತಿದರೂ ಅಲ್ಪವೂ ದೃತಿಗೆಡದೇ ಆದರ್ಶದ ಬದುಕು ನಡೆಸುವ ಮೂಲಕ ಹೆಣ್ಣುಕುಲಕ್ಕೇ ಮಾದರಿಯಾಗಿರುವ ಮಹಾಸಾಧ್ವಿ

ಹೇಮರೆಡ್ಡಿ ಮಲ್ಲಮ್ಮ ಅವರ ಜೀವನಾದರ್ಶಗಳನ್ನು ಪ್ರತಿಯೊಬ್ಬರು ಪಾಲಿಸಬೇಕೆಂದು ಸರ್ಕಾರಿ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ಸುಭಾಷಚಂದ್ರ ಕೌಲಗಿ ಹೇಳಿದರು.

ಜಿಲ್ಲಾಡಳಿತ, ಜಿಪಂ, ನಗರಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಸಮಿತಿ ಸಂಯುಕ್ತಾಶ್ರಯದಲ್ಲಿ ಭಾನುವಾರ ಇಲ್ಲಿನ ಸರ್ಕಾರಿ ಪದವಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಿದ್ದ ಮಹಾಸಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಅವರ ಜಯಂತಿ ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿ ಮಾತನಾಡಿದರು.

ಹೇಮರಡ್ಡಿ ಮಲ್ಲಮ್ಮ ಜಾತಿಗಳನ್ನು ಮೀರಿದ ಸಾಧ್ವಿ. ಹೆಣ್ಣುಕುಲದ ದೈವೀಶಕ್ತಿ. ಆದರ್ಶ ಸೊಸೆ, ಆದರ್ಶ ಮಡದಿ ಹೇಗಿರಬೇಕು ಎಂಬುದನ್ನು ಶತ,ಶತಮಾನಗಳ ಹಿಂದೆಯೇ ನಿರೂಪಿದ ಮಾದರಿ ಮಹಿಳೆ ಎಂದರು.

ಜೀವನದ ಮೇಲಿನ ಅವಳ ಶ್ರದ್ಧೆ, ಸಾಮಾಜಿಕ ಕಳಕಳಿ, ಭಕ್ತಿಯನ್ನು ಕಂಡು ಸಾಕ್ಷಾತ್ ಶ್ರೀಶೈಲ ಮಲ್ಲಿಕಾರ್ಜುನನೇ ಒಲಿದಿದ್ದರು.

ಒಬ್ಬ ಮಹಿಳೆಗೆ ಕಷ್ಟಗಳು ಎಷ್ಟು ಬರಬೇಕೋ



ಅಷ್ಟರ ಮಟ್ಟಿಗೆ ಅವುಗಳನ್ನು ಎದುರಿಸಿದ ಮಲ್ಲಮ್ಮ ಎಂದಿಗೂ ಎದೆಗುಂದದೇ ಎಲ್ಲವನ್ನು ನುಂಗಿ, ಧೃತಿಗೆಡದೇ ಗಂಡನ ಮನೆಯನ್ನು ಉದ್ಧಾರ ಮಾಡಿದ ಮಹಾಸಾಧ್ವಿ ಎಂದು ಕೌಲಗಿ ಬಣ್ಣಿಸಿದರು.

ಹೇಮರೆಡ್ಡಿ ಮಲ್ಲಮ್ಮ ಮಹಿಳೆಯರ ಕುಲ ತಿಲಕವಾಗಿದ್ದಾರೆ. ಅವರ ತತ್ವಾದರ್ಶಗಳು ಸರ್ವಕಾಲಿಕ ಶ್ರೇಷ್ಠ. ಸಹನೆಯಲ್ಲಿ ಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಹೆಸರುವಾಸಿಯಾಗಿದ್ದರೆಂದರು

ಹೇಮರೆಡ್ಡಿ ಮಲ್ಲಮ್ಮ ಬೆಂಕಿಯಲ್ಲಿ ಅರಳಿದ ಬಂಗಾರ ಸುಮಾರು ಆರುನೂರು ವರ್ಷಗಳ ಹಿಂದೆ ಆಂದ್ರದ ಶ್ರೀಶೈಲ ಸಮೀಪದ ಗ್ರಾಮವೊಂದರಲ್ಲಿ ಸಾಮಾನ್ಯ ಕುಟುಂಬದಲ್ಲಿ ಜನಸಿದ ಮಲ್ಲಮ್ಮಳ ಸರ್ವಾಂಗಿಣ ಏಳಿಗೆಗೆ ಅಡಿಪಾಯ ಹಾಕಿದವರು ಆಕೆಯ ತಂದೆ ನಾಗರೆಡ್ಡಿ ಎಂಬುವುದು ಯಾರು ಮರೆಯುವಂತಿಲ್ಲ. ಹುಚ್ಚನಂತಹ ಗಂಡನನ್ನು ಕಟ್ಟಿಕೊಂಡು, ಮನೆಯಲ್ಲಿ ಅಡಿ,ಅಡಿಗೂ ಕಷ್ಟ ಕೊಡುವವರ ನಡುವೆ ಕುಲಮೆಯಲ್ಲಿ ಬೆಂದ ಬಂಗಾರದಂತೆಯೇ ಬೆಳಗಿದ ಹೇಮರೆಡ್ಡಿ ಮಲ್ಲಮ್ಮ ಸಂಸಾರದಲ್ಲಿ ಇದ್ದುಕೊಂಡೆ ಧರ್ಮದ ಜಗತ್ತು ಗೆದ್ದ ಆದರ್ಶ ಮಹಿಳೆಯಾಗಿದ್ದಳು ಎಂದು ಡಾ.ಸುಭಾಷಚಂದ್ರ ಕೌಲಗಿ ಅವರು ಹೇಳಿದರು.

ಸಚಿವ ಸುಧಾಕರ ನಿಧನದ ಹಿನ್ನಲೆಯಲ್ಲಿ ಸರಳ ಸಮಾರಂಭ ಸಚಿವ ಸುಧಾಕರ ಅವರ ನಿಧನದ ಹಿನ್ನಲೆಯಲ್ಲಿ ಸರ್ಕಾರ ಆದೇಶದಂತೆಯೇ ಕಾರ್ಯಕ್ರಮ ಅತ್ಯಂತ ಸರಳವಾಗಿ ಆಚರಿಸಲಾಯಿತು. ಆರಂಭದಲ್ಲಿ ಅವರ ಆತ್ಮಕ್ಕೆ ಶಾಂತಿಕೋರಿ ಒಂದು ನಿಮಿಷ ಮೌನ ಆಚರಿಸಲಾಯಿತು. ನಂತರ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ದೀಪ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿದರು.

ಎಡಿಸಿ ರಮೇಶ ಕೋಲಾರ, ಯುಡಾ ಅಧ್ಯಕ್ಷ ಬಾಬುರಾವ ಕಾಡ್ಲೂರ, ವೀರಶೈವ ರೆಡ್ಡಿ ಸಮಾಜದ ಜಿಲ್ಲಾಧ್ಯಕ್ಷ ರಾಮರೆಡ್ಡಿ ಗೌಡ ತಂಗಡಗಿ, ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ, ಪಿಎಸ್ಐ ಮಂಜನಗೌಡ ಪಾಟೀಲ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ಉತ್ತರಾದೇವಿ ಮಠಪತಿ ವೇದಿಕೆಯಲ್ಲಿ ಇದ್ದರು.

ಭವ್ಯ ಮೆರವಣಿಗೆ ಕಾರ್ಯಕ್ರಮದ ಆರಂಭಕ್ಕೂ ಮುನ್ನ ನಗರದ ಪ್ರಮುಖ ರಸ್ತೆಗಳಲ್ಲಿ ಹೇಮರೆಡ್ಡಿ ಮಲ್ಲಮ್ಮ ಅವರ ಭಾವಚಿತ್ರದ ಮೆರವಣಿಗೆ ಅದ್ದೂರಿಯಾಗಿ ನಡೆಯಿತು.

ವೀರಶೈವ ರೆಡ್ಡಿ ಸಮಾಜದ ಪದಾಧಿಕಾರಿಗಳು, ಯುವಕರು ಸಮಾಜದ ಪ್ರಮುಖರಾದ ಮಲ್ಲಣ್ಣಗೌಡ ಕೌಳೂರು, ಡಾ.ಸಿದ್ದರಾಜರೆಡ್ಡಿ, ಬಸವಂತರೆಡ್ಡಿ ಸೇರಿದಂತೆ ಅನೇಕರು ಇದ್ದರು.

# ಕುಡಿಯವ ನೀರಿನ ಅಭಾವಕ್ಕೆ ಶಾಶ್ವತ ಪರಿಹಾರ ಒದಗಿಸಿ; ಸಂಸದ ಕಾಗೇರಿ

ಕಾರವಾರ, ಮೇ11: ಜಿಲ್ಲೆಯಲ್ಲಿ ಕುಡಿಯುವ ನೀರಿನ ಅಭಾವ ಮರುಕಳಿಸುವ ನಿಶ್ಚಿತ ಗ್ರಾಮಗಳನ್ನು ಗುರುತಿಸಿ, ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆ ಮಾಡಲು ಜೆಜೆಎಂ 2 ಹಂತದಲ್ಲಿ ಶಾಶ್ವತ ಪರಿಹಾರ ಒದಗಿಸಲು ಕ್ರಮವಹಿಸುವಂತೆ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಸೂಚಿಸಿದರು.ಅವರು ಸೋಮವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ, ಜಲ ಜೀವನ ಮಿಷನ್ ಅಡಿ ಮಂಜೂರಾದ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಜಿಲ್ಲೆಯಲ್ಲಿ ಬೇಸಿಗೆ ಅವಧಿಯಲ್ಲಿ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗುತ್ತಿದ್ದು, ಈಗಾಗಲೇ ಗ್ರಾಮ ಪಂಚಾಯತ, ತಾಲೂಕು ಪಂಚಾಯತ ವತಿಯಿಂದ ಖಾಸಗಿ ಬೋರ್‌ವೆಲ್, ಕೊಳವೆ ಬಾವಿ ಹಾಗೂ ಟ್ಯಾಂಕರ್ ಮೂಲಕ ಕುಡಿಯುವ ನೀರು ಒದಗಿಸಲಾಗುತ್ತಿದೆ. ಜೆಜೆಎಂ ಕಾಮಗಾರಿಗಳ ವಿಳಂಬದ ಕುರಿತು ದೂರುಗಳು ಬರುತ್ತಿದ್ದು, ಜೆಜೆಎಂ ಕಾಮಗಾರಿಗಳ ಕಳಪೆ ಕಾಮಗಾರಿ ಮತ್ತು



ಗುಣಮಟ್ಟದಲ್ಲಿ ಲೋಪವಾಗದಂತೆ ಅಧಿಕಾರಿಗಳು ಕ್ರಮವಹಿಸಬೇಕು ಎಂದರು.ಜೆಜೆಎಂ ಕಾಮಗಾರಿಗಳು ವಿಳಂಬವಾಗುತ್ತಿರುವ ಬಗ್ಗೆ ಅಸಮಧಾನ ವ್ಯಕ್ತ ಪಡಿಸಿದ ಅವರು, ಗುತ್ತಿಗೆದಾರರು ಕಾಮಗಾರಿ ಪ್ರಾರಂಭಿಸಲು ವಿನಾಕಾರಣ ವಿಳಂಭ ಮಾಡಿದ್ದಲ್ಲಿ ಅಂತಹ ಗುತ್ತಿಗೆದಾರರಿಗೆ ನೋಟಿಸ್ ನೀಡಿ, ಕಪ್ಪು ಪಟ್ಟಿಗೆ ಸೇರಿಸುವಂತೆ ಸೂಚಿಸಿದ ಅವರು, ಅಗತ್ಯವಿರುವ ಕಡೆ ಆದ್ಯತೆ ಮೇಲೆ ಕುಡಿಯುವ ನೀರಿನ ಸಂಪರ್ಕ ಒದಗಿಸವಂತೆ ಸೂಚಿಸಿದರು.

ಜಿಲ್ಲೆಯಲ್ಲಿ ಜೆಜೆಎಂ ಯೋಜನೆಯಡಿ 965 ಕಾಮಗಾರಿಗಳ ಪೈಕಿ ಪ್ರಥಮ ಹಂತದಲ್ಲಿ 256, 2ನೇ ಹಂತದಲ್ಲಿ 228, 3 ನೇ ಹಂತದಲ್ಲಿ 26 ಹಾಗೂ 4 ಹಂತದಲ್ಲಿ 232 ಕಾಮಗಾರಿ ಮುಕ್ತಯವಾಗಿದೆ. ಪ್ರಥಮ ಹಂತದಲ್ಲಿ ಬಿಟ್ಟು ಹೋದ 250 ಗ್ರಾಮಗಳಿಗೆ ಜೆಜೆಎಂ 2 ಹಂತದಲ್ಲಿ ಮುಂದುವರಿಸಿಕೊಂಡು ಹೊಗಲು ಅನುಮತಿ ದೊರೆತ್ತಿದ್ದು, ಜೆಜೆಎಂ, ಬಹುಗ್ರಾಮ ಕುಡಿಯುವ ನೀರು ಮತ್ತು ಅಮೃತ ಯೋಜನೆಯ ಎಲ್ಲಾ ಕಾಮಗಾರಿಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡುವಲ್ಲಿ ಹಾಗೂ ನಿರ್ವಹಣೆಗೆ ಆದ್ಯತೆ ನೀಡಿದ್ದಲ್ಲಿ ಕುಡಿಯುವ ನೀರನ ಸಮಸ್ಯೆ ಬಗೆಹರಿಸಬಹುದಾಗಿದ್ದು, ಅಧಿಕಾರಿಗಳು ತಳ ಮಟ್ಟದಿಂದ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಿ, ಜನರಿಗೆ ಯೋಜನೆಯ ಸೌಲಭ್ಯಗಳು ದೊರೆಯುವಂತೆ ಮಾಡಬೇಕು ಎಂದರು.

ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಹಣಾಧಿಕಾರಿ ಡಾ. ದಿಲೀಷ್ ಶಶಿ ಮಾತನಾಡಿ, ಹಳಿಯಾಳ, ಮುಂಡಗೋಡನಲ್ಲಿ ಖಾಸಗಿ ಬೋರ್‌ವೇಲ್ ಮೂಲಕ ನೀರು ಪೂರೈಕೆ ಮಾಡಲಾಗುತ್ತಿದ್ದು, 31 ಗ್ರಾಮ ಪಂಚಾಯತನಲ್ಲಿ 68 ಕಡೆ ಹಾಗೂ ಮಂಕಿಯ 16 ವಾರ್ಡನಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಸಲಾಗುತ್ತಿದೆ ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ, ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ, ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತಿತ್ತರರು ಇದ್ದರು.

# ಮೇ ಮಾಹೆಯ ಪಡಿತರ ಧಾನ್ಯ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.11 : ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ, 2013 ರಡಿ ಮೇ 2026 ಮತ್ತು ಜೂನ್ 2026 ರ ಮಾಹೆಯ ಆಹಾರ ಧಾನ್ಯಗಳನ್ನು ಮೇ 2026 ರ ಮಾಹೆಯಲ್ಲಿಯೇ ವಿತರಣೆ ಮಾಡಲು ಸರ್ಕಾರವು ನಿರ್ದೇಶಿಸಿರುವ ಹಿನ್ನಲೆಯಲ್ಲಿ ಮೇ 2026 ರ ಮಾಹೆಯಲ್ಲಿ ರಾಯಚೂರು ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 70 ಕೆ.ಜಿ ಅಕ್ಕಿ ಹಾಗೂ ಕೇಂದ್ರ ಮತ್ತು ರಾಜ್ಯ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 10 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದೆಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ನಜೀರ್ ಅಹ್ಮದ್ ಅವರು ತಿಳಿಸಿದ್ದಾರೆ.

ಪ್ರತಿದಿನ ಬೆಳಿಗ್ಗೆ 06 ರಿಂದ ರಾತ್ರಿ 10 ಗಂಟೆಯವರೆಗೆ ನ್ಯಾಯ ಬೆಲೆ ಅಂಗಡಿಯಲ್ಲಿ ಸರ್ವರ್ ಲಭ್ಯಗೊಳಿಸಿರುವುದರಿಂದ ಪಡಿತರ ಚೀಟಿದಾರರು ಸದರಿ ಸಮಯವನ್ನು ಸದ್ಬಳಕೆಪಡಿಸಿಕೊಂಡು ಸಂಬಂಧಪಟ್ಟ ನ್ಯಾಯ ಬೆಲೆ ಅಂಗಡಿಯ ಮುಖಾಂತರ ಪಡಿತರ ಪಡೆಯುವ ಸಮಯದಲ್ಲಿ 02 ಬಾರಿ ಬಯೋಮೆಟ್ರಿಕ್ ನೀಡುವುದನ್ನು ಕಡ್ಡಾಯಗೊಳಿಸಲಾಗಿದೆ. ಮತ್ತು ಅನ್ನಸುವಿಧಾ ಯೋಜನೆಯ ಪಡಿತರ ಫಲಾನುಭವಿಗಳು ಮೇ ಮತ್ತು ಜೂನ್ 2026 ರ ಮಾಹೆಯಲ್ಲಿ ತಮ್ಮ ಹತ್ತಿರದ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ 02 ಬಾರಿ ಬಯೋಮೆಟ್ರಿಕ್ ನೀಡಿ ಪಡಿತರವನ್ನು ಪಡೆದುಕೊಳ್ಳಬಹುದಾಗಿದೆ.

ಒಂದು ವೇಳೆ ಪಡಿತರ ಚೀಟಿ–ದಾರರು ಕೇವಲ ಒಂದೇ ಬಾರಿ ಬಯೋಮೆಟ್ರಿಕ್ ನೀಡಿದ್ದಲ್ಲಿ ಸದರಿ ಯೋಜನೆಯಡಿ ಜೂನ್ 2026 ರ ಮಾಹೆಗೆ ಹಂಚಿಕೆಯಾದ ಆಹಾರ ಧಾನ್ಯಗಳನ್ನು ವಿತರಿಸಲು ಸಾಧ್ಯವಾಗುವುದಿಲ್ಲ ಮತ್ತು ಸದರಿ ಮಾಹೆಯ ಆಹಾರ ಧಾನ್ಯಗಳು ವ್ಯಪಗತವಾಗುತ್ತದೆ. ಪ್ರಯುಕ್ತ ಮೇ 2026 ರ ಮಾಹೆಯಲ್ಲಿ ದಿನಾಂಕ: 31.05.2026 ರೊಳಗಾಗಿ 02 ಬಾರಿ ಬಯೋಮೆಟ್ರಿಕ್ ನೀಡಿ ಪಡಿತರವನ್ನು ಪಡೆದುಕೊಳ್ಳಬಹುದಾಗಿದೆ.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ನಜೀರ್ ಅಹ್ಮದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಅಂಕಲಿ ಶ್ರೀಗಳಿಂದ ಅಕ್ಕಿ ಪಾಯಸ ಪೂಜೆ



• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಸಮೀಪದ ಅಂಕಲಿ ಮಠ ಶ್ರೀ ನಿರೂಪಾದೇಶ್ವರ ಜಾತ್ರೆಯಲ್ಲಿ ಭಕ್ತರಿಗಾಗಿ ಏರ್ಪಡಿಸಲಾದ ಅನ್ನಪ್ರಸಾದ ಅಕ್ಕಿ ಪಾಯಸಕ್ಕೆ ಪೂಜೆಗೆ ಅಂಕಲಿ ಶ್ರೀ ವೀರಭದ್ರ ಮಹಾಸ್ವಾಮಿ ನೇತೃತ್ವದಲ್ಲಿ ರವಿವಾರ ಸಂಭ್ರಮದಿಂದ ಜರುಗಿತು. ಅಂಕಲಿ ಶ್ರೀಗಳು ಅಕ್ಕಿ ಪಾಯಸವನ್ನು ದೇವರಿಗೆ ಸಮರ್ಪಿಸುವ ಪೂಜಾ ವಿಧಾನವು ತುಂಬಾ ವಿಶೇಷ ಮತ್ತು ಸಾಂಪ್ರದಾಯಿಕವಾಗಿದೆ. ಅಂಕಲಿ ಶ್ರೀ ಫಕೀರಸ್ವಾಮಿಜೀಯ ಹಾಗೂ ಹಿರಿಯ ಶ್ರೀಗಳ ಸುಪುತ್ರ ಬಸವರಾಜಸ್ವಾಮೀಜಿವರು ಸರ್ವಭಕ್ತರ ಸಮ್ಮುಖದಲ್ಲಿ ಸುಡುವ ಅಕ್ಕಿ ಪಾಯಸದಲ್ಲಿ ಕೈ ಹಾಕಿ ಭಕ್ತಿಪರಕಾಷ್ಠೇ ಜರುಗಿತು. ಪೂಜೆಯ ನಂತರ ಪಾಯಸವನ್ನು ಪ್ರಸಾದದ ರೂಪದಲ್ಲಿ ಭಕ್ತರೆಲ್ಲರೂ ಸ್ವೀಕರಿಸಿದರು.

ಜಾತ್ರಾ ಮಹೋತ್ಸವದಲ್ಲಿ ಆಗಮಿಸಿದ ಭಕ್ತಾದಿಗಳು ಉಪಸ್ಥಿತರಿದ್ದರು.



ಗುರುಮಠಕಲ್: ಹೇಮರೆಡ್ಡಿ ಮಲ್ಲಮ್ಮ ಕ್ಷೇಮಾಭಿವೃದ್ಧಿ ಹಾಗೂ ಸಹಕಾರ ಸಂಘ ಗುರುಮಠಕಲ್ ಭವನದಲ್ಲಿ ಹೇಮರೆಡ್ಡಿ ಮಲ್ಲಮ್ಮನವರ ಜಯಂತೋತ್ಸವ ಕಾರ್ಯಕ್ರಮವನ್ನು ಭಾನುವಾರ ಆಚರಿಸಲಾಯಿತು.

## ತದಡಿಯ ದಿವಾಕರ ನಾಯ್ಕ ಹೃದಯಾಘಾತದಿಂದ ನಿಧನ

• ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ



ಇಲ್ಲಿಯ ಸಮೀಪದ ತದಡಿಯ ದಿವಾಕರ ಮಾಣಿ ನಾಯ್ಕ (75) ಇವರು ಹೃದಯಘಾತದಿಂದ ಶುಕ್ರವಾರ ರಾತ್ರಿ ನಿಧನರಾಗಿದ್ದಾರೆ. ತೀವ್ರ ಅಸ್ವಸ್ಥಗೊಂಡಿದ್ದರಿಂದಾಗಿ ತಕ್ಷಣ ಆಸ್ಪತ್ರೆಗೆ ದಾಖಲಿಸಿದ ಸಮಯದಲ್ಲಿಯೇ ಪ್ರಾಣಪಕ್ಷಿ ಹಾರಿಹೋಗಿದೆ.

ಮೃದು ವ್ಯಕ್ತಿತ್ವದವರಾದ ಇವರ ಸಾವಿಗೆ ಹಲವರು ಕಂಬನಿ ವ್ಯಕ್ತಪಡಿಸಿದ್ದಾರೆ. ಮೃತರಿಗೆ ಪತ್ನಿ ನಿರ್ಮಲಾ ದಿವಾಕರ ನಾಯ್ಕ, ಮಕ್ಕಳಾದ ಸುಬ್ರಹ್ಮಣ್ಯ ನಾಯ್ಕ, ಶಾಂತೇಶ ನಾಯ್ಕ ಸೇರಿದಂತೆ ಅಪಾರ ಬಂಧು ಬಳಗವಿದೆ.

## ಶಿವಶರಣೆ ಸಾಧ್ವಿ ಶಿರೋಮಣಿ ಮಲ್ಲಮ್ಮನವರ 604ನೇ ಜಯಂತಿ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ತಾಲೂಕಿನ ಚಿತ್ತಾಪುರ ಗ್ರಾಮದಲ್ಲಿ ಶಿವಶರಣೆ ಸಾಧ್ವಿ ಶಿರೋಮಣಿ ಮಲ್ಲಮ್ಮನವರ 604ನೇ ಜಯಂತಿಯನ್ನು ಆಚರಿಸಲಾಯಿತು ಈ ಸಮಯದಲ್ಲಿ ಸಮಾಜಕ್ಕೆ ಹಾಗೂ ಮಹಿಳೆಯರಿಗೆ ಹೇಮರೆಡ್ಡಿ ಮಲ್ಲಮ್ಮನವರ ಆದರ್ಶ ಮತ್ತು ಕೊಡುಗೆ ಅಪಾರವಾದದ್ದು ತಮ್ಮ ಭಕ್ತಿಯಿಂದ ಶಿವನನ್ನು ಧರೆಗಿಳಿಸಿಕೊಂಡು ರೆಡ್ಡಿ ಸಮಾಜಕ್ಕೆ ಯಾವತ್ತೂ ಬಡತನವನ್ನು ನೀಡಬೇಡ ಎಂದು ಭಗವಂತನಲ್ಲಿ ವರ ಪಡೆದ ಮಹಾಸಾಧ್ವಿ ಎಂದು ಎಂಎಲ್ಸಿ ಆಪ್ತ ಕಾರ್ಯದರ್ಶಿಯಾದ ಚೆನ್ನಾರೆಡ್ಡಿ ಬಿರಾದಾರ ಮಾತನಾಡಿದರು ಈ ಸಂದರ್ಭದಲ್ಲಿ ಬಸಣ್ಣ ಜವಳಗೇರಿ. ಶರಣಗೌಡ ಪೊಲೀಸ್ ಪಾಟೀಲ.ಬಿ ಎಂ ಪಾಟೀಲ. ದೇಸಾಯಪ್ಪ ಕೊಡಲಿ.

ತಾಲೂಕ ಕಾಂಗ್ರೆಸ್ ಹಿಂದುಳಿದ ವರ್ಗದ ಅಧ್ಯಕ್ಷರಾದ ಪ್ರಕಾಶ್ ಕುರಿ. ಬಸಯ್ಯಸ್ವಾಮಿ. ಮಲ್ಲಣ್ಣ ನ್ಯಾಮಣ್ಣವರ. ಜೆಟ್ಟೆಪ್ಪ . ರಾಮಣ್ಣ ಕುರಿ. ಅಮರೇಗೌಡ. ಯುವಕರಾದ ಪ್ರದೀಪ ಪಾಟೀಲ. ಮಲ್ಲಿಕಾರ್ಜುನ್ ಬಿರಾದಾರ. ಅಭಿಷೇಕ್ ಹಾಗೂ ಇತರರಿದ್ದರು.

# ಸಾವಿನ ದವಡೆಯಲ್ಲಿದ್ದ ತಾಯಿ–ಮಗುವಿಗೆ ಮರುಜನ್ಮ ನೀಡಿದ ವೈದ್ಯರು

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.11 : ಸರ್ಕಾರಿ ಆಸ್ಪತ್ರೆ ಎಂದ–ರೆ ಮೂಗು ಮುರಿಯುವವರ ನಡುವೆ ಸಿಂಧನೂರಿನ ಸರ್ಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ವೈದ್ಯರು ಮತ್ತು ಸಿಬ್ಬಂದಿ ವರ್ಗವು ಅಸಾಧ್ಯವಾದುದನ್ನು ಸಾಧ್ಯವಾಗಿಸಿ ತೋರಿಸಿದ್ದಾರೆ. ಅತ್ಯಂತ ಸಂಕೀರ್ಣವಾದ ವೈದ್ಯಕೀಯ ಸ್ಥಿತಿಯಲ್ಲಿದ್ದ ಗರ್ಭಿಣಿಯೊಬ್ಬರನ್ನು ಸಾವಿನ ದವಡೆಯಿಂದ ಮರಳಿ ತರುವ ಮೂಲಕ ಮಾನವೀಯತೆ ಮತ್ತು ವೃತ್ತಿಪರತೆಗೆ ಹೊಸ ಭಾಷ್ಯ ಬರೆದಿದ್ದಾರೆ.

ಶ್ರೀಮತಿ ಸೃಷ್ಟಿ ಎಂಬ 34 ವಾರಗಳ ಗರ್ಭಿಣಿ ತೀವ್ರ ರಕ್ತದೊತ್ತಡದೊಂದಿಗೆ (210/120 ಎಮ್‌ಎಮ್ ಹೆಚ್‌ಜಿ) ಆಸ್ಪತ್ರೆಗೆ ದಾಖಲಾದಾಗ ಅವರ ಸ್ಥಿತಿ ಅತ್ಯಂತ ಗಂಭೀರವಾಗಿತ್ತು. ಪ್ರಜ್ಞಾಹೀನ ಸ್ಥಿತಿಯಲ್ಲಿದ್ದ ಅವರಿಗೆ ಶ್ವಾಸಕೋಶದಲ್ಲಿ ನೀರು ತುಂಬಿಕೊಂಡು (PulmonaryOedema), ಆಮ್ಲಜನಕದ ಮಟ್ಟ (SPO2) ಕೇವಲ 40%ಕ್ಕೆ ಕುಸಿದಿತ್ತು. ವೈದ್ಯಕೀಯ ಭಾಷೆಯಲ್ಲಿ ಇದನ್ನು ನಿಯರ್ ಮಿಸ್ (Near Miss) ಕೇಸ್ ಎನ್ನಲಾಗುತ್ತದೆ. ರೋಗಿಯನ್ನು ಉನ್ನತ ಚಿಕಿತ್ಸೆಗಾಗಿ ರಾಯಚೂರಿಗೆ ಕಳುಹಿಸಲು ಸಮಯವೇ ಇರಲಿಲ್ಲ, ಪ್ರತಿ ಸೆಕೆಂಡ್ ಕೂಡ ಪ್ರಾಣಾಪಾಯವನ್ನು ಹೊತ್ತು ತಂದಿತ್ತು. ಇಂತಹ ಸಂದರ್ಭದಲ್ಲಿ ಎದೆಗುಂದದ ತಾಯಿ ಮಕ್ಕಳ ಆಸ್ಪತ್ರೆಯ ತಂಡವು ತಕ್ಷಣವೇ ಕಾರ್ಯಪ್ರವೃತ್ತವಾಯಿತು. ತುರ್ತಾಗಿ ಖಾಸಗಿ ಆಸ್ಪತ್ರೆಯಿಂದ ವೆಂಟಿಲೇಟರ್ ವ್ಯವಸ್ಥೆ ಮಾಡಲಾಯಿತು. ಒಂದು ಕಡೆ ರೋಗಿಯ ಸ್ಥಿತಿ ಕ್ಷಣಕ್ಷಣಕ್ಕೂ ಕ್ಷೀಣಿಸುತ್ತಿದ್ದರೆ. ಮತ್ತೊಂದೆಡೆ ವೈದ್ಯರ ತಂಡವು ಜೀವ ಉಳಿಸುವ ಪಣ ತೊಟ್ಟಿತು. ಆನ್ ಟೇಬಲ್ ಡೆತ್ ಸಂಭವಿಸುವ ಅಪಾಯವಿದ್ದರೂ ರೋಗಿಯ ಪೋಷಕರು ವೈದ್ಯರ ಮೇಲೆ ನಂಬಿಕೆಯಿಟ್ಟು ಶಸ್ತ್ರ ಚಿಕಿತ್ಸೆಗೆ ಒಪ್ಪಿಗೆ ನೀಡಿದರು.

ವೈದ್ಯರಾದ ಡಾ.ಶಕುಂತಲಾ ಪಾಟೀಲ್, ಡಾ.ಕಾವೇರಿ ಶಾವಿ, ಡಾ.ವಿದ್ಯಾ, ಡಾ.ಶೋಭಾ,



ಡಾ.ಫರ್ಹತ್ ಮತ್ತು ಡಾ.ಹನುಮಂತ ರೆಡ್ಡಿ ಅವರ ನೇತೃತ್ವದ ತಂಡವು ಯಶಸ್ವಿಯಾಗಿ ತುರ್ತು ಶಸ್ತ್ರಚಿಕಿತ್ಸೆ ನಡೆಸಿ ಜೀವಂತ ಮಗುವನ್ನು ಹೊರತೆಗೆದರು. ಶಸ್ತ್ರ ಚಿಕಿತ್ಸೆಯ ನಂತರ ತಾಯಿಯನ್ನು ಹೆಚ್ಚಿನ ನಿಗಾಕ್ಕಾಗಿ ವೆಂಟಿಲೇಟರ್‌ಗೆ ಸ್ಥಳಾಂತರಿಸಲಾಯಿತು.

ಫಲಿಸಿದ ಶ್ರಮ, ಚೇತರಿಸಿಕೊಂಡ ತಾಯಿ–ಮಗು: ವೈದ್ಯಕೀಯ ತಂಡದ ಸತತ ಪರಿಶ್ರಮದ ಫಲವಾಗಿ ಶ್ರೀಮತಿ ಸೃಷ್ಟಿ ಅವರು ಇದೀಗ ವೆಂಟಿಲೇಟರ್‌ನಿಂದ ಹೊರಬಂದಿದ್ದು, ಚೇತರಿಸಿಕೊಳ್ಳುತ್ತಿದ್ದಾರೆ. ಮಗು ಕೂಡ ಎನ್‌ಐಸಿಯುನಲ್ಲಿ ಸುರಕ್ಷಿತವಾಗಿದ್ದು, ಒಂದು ದೊಡ್ಡ ದುರಂತವು ಪವಾಡ ಸದೃಶವಾಗಿ ಸುಖಾಂತ್ಯ ಕಂಡಿದೆ.

ಈ ಯಶಸ್ಸಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿಗಳು ಡಾ.ಸುರೇಂದ್ರ ಬಾಬು, ಮತ್ತು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಅವರ ಬೆಂಬಲ ಹಾಗೂ ಪ್ರೇರಣೆ ಬಹುದೊಡ್ಡ ಶಕ್ತಿಯಾಗಿತ್ತು.

ವ್ಯವಸ್ಥೆಯ ನಡುವೆ ಮಿಂಚಿದ ಸೇವೆಯು, ಸರ್ಕಾರಿ ಆಸ್ಪತ್ರೆಗಳಲ್ಲಿ ನುರಿತ ವೈದ್ಯಕೀಯ ತಂಡ, ಸುಸಜ್ಜಿತ ಕಟ್ಟಡ, ಗುಣಮಟ್ಟದ ಅತ್ಯಾಧುನಿಕ ಸಲಕರಣೆಗಳು, ರಾಷ್ಟ್ರೀಯ ಗುಣಮಟ್ಟ ಮಾನದಂಡಿಯ ಹೆರಿಗೆ ಕೊಠಡಿ, ವಾರ್ಡ್, ಬೇಬಿ ವಾರ್ಮರ್, ಬಾಣಂತಿಗೆ ಪೌಷ್ಟಿಕ ಆಹಾರ, ಸೂಕ್ತ ಆರೈಕೆ, ಔಷಧಿ ವಿತರಣೆ, ಮನೆಗೆ ಬಿಡಲು ನಗುಮಗು ವಾಹನ ಲಭ್ಯತೆ ಇರುವುದನ್ನು ಖಾತರಿಪಡಿಸಿವೆ.

ಕೆಲವು ಅನಗತ್ಯ ಸಾಮಾಜಿಕ ಒತ್ತಡಗಳ ನಡುವೆಯೂ ಈ ಸಾಧನೆ ಮಾಡಲಾಗಿದೆ. ಎಂಬುದು ಗಮನಾರ್ಹ. ವೈದ್ಯರಿಗೆ ಒತ್ತಡರಹಿತ ವಾತಾವರಣ ಮತ್ತು ಸಾರ್ವಜನಿಕರ ವಿಶ್ವಾಸ ಸಿಕ್ಕರೆ ಇಂತಹ ಪವಾಡಗಳನ್ನು ಮಾಡಲು ಸಾಧ್ಯ ಎಂದು ಈ ಘಟನೆ ಸಾಬೀತುಪಡಿಸಿದೆ.

ತಮ್ಮ ಪ್ರಾಣವನ್ನು ಪಣಕ್ಕಿಟ್ಟು ಹೋರಾಡಿದ ಈ ವೈಟ್ ಕೋಟ್ ಯೋಧರಿಗೆ ಮತ್ತು ಅವರಿಗೆ ಸಾಥ್ ನೀಡಿದ ಶುಶ್ರೂಷಣಾ ಅಧಿಕಾರಿಗಳಾದ ಶಾರದಾ, ಜಯಂತಿ, ಪುಷ್ಪರಾಣಿ, ಗೌತಮಿ, ಚೈತ್ರಾ ಹಾಗೂ ಇತರ ಸಿಬ್ಬಂದಿ ವರ್ಗದ ಶ್ರಮವು ಇದರ ಹಿಂದೆ ಇದೆ ಎಂದರೆ ತಪ್ಪಾಗಲಾರದು ಎಂದು ಸಿಂಧನೂರಿನ ಸರ್ಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ವೈದ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರಿಂದ ಬಿಳಿಜೋಳ ಖರೀದಿಸುವ ಪ್ರಕ್ರಿಯೆ ಪ್ರಾರಂಭ: ಉಪ ನಿರ್ದೇಶಕ ನಜೀರ್ ಅಹ್ಮದ್

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.11: ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ವತಿಯಿಂದ 2025–26ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಹಿಂಗಾರು ಋತುವಿನಲ್ಲಿ ನೋಂದಣಿ ಮಾಡಿಕೊಂಡಿರುವ ರೈತರಿಂದ ಬಿಳಿಜೋಳವನ್ನು ಖರೀದಿಸುವ ಪ್ರಕ್ರಿಯೆಯನ್ನು ಆರಂಭಿಸಲಾಗಿದ್ದು, ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಲಾದ ಅನುಕ್ರಮವಾರು ರೈತರಿಂದ ಖರೀದಿಯನ್ನು ಮಾಡಲಾಗುವುದು ಎಂದು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸದಸ್ಯ ಕಾರ್ಯದರ್ಶಿಗಳು ಆಗಿರುವ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹ್ಮದ್ ಅವರು ತಿಳಿಸಿದ್ದಾರೆ.



ರೈತರು ಈಗಾಗಲೇ ತಮ್ಮ ಎಫ್‌ಐಡಿಯೊಂದಿಗೆ ನೋಂದಣಿ ಮಾಡಿಕೊಂಡಿದ್ದು, ದಿನಾಂಕ: 11.05.2026ರಿಂದ ಜಿಲ್ಲೆಯಲ್ಲಿರುವ ಎಲ್ಲಾ ಖರೀದಿ ಕೇಂದ್ರಗಳಲ್ಲಿ ಖರೀದಿ ಪ್ರಕ್ರಿಯೆಯನ್ನು ಆರಂಭಿಸಲಾಗುತ್ತಿದೆ. ಖರೀದಿ ಕೇಂದ್ರಗಳಲ್ಲಿ ನೋಂದಾಯಿಸಲಾದ ಅನುಕ್ರಮವಾರು ರೈತರಿಂದ ಖರೀದಿಯನ್ನು ಮಾಡಲಾಗುವುದು. ರೈತರು ಆತುರ ಪಡದೇ ಅಥವಾ ನೂಕು ನುಗ್ಗಲು ಮಾಡದೇ ತಮಗೆ ಖರೀದಿ ಕೇಂದ್ರದಿಂದ ನೀಡಲಾಗುವ ದಿನಾಂಕವಾರು ತಾವು ಬೆಳೆದಿರುವ ಜೋಳವನ್ನು ಸರಬರಾಜು ನೀಡುವುದು. ಅಲ್ಲದೇ ಖರೀದಿ ಕೇಂದ್ರಕ್ಕೆ ಬರುವ ಮುಂಚಿತವಾಗಿಯೇ ದಾಸ್ತಾನಿನ ಗುಣಮಟ್ಟ, ತೇವಾಂಶ ಹಾಗೂ ಸ್ವಚ್ಛತೆಯ ಬಗ್ಗೆ ಖಾತ್ರಿಪಡಿಸಿಕೊಳ್ಳಬೇಕು.

ಈಗಾಗಲೇ ಜಿಲ್ಲೆಯಲ್ಲಿ ನೋಂದಣಿಯಾಗಿರುವ ಸರ್ವೆ ನಂ ಹಾಗೂ ಎಫ್‌ಐಡಿಗಳನ್ನು ಬೆಳೆದರ್ಶಕ ಆಪ್ ಮುಖಾಂತರ ನೈಜ್ಯತೆಯನ್ನು ಪರಿಶೀಲಿಸಲಾಗುವುದು. ಸಂಶಾಯತ್ಮಾಕ ಹಾಗೂ ಬಿಳಿ ಜೋಳವನ್ನು ಬೆಳೆಯದೇ ಇರುವ ಸರ್ವೆ ನಂ. ವಾರು ಎಫ್‌ಐಡಿಗಳನ್ನು ಬ್ಲಾಕ್ ಮಾಡಲು ಕ್ರಮವಹಿಸಲಾಗಿದೆ. ಇದಕ್ಕೆ ಆಕ್ಷೇಪಣೆಗಳೇನಾದರು ಇದ್ದಲ್ಲಿ ಸರ್ಮಥನೀಯ ದಾಖಲೆಗಳೊಂದಿಗೆ ಆಯಾ ತಾಲ್ಲೂಕಿನ ತಹಶೀಲ್ದಾರರ ಕಚೇರಿಗೆ ಸಂಪರ್ಕಿಸಬಹುದಾಗಿದೆ. ಮತ್ತು ಬಿಳಿ ಜೋಳವನ್ನು ಬೆಳೆಯದೇ ನೋಂದಣಿ ಮಾಡಿಕೊಂಡು ಖರೀದಿ ಕೇಂದ್ರಗಳಿಗೆ ಜೋಳವನ್ನು ಸರಬರಾಜು ಮಾಡಿರುವುದು ಕಂಡುಬಂದಲ್ಲಿ ಅಂತವರ ವಿರುದ್ಧ ಕಾನೂನತ್ಮಕ ಕ್ರಮವನ್ನು ಕೈಗೊಳ್ಳುವುದಲ್ಲದೇ ಈ ಖರೀದಿಯ ಹಣವನ್ನು ತಡೆ ಹಿಡಿಯಲಾಗುವುದು ಎಂದು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸದಸ್ಯ ಕಾರ್ಯದರ್ಶಿಗಳು ಆಗಿರುವ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹ್ಮದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಗ್ಯಾರೆಂಟಿ ನ್ಯೂಸ್ ವತಿಯಿಂದ ಗೇಮ್ ಚೇಂಜ್ ಅವಾರ್ಡ್ ಜೀರೋ ಟು ಹೀರೋ ಅವಾರ್ಡ್ ಸ್ವೀಕರಿಸಿದ ರಾಜ್ಯ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾದ ತ್ರಿವೇಣಿ ಅವರಿಗೆ ಸಚಿವರದ ಲಕ್ಷ್ಮಿ ಹೆಬ್ಬಾಳ್ಕರ್ ನೀಡಿ ಸನ್ಮಾನಿಸಿ ಗೌರವಿಸಿದರು ಈ ಸಂದರ್ಭದಲ್ಲಿ ಹುಣಸೂರು ತಾಲೂಕಿನ ಸಂಗೊಳ್ಳಿ ರಾಯಣ್ಣ ತಾಲೂಕು ಅಧ್ಯಕ್ಷ ಅಶೋಕ್ ಕುಮಾರ್ ಹಾಗೂ ಇನ್ನಿತರ ಹಾಜರಿದ್ದರು

# ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ನಿವಾರಣೆಗೆ ಗಮನ ನೀಡಿ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ :11: ತೀವ್ರ ಬೇಸಿಗೆ ಕಾಲದ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅವಶ್ಯಕ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಜಿಲ್ಲೆಯಲ್ಲಿ ಕೊಳವೆ ಬಾವಿಗಳ, ಆರ್ ಓ ಪ್ಲಾಂಟ್ಗಳ ಸಮರ್ಪಕ ಕಾರ್ಯನಿರ್ವಹಣೆ ಬಗ್ಗೆ ಸೂಕ್ತ ನಿಗಾವಹಿಸಬೇಕು. ದುರಸ್ತಿ ಇರುವ ಆರ್ ಓ ಪ್ಲಾಂಟ್ಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕು. ಅದರಂತೆ ಕುಡಿಯಲು ಯೋಗ್ಯವಿರುವ ನೀರು ಬಳಸುವ ಬಗ್ಗೆ ಸೂಕ್ತ ತಿಳಿವಳಿಕೆ ನೀಡುವಂತೆ ಅವರು ಸೂಚನೆ ನೀಡಿದರು.

ಗ್ರಾಮೀಣ ಹಾಗೂ ನಗರ ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ತೀವ್ರ ನಿಗಾ ಇಡಬೇಕು. ನಾರಾಯಣಪುರ ಡ್ಯಾಂ, ಗೂಗಲ್ ಬ್ಯಾರೇಜ್ ಸೇರಿದಂತೆ ವಿವಿಧ ಜಲಾಶಯಗಳಲ್ಲಿನ ನೀರಿನ ಸಂಗ್ರಹ ಇಟ್ಟುಕೊಳ್ಳುವ ಜೊತೆಗೆ, ಲಭ್ಯತೆ ಬಗ್ಗೆ ಸಮಗ್ರ ಮಾಹಿತಿ ಒದಗಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು. ನೀರಾವರಿ ಇಲಾಖೆ ಅಧಿಕಾರಿಗಳು, ಕಲ್ಬುರ್ಗಿ ಮಾನ್ಯ ಪ್ರಾದೇಶಿಕ ಆಯುಕ್ತರ ಆದೇಶದನ್ವಯ ಕಾಲುವೆಗಳ ಮೂಲಕ ಅವಶ್ಯಕ ನೀರು ಬಿಡಲು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು.

ಜಲಧಾರೆ ಯೋಜನೆಯಡಿ ವಿವಿಧ ಶಾಲಾ,ವಸತಿ ನಿಲಯಗಳಿಗೆ ನಳದ ನೀರು ಸರಬರಾಜು ಸಮಸ್ಯೆಗಳಿಗೆ ಸಂಬಂಧಿಸಿದಂತೆ, ಗ್ರಾಮೀಣ ಕುಡಿಯುವ ನೀರು ಸರಬರಾಜು, ವಿವಿಧ ವಸತಿ ನಿಲಯ ಹೊಂದಿರುವ ಇಲಾಖೆಗಳು, ಶಾಲಾ ಶಿಕ್ಷಣ ಇಲಾಖೆ ಮತ್ತು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಿ ಸಮಸ್ಯೆ ಪರಿಹಾರಕ್ಕೆ ಕ್ರಮ ಕೈಗೊಳ್ಳುವಂತೆ ಅವರು ಸೂಚಿಸಿದರು.

ಜಿಲ್ಲೆಯ ಕೃಷಿ ಹಾಗೂ ತೋಟಗಾರಿಕೆ ಇಲಾಖೆ ವ್ಯಾಪ್ತಿಯಲ್ಲಿ ರಸಗೊಬ್ಬರಗಳ ಸಮರ್ಪಕ ನಿರ್ವಹಣೆಯಾಗುವಂತೆ ನೋಡಿಕೊಳ್ಳಬೇಕು. ಮಾವಿನ ಹಣ್ಣು ಹಾಗೂ ಪೋಮೋಗ್ರೆನೇಟ್, ಮಾರುಕಟ್ಟೆಗಾಗಿ ಈ ಜಿಲ್ಲೆಯ ರೈತರನ್ನು, ವಿಜಯಪುರ, ಬಾಗಲಕೋಟ್, ಇತರೆಬೇರೆ ಜಿಲ್ಲೆಗಳ ರೈತ ಸಂಘಗಳೊಂದಿಗೆ ಸಮನ್ವಯಗೊಳಿಸಿ ರೈತರಿಗೆ ನೆರವಾಗಬೇಕು. ಮತ್ಸ್ಯ ಸಂಜೀವಿನಿ ಹಾಗೂ ಇತರೆ ಮೀನುಗಾರಿಕೆ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಜಿಲ್ಲೆಯಲ್ಲಿ ಎಲ್ಪಿಜಿ, ಕಮರ್ಶಿಯಲ್ ಗ್ಯಾಸ್ ಸಮರ್ಪಕ ವಿತರಣೆ. ಪಡಿತರ ವಿತರಣೆ, ಅರಣ್ಯ ಮತ್ತು ಅಗ್ನಿಶಾಮಕ ಇಲಾಖೆ, ಪಶು ವೈದ್ಯಕೀಯ ಸೇವಾ ಇಲಾಖೆ, ಸಿರಿ ಕಲ್ಚರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ. ಕೆಬಿಜೆ ಎನ್ ಎಲ್ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಅವರು ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರಿನ ಸರಬರಾಜು ಯೋಜನೆಗಳಿಗೆ ನಿರಂತರ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ಜೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿ, ಆರ್ ಓ ಪ್ಲಾಂಟ್ಗಳ ಸ್ಥಿತಿಗತಿ, ನಿರ್ವಹಣೆ ಕುರಿತು ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ, ಸಹಾಯಕ ಆಯುಕ್ತ ಶ್ರೀಧರ್ ಗೋಟುರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಶೇ.92 ಅಂಕ ಪಡೆದ ವಿದ್ಯಾರ್ಥಿಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಶ್ರೀಮತ್ ಜಗದ್ಗುರು ಆನೆಗುಂದಿ ಮಠ ಮಹಾಸಂಸ್ಥಾನ ಸರಸ್ವತಿ ಪೀಠ ಪಡುಕುತ್ಯಾರು ಆವರಣದಲ್ಲಿ, ಅಂಗಳ–2026 ಸನ್ಮಾನ ಸಮಾರಂಭ ವಿಜೃಂಭಣೆಯಿಂದ ನಡೆಯಿತು.

ವಿದ್ಯಾ ಭಾರತಿ ಕರ್ನಾಟಕ ಉಡುಪಿ ಜಿಲ್ಲೆ ಆಯೋಜಿಸಿದ ಅಂಗಳ – 2026 ಸನ್ಮಾನ ಸಮಾರಂಭದಲ್ಲಿ ಸೂರ್ಯ ಚೈತನ್ಯ ಗ್ಲೋಬಲ್ ಅಕಾಡೆಮಿ ಸ್ಕೂಲ್ ಕುತ್ಯಾರು ಶಾಲೆಯಲ್ಲಿ, 10ನೇ ತರಗತಿಯ ಪಬ್ಲಿಕ್ ಪರೀಕ್ಷೆಯಲ್ಲಿ 625ಕ್ಕೆ 575 ಅಂಕ ಪಡೆಯುವ ಮೂಲಕ ಶೇ? 92 ಸಾಧನೆ ಮಾಡುವ ಮೂಲಕ ಬಳ್ಳಾರಿ ಮೂಲದ ವಿದ್ಯಾರ್ಥಿ

ಬೋಧಾಯನ ಶರ್ಮ, ಉಡುಪಿ ಜಿಲ್ಲೆಗೆ ಕೀರ್ತಿತಂದಿದ್ದು, ಶಾಲಾ ಆಡಳಿತ ಮಂಡಳಿ ಮತ್ತು ಅಂಗಳ ಕಾರ್ಯಕ್ರಮ ಆಯೋಜಕರು ವಿದ್ಯಾರ್ಥಿಯನ್ನ ಸನ್ಮಾನಿಸಿ ಗೌರವಿಸಲಾಯಿತು.

# ಜಗತ್ತಿನಲ್ಲಿಯೇ ಅತೀ ಸುಂದರ, ಸುಲಲಿತ ಭಾಷೆ ಕನ್ನಡ ಭಾಷೆ : ಬಿರಾದಾರ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ಪ್ರಪಚಂಚದಲ್ಲಿಯೇ ಅತೀ ಸುಂದರ ಹಾಗೂ ಸುಲಲಿತ ಭಾಷೆ, ಕನ್ನಡ ಭಾಷೆ ಯಾಗಿದೆ ಎಂದು ನಿವೃತ ಪ್ರಾಚಾರ್ಯ ಚಂದ್ರಕಾಂತ ಬಿರಾದಾರ ಹೇಳಿದರು. ಪಟ್ಟಣದ ಸದ್ಗುರು ವಿದ್ಯಾಲಯದಲ್ಲಿ, ಸೋಮವಾರ ಕನ್ನಡ ಸಾಹಿತ್ಯ ಪರಿಷತ್ತು ತಾಲೂಕು ಘಟಕದ ವತಿಯಿಂದ ಆಯೋಜಿಸಿದ್ದ ಕನ್ನಡ ಸಾಹಿತ್ಯ ಪರಿಷತ್ 112ನೆಯ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕರಾಗಿ ಮಾತನಾಡಿದ ಅವರು, ಒಬ್ಬ ವ್ಯಕ್ತಿಯ ಭಾವನೆಗಳು ಇನ್ನೊಬ್ಬರಿಗೆ ತಿಳಿಸುವ ಮಾಧ್ಯಮವೇ ಭಾಷೆಯಾಗಿದೆ, ಇವುಗಳಲ್ಲಿ ಅತಿ ಪುರಾತನ ಭಾಷೆ ಕನ್ನಡ ಭಾಷೆ ಯಾಗಿದೆ. ಜಗತ್ತಿನಲ್ಲಿಯೇ ಅತೀ ಸುಂದರ ಮತ್ತು ಸುಲಲಿತ, ಸರಳ ಭಾಷೆ ಕನ್ನಡ ಭಾಷೆ ಯಾಗಿದೆ. ಎಲ್ಲಾ ಭಾಷೆಗಳ ರಾಣಿ ಕನ್ನಡ ಎಂದು ಬಣ್ಣಿಸಿದರು. ವಿಶೇಷ ಸನ್ಮಾನ ಸ್ವೀಕರಿಸಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಪತ್ರಾಂಕಿತ ವ್ಯವಸ್ಥಾಪಕ ಶಿವಕುಮಾರ್ ಫುಲಾರಿ, ನಾಡು, ನುಡಿ, ನೆಲ, ಜಲದ ರಕ್ಷಣೆಗಾಗಿ ಕನ್ನಡ ಸಾಹಿತ್ಯ ಪರಿಷತ್ತು ರಕ್ಷಣಾ ಕಾವಲುಗಾರನಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕ.ಸಾ.ಪ ತಾಲೂಕು ಅಧ್ಯಕ್ಷ ನಾಗಭೂಷಣ ಮಾಮಡಿ, ಕನ್ನಡ ನಾಡು ನುಡಿ ನೆಲ ಜಲದ ರಕ್ಷಣೆಯೇ ಕ ಸಾ ಪ ದ ಮೂಲ ಉದ್ದೇಶವಾಗಿದೆ. ಜಗತ್ತಿನಲ್ಲಿಯೇ ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿ ಪಡೆದ ಶ್ರೇಷ್ಠ ಸಾಹಿತ್ಯ ಕನ್ನಡ ಸಾಹಿತ್ಯ ವಾಗಿದೆ ಎಂದು ಹೇಳಿದರು. ಇದೇ ವೇಳೆ ರಾಜ್ಯ ಮಟ್ಟದ ಕಾಯಕ ರತ್ನ ಪ್ರಶಸ್ತಿ ಪುರಸ್ಕೃತ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಪತ್ರಾಂಕಿತ ವ್ಯವಸ್ಥಾಪಕ ಶಿವಕುಮಾರ್ ಫುಲಾರಿ ಯವರಿಗೆ ವಿಶೇಷ ಸನ್ಮಾನ ಮಾಡಿ ಗೌರವಿಸಲಾಯಿತು. ಸದ್ಗುರು ವಿದ್ಯಾಲಯದ ಅಧ್ಯಕ್ಷ ಅಕ್ಷ್ಯಕುಮಾರ್ ಮುದ್ದಾ ಪ್ರಸ್ತಾವಿಕ ಮಾತನಾಡಿದರು. ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ್ ಧಾಬಶೆಟ್ಟಿ ಕಾರ್ಯಕ್ರಮ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಬಾಬುರಾವ್ ಮದಕಟ್ಟಿ, ಸಂತೋಷ ಕುಮಾರ ವಾಡೆ, ವೀರಣ್ಣ ಪರಸಣೆ, ರಮೇಶ್ ಮಾನಶೆಟ್ಟಿ, ಚಂದ್ರಕಾಂತ ತಳವಾಡೆ, ಸೂರ್ಯಕಾಂತ ಸುಂಟೆ, ಮಹೇಶ್ ಕೋರಳೆ ಸಿ.ಆರ್.ಪೀ, ಧೂಳಪ್ಪಾ ಹುಣಜೆ, ಸಂತೋಷ್ ಬೀ ಜಿ ಪಾಟೀಲ್, ಸಿದ್ಧರಾಮ, ಕಾವೇರಿ, ಶ್ರುತಿ, ಶಾಂತಾ ಉಪಸ್ಥಿತರಿದ್ದರು. ಅಕ್ಷಯ ಸ್ವಾಗತಿಸಿದರು, ಚಂದ್ರಕಾಂತ ನಿರೂಪಿಸಿದರು, ಸಂತೋಷ್ ವಂದಿಸಿದರು.

ಕರ್ನಾಟಕದ ಯಾವ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದರು, ಅವರಿಗೆ ಕನ್ನಡ ಕಡ್ಡಾಯವಾಗಿ ಮಾತನಾಡಲು, ಬರೆಯಲು ಬರಬೇಕು, ಕನ್ನಡ ಬಾರದೇ ಇದ್ದವರಿಗೆ ತಕ್ಷಣವೇ ಕೆಲಸದಿಂದ ಕಿತ್ತು ಹಾಕುವ ಕಾರ್ಯ ವಾಗಬೇಕು. ಕೆಲವು ಶಿಕ್ಷಕರು 15 ರಿಂದ 20 ವಸ್ತುಗಳಿಂದ ಕರ್ನಾಟಕದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ ಅವರಿಗೆ ಇಂದಿಗೂ ಸಹ ಕನ್ನಡ ಮಾತನಾಡಲು ಬರುತ್ತಿಲ್ಲ ಇದು ವಿಶಾದದ ಸಂಗತಿ ಯಾಗಿದೆ.

**– ಚಂದ್ರಕಾಂತ ಬಿರಾದಾರ, ನಿವೃತ್ತ ಪ್ರಾಚಾರ್ಯರು, ಭಾಲ್ಕಿ.**

# ವಿದ್ಯಾಭ್ಯಾಸದೊಂದಿಗೆ ಮಕ್ಕಳಿಗೆ ದೀನ್ ತಾಲೀಮ ನೀಡಲು ಕರೆ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಪೋಷಕರು ತಮ್ಮ ಮಕ್ಕಳಿಗೆ ತಮ್ಮ ವಿದ್ಯಾಭ್ಯಾಸದ

ಜೊತೆಗೆ ದೀನ್ ತಾಲಿಮ ನೀಡುವುದರಲ್ಲಿ ಬಹಳ ಆಸಕ್ತಿಯನ್ನು ಮಕ್ಕಳಿಗೆ ತೋರಿಸಬೇಕು ಎಂದು ಜಾಮಿಯಾ ಮಸೀದಿಯ ಅಧ್ಯಕ್ಷರಾದ ಹಜರತ್ ಜಾನ್ ತಿಳಿಸಿದ್ದಾರೆ ನಗರ ಬಜಾರ್ ರಸ್ತೆಯಲ್ಲಿರುವ ಜಾಮಿಯಾ ಮಸೀದಿಯಲ್ಲಿ ದೀನೀ ತಾಲಿಂ ಶಿಬಿರ ತರಬೇತಿ ಪಡೆದ ಮಕ್ಕಳಿಗೆ ಬಹುಮಾನ ಹಾಗೂ ನೆನಪಿನ ಕಾಣಿಕೆ ಪ್ರಮಾಣ ಪತ್ರವನ್ನು ನೀಡಿ ನಂತರ ಕಾರ್ಯಕ್ರಮದಲ್ಲಿ ಮಾತನಾಡಿ ಪೋಷಕರು ಬೇಸಿಗೆ ರಜದಲ್ಲಿ ಮಕ್ಕಳಿಗೆ ಹೇಗೆ ಮುತ್ತೂರ್ ಜಿ ವಹಿಸಿದ್ದೀರಿ ಹಾಗೆ ತಮ್ಮ ಮಕ್ಕಳಿಗೆ ನಮಾಜ್ ಹಾಗೂ ಅರಬ್ಬಿ ಮದುರೆಸೂದ್ರಲ್ಲಿ ಕಳಿಸುವುದರಲ್ಲಿ ಮೊದಲು ಆಸಕ್ತಿ ತೋರಿಸಬೇಕು ಮಕ್ಕಳ ಬಗ್ಗೆ ಪೋಷಕರು ಬಹಳಷ್ಟು ಮುತ್ತರ್ಜಿ ನಿಗಾವಹಿಸಬೇಕು ಎಂದು ಪೋಷಕರಲ್ಲಿ ತಿಳಿಸಿದರು ಈ ಸಂದರ್ಭದಲ್ಲಿ ಜಾಮಿಯಾ ಮಸೀದಿಯ ಉಪಾಧ್ಯಕ್ಷರಾದ ಮೊಹಮ್ಮದ್ ಅಮರ್ ಕಾರ್ಯದರ್ಶಿ ಶಾಜಮಜಂಟಿ ಕಾರ್ಯದರ್ಶಿ ಹೀನಾಯತ್ ಉಲ್ಲಾ ಖಾನ್ ಸದಸ್ಯರಾದ ಮಕಸೂದ್ ಅಲಿಖಾನ್ ಮುನಾವರ್ ಉದ್ದಿನ್ ಖಾನ್ ಅಥಾವಶರೀಫ್ ಖಾಲಿದ್‌ಪಾಷಾ ಫಜಲ್ ಸೈಯದ್ ರಿಜ್ವಾನ್ ಮಸೀದಿಯ ಗುರುಗಳಾದ ಮೊಹಮ್ಮದ್

ರಫಿ ಆಝುಮ್ ಅಮ್ಜದ್ ಶರೀಫ್ ಅಜಮಲ್ ಜನ್ನ ಹಾಗೂ ಇನ್ನಿತರು ಹಾಜರಿದ್ದರು

# ಇಂದು ವಿದ್ಯುತ್ ಗ್ರಾಹಕರ ಸಂವಾದ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ:11: ಇದೇ ದಿನಾಂಕ 12.05.2026 ರಂದು ಬೆಳಿಗ್ಗೆ 10 ಗಂಟೆಗೆ ಕಾರ್ಯ ಮತ್ತು ಪಾಲನೆ ಶೋರಾಪೂರ ಉಪ ವಿಭಾಗ ಕಛೇರಿಯಲಿ ಮಾನ್ಯ ಅಧಿಕ್ಷಕ ಅಭಿಯಂತರರು(ಸಿ) ಕಾರ್ಯ ಮತ್ತು, ಪಾಲನೆ ವಲಯ ಗುವಿಸಕಂನಿ ಕಲಬುರಗಿ ರವರ ಅಧ್ಯಕ್ಷತೆ–ಯಲಿ, ಹಾಗೂ ಕಾರ್ಯನಿರ್ವಾಹಕ ಅಭಿಯಂತರರು (ವಿ) ಕಾರ್ಯ ಮತ್ತು ಪಾಲನೆ ವಿಭಾಗ ಜೆಸ್ಕಾಂ ಶೋರಾಪೂರ ರವರ ಉಪಸ್ಥಿತಿಯಲ್ಲಿ, ವಿದ್ಯುತ್ ಗ್ರಾಹಕರ ಸಂವಾದ ಸಭೆ ಜರುಗಲಿದ್ದು, ಶೋರಾಪೂರ ವಿಭಾಗದ ರೈತರು, ವಿದ್ಯುತ್ ಗ್ರಾಹಕರು ಸದರಿ ಸಭೆಯ ಸದುಪಯೋಗಪಡೆದುಕೊಂಡು ತಮ್ಮ ಸಮಸ್ಯೆಗಳನ್ನು ಇತ್ಯರ್ಥಪಡಿಸಿಕೊಳ್ಳಬೇಕು ಎಂದು ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನೆ ವಿಭಾಗ, ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಭಿವೃದ್ಧಿ ಮಾಡದಿದ್ದರೆ ಬಿಜೆಪಿ ನೇತೃತ್ವದಲ್ಲಿ ಹೋರಾಟ: ಕಲ್ಲೂರ್ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಆಡಳಿತ ಸಂಪೂರ್ಣ ವಿಫಲವಾಗಿದ್ದು, ಹಗರಣಗಳ ಸರಮಾಲೆಯಲ್ಲಿ ಸಿಲುಕಿ-ಕೊಂಡಿದೆ ಎಂದು ಬಿಜೆಪಿ ಒಬಿಸಿ ನಗರಾಧ್ಯಕ್ಷ ದೇವೇಂದ್ರ ದೇಸಾಯಿ ಕಲ್ಲೂರ್ ಆರೋಪಿಸಿದರು.

ಪತ್ರಿಕಾ ಪ್ರಕಟಣೆಯಲ್ಲಿ ಮಾತನಾಡಿದ ಅವರು, ಗುಲ್ಬರ್ಗ ಸೇರಿದಂತೆ ರಾಜ್ಯದ ಹಲವು ಭಾಗಗಳಲ್ಲಿ ಅಭಿವೃದ್ಧಿ ಕಾರ್ಯಗಳು ಶೂನ್ಯವಾಗಿವೆ. ದಲಿತರು, ಹಿಂದೂಗಳು ಹಾಗೂ ವಿಶ್ವಕರ್ಮ ಸಮುದಾಯದ ವಿರುದ್ಧ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದು ದೂರಿದರು.

ರಾಜ್ಯ ಸರ್ಕಾರದ ವಿರುದ್ಧ ಹಾಗೂ ಸಿಎಂ ಸಿದ್ದರಾಮಯ್ಯ ಅವರ ಆಡಳಿತ ವೈಖರಿಯನ್ನು ಖಂಡಿಸಿ ಜೂನ್ 10ರಂದು ಬೆಳಗ್ಗೆ 11 ಗಂ-ಟೆಗೆ ತಿಮ್ಮಾಪುರಿ ಸರ್ಕಲ್‌ನಲ್ಲಿ ವಿನೂತನ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಪ್ರತಿಭಟನೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರು "ಕುಂಭಕರ್ಣ ನಿದ್ದೆ"ಯಲ್ಲಿರುವಂತೆ ವೇಷಧರಿಸಿ ಸರ್ಕಾರದ ನಿರ್ಲಕ್ಷ್ಯವನ್ನು ಖಂಡಿಸಲಾಗುವುದು ಎಂದು ಹೇಳಿದರು.

ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಹಗರಣಗಳು ನಿರಂತರವಾಗಿ ಬೆಳಕಿಗೆ ಬರುತ್ತಿದ್ದು, ಜನರಿಗೆ ಮಂಕುಬೂದಿ ಎರಚುವ ಕೆಲಸ ನಡೆಯುತ್ತಿದೆ. ಮುಡಾ ಹಗರಣ, ವಾಲ್ಮೀಕಿ ಹಗರಣ, ಅಬಕಾರಿ ಹಗರಣ, ಗೃಹಲಕ್ಷ್ಮೀ ಯೋಜನೆ ಸೇರಿದಂತೆ ಹಲವು ವಿಚಾರಗಳಲ್ಲಿ ಸರ್ಕಾರ ಸಿಲುಕಿಕೊಂಡಿದೆ ಎಂದು ಆರೋಪಿಸಿದರು.

ವಿರೋಧ ಪಕ್ಷಗಳು ಧ್ವನಿ ಎತ್ತಿದರೂ ಸರ್ಕಾರ ಅದನ್ನು ಮುಚ್ಚಿಹಾಕಲು ಪ್ರಯತ್ನಿಸುತ್ತಿದೆ. ಗುಲ್ಬರ್ಗ ಜಿಲ್ಲೆಯ ಅಭಿವೃದ್ಧಿಗೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಬಿಜೆಪಿ ನೇತೃತ್ವದಲ್ಲಿ ಉಗ್ರ ಹೋರಾಟ ರೂಪಿಸಲಾಗುವುದು ಎಂದು ದೇವೇಂದ್ರ ದೇಸಾಯಿ ಕಲ್ಲೂರ್ ಎಚ್ಚರಿಸಿದರು.

# ಕಲಾಮಂಡಲದಲ್ಲಿ ವೈಭವದ 'ನೃತ್ಯೋತ್ಸವ' ವಿವಿಧ ಕಲಾತಂಡಗಳ ಮನಮೋಹಕ ಪ್ರದರ್ಶನಕ್ಕೆ ಪ್ರೇಕ್ಷಕರು ಫಿದಾ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ನಗರದ ಅನ್ನಪೂರ್ಣ ಕ್ರಾಸ್ ಬಳಿಯ ಕಲಾಮಂಡಲದಲ್ಲಿ ಜ್ಞಾನದೀಪ ನೃತ್ಯಕಲಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ 'ನೃತ್ಯೋತ್ಸವ' ಕಾರ್ಯಕ್ರಮವು ಅತ್ಯಂತ ವೈಭವ ಹಾಗೂ ಸಂಭ್ರಮದಿಂದ ಜರುಗಿತು.

ಕಾರ್ಯಕ್ರಮವನ್ನು ಸಾಮಾಜಿಕ ಕಾರ್ಯಕರ್ತೆ ಶ್ರೀಮತಿ ಲಕ್ಷ್ಮಿ ದತ್ತಾತ್ರಯ ಪಾಟೀಲ್ ರೇವೂರ ಉದ್ಘಾಟಿಸಿ ಮಾತನಾಡಿ, "ನಮ್ಮ ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಇಂತಹ ನೃತ್ಯ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸುತ್ತವೆ" ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಕಲಾವಿದರಾದ ಸೂರ್ಯಕಾಂತ ನಂದೂರ ಹಾಗೂ ಹಿರಿಯ ನೃತ್ಯ ಕಲಾವಿದ ಯಂಕಪ್ಪ (ಅಕ್ಷಯ್) ಪಾಲ್ಗೊಂಡು ಕಾರ್ಯಕ್ರಮಕ್ಕೆ ಮೆರುಗು ತಂದರು. ಗೌರವ ಅತಿಥಿಯಾಗಿ ನೃತ್ಯ ಕಲಾವಿದ ಸೂರಜ್ ಲೋನಾರ್ ಉಪಸ್ಥಿತರಿದ್ದರು.



ಇದೇ ಸಂದರ್ಭದಲ್ಲಿ ಸಾಹಿತ್ಯಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿದ ಲೇಖಕಿ ಶ್ರೀಮತಿ ಪಲ್ಲವಿ ಆರ್. ಕುಲಕರ್ಣಿ ಅವರನ್ನು ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಯಿತು. ಅವರ ಸಾಹಿತ್ಯ ಸೇವೆಯನ್ನು ಅತಿಥಿಗಳು ಶ್ಲಾಘಿಸಿದರು.

ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ಹೆಸರಾಂತ ಕಲಾತಂಡಗಳಿಂದ ಭರತನಾಟ್ಯ, ಜಾನಪದ ಹಾಗೂ ಸಮೂಹ ನೃತ್ಯಗಳ ವೈವಿಧ್ಯಮಯ ಪ್ರದರ್ಶನಗಳು ನಡೆದವು. ಪಂಚಾಕ್ಷರಿ ಸಂಗೀತ ಕಲಾತಂಡ, ಪ್ರಿಯಾ ನೃತ್ಯಾಲಯ, ವಿ.ವಿ.ಎನ್ ನೃತ್ಯ ಕಲಾತಂಡ, ಸೂರಜ್ ಲೋನಾರ್ ಕಲಾತಂಡ, ಶಾಂತಲೇ ಸಾಂಸ್ಕೃತಿಕ ನೃತ್ಯ ತಂಡ, ಜ್ಯೋತಿ ಜಾನಪದ ಕಲಾತಂಡ, ಮನಸ್ವಿ ಸಾಂಸ್ಕೃತಿಕ ನಾಟ್ಯ ಕಲಾತಂಡ ಹಾಗೂ ಜ್ಞಾನ ಸುರಭಿ ಕಲಾತಂಡಗಳ ಕಲಾವಿದರು ತಮ್ಮ ಅದ್ಭುತ ನೃತ್ಯ ಚಾತುರ್ಯದ ಮೂಲಕ ಪ್ರೇಕ್ಷಕರ ಮನಗೆದ್ದರು.

ಕಾರ್ಯಕ್ರಮವನ್ನು ಶರಣಬಸಪ್ಪ ಬಮನಳ್ಳಿ ನಿರೂಪಿಸಿದರು. ಸಂಸ್ಥೆಯ ಅಧ್ಯಕ್ಷ ಪ್ರೇಮ ಭಾವಿಮನಿ ಹಾಗೂ ಕಾರ್ಯದರ್ಶಿ ಶ್ವೇತಾ ಕಟ್ಟಿಮನಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸಹಕರಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.

# ದ್ವಿತೀಯ ಪಿಯುಸಿ ಸಾಧಕ ವಿದ್ಯಾರ್ಥಿನಿಯರಿಗೆ ಚೇತನ್ ಯೂತ್ ಫಾರಂನಿಂದ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

2025-26ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅಭೂತಪೂರ್ವ ಸಾಧನೆ ಮಾಡಿದ ವಿದ್ಯಾರ್ಥಿನಿಯರಿಗೆ ಚೇತನ್ ಯೂತ್ ಫಾರಂ ವತಿಯಿಂದ ಆತ್ಮೀಯ ಅಭಿನಂದನಾ ಹಾಗೂ ಸನ್ಮಾನ ಸಮಾರಂಭವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಕುಮಾರಿ ಸೃಷ್ಟಿ (ತಂದೆ ಮಲ್ಲಿನಾಥ್) ಹಾಗೂ ಕಲಬುರಗಿ ಜಿಲ್ಲೆಗೆ ಆರನೇ ಸ್ಥಾನ ಪಡೆದ ಕುಮಾರಿ ಪ್ರೀತಿ (ತಂದೆ ಬಸವರಾಜ್) ಅವರನ್ನು ವಿಶೇಷವಾಗಿ ಸನ್ಮಾನಿಸಿ ಅಭಿನಂದಿಸಲಾಯಿತು. ಚೇತನ್ ಯೂತ್ ಫಾರಂನ 1999ನೇ ಸಾಲಿನ ಹಳೆಯ ವಿದ್ಯಾರ್ಥಿಗಳು ಸಾಧಕ ವಿದ್ಯಾರ್ಥಿನಿಯರಿಗೆ ಗೌರವ ಸಮರ್ಪಿಸಿ, ಅವರ ಸಾಧನೆಯನ್ನು ಕೊಂಡಾಡಿದರು.

ಕಾರ್ಯಕ್ರಮಕ್ಕೆ ಶರಣ್ ರಾಜ್ ಚಪ್ಪರಬಂದಿ ಸ್ವಾಗತ ಕೋರಿದರು. ಶ್ರೀಮತಿ ಕವಿತಾ ಶೀಲವಂತ್ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರೆ, ಸತೀಶ್ ಹಿರೇಮಠ ವಂದನಾರ್ಪಣೆ ಸಲ್ಲಿಸಿದರು.

ಚೇತನ್ ಪ್ರೌಢಶಾಲೆಯ 1999ನೇ ಸಾಲಿನ ಹಳೆಯ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ಕಳೆ ತಂದರು. ವಿದ್ಯಾರ್ಥಿನಿಯರ ಈ ಅಪೂರ್ವ ಸಾಧನೆ ಜಿಲ್ಲೆ ಹಾಗೂ ಶಿಕ್ಷಣ ಸಂಸ್ಥೆಗೆ ಹೆಮ್ಮೆ ತಂದಿದ್ದು, ಮುಂದಿನ ಪೀಳಿಗೆಗೆ ಪ್ರೇರಣೆಯಾಗಿದೆ ಎಂದು ಈ ವೇಳೆ ಅಭಿಪ್ರಾಯ ವ್ಯಕ್ತವಾಯಿತು.

# ರಾಷ್ಟ್ರದ ಅಭಿವೃದ್ಧಿಗೆ ತಂತ್ರಜ್ಞಾನವೇ ಚಾಲನಾ ಶಕ್ತಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಯಾವದೇ ಒಂದು ರಾಷ್ಟ್ರದ ಅಭಿವೃದ್ಧಿಯು, ಆ ರಾಷ್ಟ್ರದ ವಿಜ್ಞಾನ ಮತ್ತು ತಂತ್ರಜ್ಞಾನದ ಬೆಳವಣಿಯನ್ನು ಅವಲಂಬಿಸಿದೆ. ಅಮೇರಿಕಾ, ರಷ್ಯಾ, ಜಪಾನದಂತಹ ಮುಂದುವರೆದ ಮುಂತಾದ ರಾಷ್ಟ್ರಗಳು ಅಭಿವೃದ್ಧಿಯಾಗಿವೆಯೆಂದರೆ, ಅದು ಅಲ್ಲಿನ ತಂತ್ರಜ್ಞಾನದ ಬೆಳವಣಿಗೆ ಮತ್ತು ಅದರ ಅಳವಡಿಕೆಯಿಂದಾಗಿದೆ. ಹೀಗಾಗಿ, ಯಾವುದೇ ಒಂದು ರಾಷ್ಟ್ರವು ವೇಗವಾಗಿ ಅಭಿವೃದ್ಧಿ ಹೊಂದಬೇಕಾದರೆ ಅದಕ್ಕೆ ತಂತ್ರಜ್ಞಾನವೇ ಚಾಲನಾ ಶಕ್ತಿಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ಉಪನ್ಯಾಸಕ, ಚಿಂತಕ ಎಚ್.ಬಿ.ಪಾಟೀಲ್ ಅಭಿಮತ ವ್ಯಕ್ತಪಡಿಸಿದರು.



ಜೇವರ್ಗಿ ಪಟ್ಟಣದ ಬಸವೇಶ್ವರ ವೃತ್ತದ ಸಮೀಪದ 'ನೇತಾಜಿ ನೀಟ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಸೋಮವಾರ ಜರುಗಿದ "ರಾಷ್ಟ್ರೀಯ ತಂತ್ರಜ್ಞಾನ ದಿನಾಚರಣೆ"ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ರಾಜಸ್ತಾನದ ಪೋಖ್ರಾನ್ ಅಣು ಪರೀಕ್ಷೆಯನ್ನು 1998ರ, ಮೇ-11ರಂದು ಯಶಸ್ವಿಯಾಗಿ ನೆರವೇರಿತು. ಆಗ ಅಟಲ್ ಬಿಹಾರಿ ವಾಜಪೇಯಿ ಪ್ರಧಾನಮಂತ್ರಿಯಾಗಿದ್ದರು. ವಿಜ್ಞಾನಿ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ಅವರು ಈ ಪರೀಕ್ಷೆಯ ರೂವಾರಿಯಾಗಿದ್ದಾರೆ. ಅದರ ಸ್ಮರಣೆಗೋಸ್ಕರ ಈ ದಿನವನ್ನು 'ರಾಷ್ಟ್ರೀಯ ತಂತ್ರಜ್ಞಾನ ದಿನಾಚರಣೆ'ಯನ್ನಾಗಿ ಆಚರಿಸಲಾಗುತ್ತದೆ. ವಿಜ್ಞಾನಿ, ತಂತ್ರಜ್ಞರನ್ನು ಗುರುತಿಸಿ ಗೌರವಿಸುವ ಮೂಲಕ, ಅವರ ಸಾಧನೆಯನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವು ಉದ್ದೇಶವಾಗಿದೆ. ನಮ್ಮ ದೇಶ ತಂತ್ರಜ್ಞಾನ ಅಳವಡಿಕೆಯಲ್ಲಿ ಸಾಕಷ್ಟು ಪ್ರಗತಿಯನ್ನು ಹೊಂದುತ್ತಿದೆ. ಇದು ಹೀಗೆ ಮುಂದುವರೆದರೆ ಇನ್ನು ಕೆಲವೇ ವರ್ಷಗಳಲ್ಲಿ ನಮ್ಮ ದೇಶ ವಿಶ್ವದ ಅಗ್ರಗಣ್ಯ ಸಾಲಿಗೆ ಸೇರುತ್ತದೆ ಎಂದರು.

ತಂತ್ರಜ್ಞಾನವು ಆಧುನಿಕ ಜೀವನದ ಅವಿಭಾಜ್ಯ ಅಂಗವಾಗಿದೆ. ಇದು ಸಂವಹನ, ಶಿಕ್ಷಣ, ಆರೋಗ್ಯ ಮತ್ತು ವ್ಯವಹಾರಗಳಲ್ಲಿ ವೇಗದ ದಕ್ಷತೆ, ಸುಲಭ ಸಂಪರ್ಕ ಮತ್ತು ಜಾಗತಿ-ಕ ಮಾಹಿತಿ ಪ್ರವೇಶದಂತಹ ಅಪಾರ ಪ್ರಯೋಜನಗಳನ್ನು ನೀಡುತ್ತದೆ. ಆದಾಗ್ಯೂ, ಇದರ ಅತಿಯಾದ ಅವಲಂಬನೆ, ಸೈಬರ್ ಭದ್ರತಾ ಬೆದರಿಕೆಗಳು, ದೈಹಿಕ ಚಟುವಟಿಕೆಯ ಕೊರತೆ ಮತ್ತು ಸಾಮಾಜಿಕ ಅಂತರದಂತಹ ಗಂಭೀರ ಸವಾಲುಗಳನ್ನು ಸಹ ತರುತ್ತದೆ ಎಂದು ತಂತ್ರಜ್ಞಾನ ಎಂದು ಹೇಳುತ್ತಾ, ವಿದ್ಯಾರ್ಥಿಗಳಿಗೆ ತಂತ್ರಜ್ಞಾನದ ಸದುಪಯೋಗವನ್ನು ಮಾಡಿಕೊಳ್ಳಲು ಕರೆ ನೀಡಿದರು.

ಸಂಸ್ಥೆಯ ಮುಖ್ಯಸ್ಥ ಸಂಜಯ ಪಾಟೀಲ್ ಮಾತನಾಡಿ, ತಂತ್ರಜ್ಞಾನದ ವ್ಯಾಪಕ ಬಳಕೆಯಿಂದಾಗಿ ಸಾಕಷ್ಟು ಅನುಕೂಲವಾಗಿವೆ. ಹೊಸ ತಂತ್ರಜ್ಞಾನ ಬಳಸಿಕೊಳ್ಳುವದರಿಂದ ಹಣ, ಸಮಯ, ಪರಿಶ್ರಮ ಉಳಿತಾಯವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಯಡ್ರಾಮಿ ಕದಂಬ ಪಿಯು ಕಾಲೇಜಿನ ಪ್ರಾಚಾರ್ಯ ದೇವಿಂದ್ರ ಬಿ.ಗುಡುರ್, ಸಂಸ್ಥೆಯ ನಿರ್ದೇಶಕರಾದ ತಾಯಪ್ಪ ದೊಡ್ಡಮನಿ, ರಮೇಶ್ ದೊಡ್ಡಮನಿ, ಶಿಕ್ಷಕರಾದ ಗುರುಸ್ವಾಮಿ ಹಿರೇಮಠ, ರಾಜಶೇಖರ, ರವಿಕುಮಾರ ಭಜಂತ್ರಿ, ಸೌರಭ ಪಾಟೀಲ್, ಪಾಯಲ್ ಪಾಟೀಲ್, ಗೀತಾ ಎಂ.ಕೆ., ಹಣಮಂತರಾಯ ಬಿರಾದಾರ, ಕೀರ್ತಿ ಗಂಗಾಕರ್ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ರಾಷ್ಟ್ರ ಮಟ್ಟದ 'ಪ್ರೇರಣಾ' ಕಾರ್ಯಕ್ರಮಕ್ಕೆ ಕೊಪ್ಪಳ ಕೇಂದ್ರೀಯ ವಿದ್ಯಾಲಯದ ವಿದ್ಯಾರ್ಥಿನಿ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಸ್ಥಳೀಯ ಕೇಂದ್ರೀಯ ವಿದ್ಯಾಲಯದ (KV) 10ನೇ ತರಗತಿಯ ಪ್ರತಿಭಾವಂತ ವಿದ್ಯಾರ್ಥಿನಿ ಅರ್ಪಿತಾ ಕಂಬಳಿ ಅವರು ಗುಜರಾತ್‌ನ ವಡ್‌ನಗರದಲ್ಲಿ ನಡೆಯಲಿರುವ ಪ್ರತಿಷ್ಠಿತ 'ಪ್ರೇರಣಾ: ಅನುಭವಾತ್ಮಕ ಕಲಿಕಾ ಕಾರ್ಯಕ್ರಮ'ಕ್ಕೆ (Prerana: An Experiential Learning Program) ಆಯ್ಕೆಯಾಗಿದ್ದಾರೆ.



ಭಾರತ ಸರ್ಕಾರದ ಶಿಕ್ಷಣ ಸಚಿವಾಲಯದ ಈ ಮಹತ್ವಾಕಾಂಕ್ಷೆಯ ಯೋಜನೆಯಡಿ, ದೇಶದ ವಿವಿಧ ಭಾಗಗಳಿಂದ ಆಯ್ದ ವಿದ್ಯಾರ್ಥಿಗಳಿಗೆ ಏಳು ದಿನಗಳ ಕಾಲ ವಿಶೇಷ ವಸತಿ ಶಿಬಿರವನ್ನು ಆಯೋಜಿಸಲಾಗುತ್ತದೆ. ಐತಿಹಾಸಿಕ ವಡ್‌ನಗರದ ವರ್ನಾಕ್ಯುಲರ್ ಶಾಲೆಯಲ್ಲಿ ನಡೆಯುವ ಈ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ನಾಯಕತ್ವದ ಗುಣಗಳು, ಸಾಂಸ್ಕೃತಿಕ ಹೆಮ್ಮೆ ಮತ್ತು ರಾಷ್ಟ್ರಪ್ರೇಮವನ್ನು ಬೆಳೆಸುವ ಉದ್ದೇಶವನ್ನು ಹೊಂದಿದೆ.

ಅರ್ಪಿತಾ ಅವರು ತಮ್ಮ ನಾಯಕತ್ವದ ಸಾಮರ್ಥ್ಯ ಮತ್ತು ಶೈಕ್ಷಣಿಕ ಸಾಧನೆಯ ಆಧಾರದ ಮೇಲೆ ವಿವಿಧ ಹಂತದ ಸ್ಪರ್ಧೆಗಳಲ್ಲಿ ಜಯಗಳಿಸಿ ಈ ಗೌರವಕ್ಕೆ ಪಾತ್ರರಾಗಿದ್ದಾರೆ. ಏಳು ದಿನಗಳ ಕಾಲ ನಡೆಯುವ ಈ ಶಿಬಿರದಲ್ಲಿ ಯೋಗ, ತಂತ್ರಜ್ಞಾನ ಆಧಾರಿತ ಕಲಿಕೆ ಮತ್ತು ನವೀನ ಶೈಕ್ಷಣಿಕ ಚಟುವಟಿಕೆಗಳಲ್ಲಿ ಇವರು ಭಾಗವಹಿಸಲಿದ್ದಾರೆ.

ಈ ಸಾಧನೆಗಾಗಿ ಕೇಂದ್ರೀಯ ವಿದ್ಯಾಲಯದ ಪ್ರಾಚಾರ್ಯರು ಹಾಗೂ ಶಿಕ್ಷಕ ವೃಂದದವರು ಅರ್ಪಿತಾ ಅವರನ್ನು ಅಭಿನಂದಿಸಿದ್ದಾರೆ. "ನಮ್ಮ ಶಾಲೆಯ ವಿದ್ಯಾರ್ಥಿನಿ ರಾಷ್ಟ್ರಮಟ್ಟದ ಇಂತಹ ಮಹತ್ವದ ವೇದಿಕೆಯಲ್ಲಿ ಜಿಲ್ಲೆಯನ್ನು ಪ್ರತಿನಿಧಿಸುತ್ತಿರುವುದು ಹೆಮ್ಮೆಯ ಸಂಗತಿ," ಎಂದು ಶಿಕ್ಷಕರು ಹರ್ಷ ವ್ಯಕ್ತಪಡಿಸಿದ್ದಾರೆ. ತಮ್ಮ ಆಯ್ಕೆಯ ಕುರಿತು ಮಾತನಾಡಿದ ಅರ್ಪಿತಾ, "ದೇಶದ ವಿವಿಧ ಭಾಗಗಳಿಂದ ಬರುವ ಪ್ರತಿಭಾವಂತ ವಿದ್ಯಾರ್ಥಿಗಳೊಂದಿಗೆ ಸಂವಹನ ನಡೆಸಲು ಮತ್ತು ಹೊಸ ವಿಷಯಗಳನ್ನು ಕಲಿಯಲು ನಾನು ಉತ್ಸುಕಳಾಗಿದ್ದೇನೆ. ಈ ಅವಕಾಶ ಸಿಕ್ಕಿರುವುದು ನನ್ನ ಸೌಭಾಗ್ಯ," ಎಂದು ತಿಳಿಸಿದ್ದಾರೆ.

# ವಿಜೃಂಭಣೆಯಿಂದ ಜರುಗಿದ ಲೋಕಮಾತೆ ಕೊಪ್ಪಳ ಜಿಲ್ಲೆಯ ಐತಿಹಾಸಿಕ ಹುಲಿಗೆಮ್ಮ ದೇವಿ ರಥೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಲೋಕಮಾತೆ ಕೊಪ್ಪಳ ಜಿಲ್ಲೆಯ ಐತಿಹಾಸಿಕ ಶ್ರೀ ಹುಲಿಗೆಮ್ಮ ದೇವಿ ರಥೋತ್ಸವವವು ಮೇ 11ರಂದು ವಿಜ್ರಂಭಣೆಯಿಂದ ನೆರವೇರಿತು.

ಕೊಪ್ಪಳ ತಾಲೂಕಿನ ಸುಕ್ಷೇತ್ರ ಹುಲಿಗಿ ಗ್ರಾಮದಲ್ಲಿ ಗೋಧೂಳಿ ಸಮಯ ಸಂಜೆ ಸರಿಯಾಗಿ 5.30ಕ್ಕೆ ಆರಂಭಗೊಂಡ ರಥೋತ್ಸವದ ಚಾಲನಾ ಸಮಾರಂಭಕ್ಕೆ ಕೊಪ್ಪಳ ಸೇರಿದಂತೆ ಗಡಿ ಜಿಲ್ಲೆ ವಿಜಯನಗರ, ಬಳ್ಳಾರಿ, ಗದಗ, ರಾಯಚೂರು ಸೇರಿದಂತೆ ರಾಜ್ಯದ ನಾನಾ ಭಾಗಗಳಿಂದ ಆಗಮಿಸಿದ್ದ ಲಕ್ಷಾಂತರ ಭಕ್ತರು ಸಾಕ್ಷಿಯಾಗಿ ಜಯಘೋಷ ಮೊಳಗಿಸಿದರು.

ಜಗನ್ಮಾತೆ ಶ್ರೀ ಹುಲಿಗೆಮ್ಮದೇವಿ ಮೂರ್ತಿಯೊಂದಿಗೆ ಸಾಗಿದ ತೇರು ಪಾದಗಟ್ಟೆ ತಲುಪಿ ಮರಳಿ ಸ್ವಸ್ಥಾನಕ್ಕೆ ಬಂದು ಸೇರುತ್ತಿದ್ದಂತೆ ಭಕ್ತ ಸಮೂಹದಿಂದ ಕರತಾಡನ ಕೇಳಿ ಬಂದಿತು. ಉದೋ ಉದೋ ಊದೋ.. ಹುಲಿಗೆಮ್ಮ ಎಂದು ಭಕ್ತರು ಮತ್ತೆ ಮತ್ತೆ ಘೋಷಣೆ ಮೊಳಗಿಸಿದರು.


ಸಮಾರಂಭದಲ್ಲಿ ಸಂಸದರಾದ ರಾಜಶೇಖರ ಹಿಟ್ನಾಳ, ಪರಿಷತ್ ಶಾಸಕರಾದ ಹೇಮಲತಾ ನಾಯಕ, ಮಾಜಿ ಸಂಸದರಾದ ಸಂಗಣ್ಣ ಕರಡಿ ಸೇರಿದಂತೆ ಅನೇಕ ಹಿರಿಯ ಗಣ್ಯರು ಭಾಗಿಯಾಗಿ ಪೂಜೆ ಸಲ್ಲಿಸಿದರು.

ಎಸ್ಪಿ ಡಾ.ರಾಮ್ ಎಲ್ ಅರಸಿದ್ದಿ ಅವರ ಮಾರ್ಗದರ್ಶನದಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಶ್ರೀ ಹುಲಿಗೆಮ್ಮ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರು ಹಾಗೂ ಕಾರ್ಯದರ್ಶಿ ಪ್ರಕಾಶರಾವ್ ವಿಶ್ವ ಪ್ರಾಣಿಕಲ್ಯಾಣ ಮಂಡಳಿಯ ಅಧ್ಯಕ್ಷರಾದ ದಯಾನಂದ ಸ್ವಾಮೀಜಿ ಸೇರಿದಂತೆ ಹುಲಿಗಿ ಗ್ರಾಪಂ ಅಧ್ಯಕ್ಷರು ಮತ್ತು ಸದಸ್ಯರು, ಹುಲಿಗಿ ಸೇರಿದಂತೆ ಸುತ್ತಲಿನ ಅನೇಕ ಗ್ರಾಮಗಳ ಸದ್ಭಕ್ತರು ಇದ್ದರು.



# ಅಭಿವರ್ಧನೆ ಸೌಹಾರ್ದ ಸಹಕಾರಿ ಸಂಘ ನಿಯಮಿತ ಕೊಪ್ಪಳದಲ್ಲಿ ಅದ್ಧೂರಿಯಾಗಿ ಉದ್ಘಾಟನೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಕೊಪ್ಪಳ ನಗರದ ಕಿನ್ನಾಳ ರಸ್ತೆಯ ಎಫ್.ಸಿ.ಐ ಗೌಡಾನ್ ಹತ್ತಿರ, ಡಾ. ರಾಮಚಂದ್ರನರಾವ್ ಬಡಾವಣೆ ಎದುರುಗಡೆಯ ವಾಸವಿ ಕಾಂಪ್ಲೆಕ್ಸ್‌ನಲ್ಲಿ "ಅಭಿವರ್ಧನೆ ಸೌಹಾರ್ದ ಸಹಕಾರಿ ಸಂಘ ನಿಯಮಿತ"ವು ಇಂದು ಗಣ್ಯರು ಉಧ್ಘಾಟಿಸುವ ಮೂಲಕ ವಿಶೇಷ ಪೂಜೆ ಹಾಗೂ ಸಿಹಿ ಹಂಚುವ ಮೂಲಕ ಅದ್ಧೂರಿಯಾಗಿ ಪ್ರಾರಂಭಗೊಂಡಿತು.

ಸಮಾನ ಮನಸ್ಸಿನ ಸ್ನೇಹಿತರೆಲ್ಲಾ ಒಟ್ಟುಗೂಡಿ ಜನಸಾಮಾನ್ಯರಿಗೂ ಬ್ಯಾಂಕ್ ಸಾಲ ಸೌಲಭ್ಯವನ್ನು ಸುಲಭವಾಗಿ ಒದಗಿಸುವ ಮಹದಾಶಯದೊಂದಿಗೆ ಈ ಸಂಘವನ್ನು ಪ್ರಾರಂಭಿಸಲಾಗಿದೆ. "ಬಡವರು ಕೂಡ ಆರ್ಥಿಕವಾಗಿ ಸಬಲರಾಗಲು ಅಭಿವರ್ಧನೆ ಇದೊಂದು ಉತ್ತಮ ವೇದಿಕೆಯಾಗಲಿದೆ" ಎಂದು ಅಧ್ಯಕ್ಷರಾದ ಶ್ರೀ ಶಿವಾನಂದಪ್ಪ ಯಲ್ಲಮ್ಮನವರು ವಿಶ್ವಾಸ ವ್ಯಕ್ತಪಡಿಸಿದರು. ಉಳಿತಾಯ ಖಾತೆ ಮತ್ತು ಹೂಡಿಕೆದಾರರಿಗೆ ಆಕರ್ಷಕ ಬಡ್ಡಿದರ ,ಕೃಷಿ, ವಾಣಿಜ್ಯ, ವಾಹನ, ಗೃಹ ಸೇರಿದಂತೆ ಎಲ್ಲಾ ರೀತಿಯ ಸಾಲ ಸೌಲಭ್ಯ ,ಆಧುನಿಕ ಡಿಜಿಟಲ್ ತಂತ್ರಜ್ಞಾನ ಆಧಾರಿತ ಬ್ಯಾಂಕಿಂಗ್ ಸೇವೆಯನ್ನು ಇಂದಿನಿಂದ ಆರಂಭಿಸುತ್ತಿದ್ದೇವೆ ಎಂದು ಸದಸ್ಯರು ತಿಳಿಸಿದರು.

ಪ್ರಾರಂಭೋತ್ಸವ ಸಮಾರಂಭದಲ್ಲಿ ಅನೇಕ ಗಣ್ಯರು, ಪೂಜ್ಯರು ಮತ್ತು ವಿವಿಧ ಕ್ಷೇತ್ರದ ಮುಖಂಡರು ಆಗಮಿಸಿ ಸಂಘದ ಆಡಳಿತ ಮಂಡಳಿಗೆ ಶುಭ ಹಾರೈಸಿದರು. ದೇಶಿಯ ಉಡುಗೆಯನ್ನುಟ್ಟು ಆಗಮಿಸಿದ್ದ ಆಡಳಿತ ನಿರ್ದೇಶಕ ಮಂಡಳಿಯು ಗ್ರಾಹಕರಿಗೆ "ಅಭಯ ಹಸ್ತ" ನೀಡಿ, ಸಂಘದ ಸೇವೆಗಳ ಸದುಪಯೋಗ ಪಡೆದುಕೊಳ್ಳಲು ವಿನಂತಿಸಿಕೊಂಡಿತು

ಇದೇ ವೇಳೆ ಸಂಸದರಾದ ರಾಜಶೇಖರ ಹಿಟ್ನಾಳ, ಅಧ್ಯಕ್ಷರಾದ ಶಿವಾನಂದ ಯಲ್ಲಮ್ಮನವರು

ಉಪಾಧ್ಯಕ್ಷರಾದ ಗಿರಿಧರ ನದಿಚಾಗಿ, ಶಿವಶಂಕರಪ್ಪ ವಾಲಿಕಾರ, ನಿರ್ದೇಶಕರಾದ ಯಂಕಪ್ಪ ಬನ್ನಿಗಿಡದ, ರಮೇಶ ಹೊಳೆಯಾಚಿ, ಮುರಳಿಧರ ಬಸರಿಹಾಳ, ಶರಣಪ್ಪ ಅಬ್ಬಿಗೇರಿ, ಭೀಮಪ್ಪ ಕಿತ್ತೂರ, ರಾಮು ಎಲ್. ಪೂಜಾರಿ, ಶ್ರೀ ಬಸವರಾಜ ಅಗಸಿಮನಿ ಉಪಸ್ಥಿತಿ ಇದ್ದರು. ಎಲ್ಲಾ ಬ್ಯಾಂಕಿಂಗ್ ಸೇವೆಗಳು ಗ್ರಾಹಕರಿಗೆ ಲಭ್ಯವಿದ್ದು, ಕೊಪ್ಪಳ ಹಾಗೂ ಸುತ್ತಮುತ್ತಲಿನ ಜನರು ಇದರ ಪ್ರಯೋಜನ ಪಡೆಯಬೇಕೆಂದು ಸಂಘದ ಸದಸ್ಯರು ಕೋರಿದ್ದಾರೆ.

# ಇಂದು ಸಿರಸಪ್ಪಯ್ಯ ಶ್ರೀಗಳ ಪ್ರಥಮ ವರ್ಷದ ಪುಣ್ಯರಾಧನೆ

• ಮಲ್ಲಮ್ಮ ನುಡಿ ವಾರ್ತೆಮುದಗಲ್



ಸಮೀಪದ ಲೆಕ್ಕಿಹಾಳ ಗ್ರಾಮದ ಮೌನೇಶ್ವರ ಮಠದ ಸನ್ನಿಧಿಯಲ್ಲಿ ಮಂಗಳವಾರ ಪರಮಪೂಜ್ಯ ಶ್ರೀ ಶಿರಸಪ್ಪಯ್ಯ ಮಹಾಸ್ವಾಮಿಗಳ ಪ್ರಥಮ ಪುಣ್ಯರಾಧನೆ ಜರಗುತ್ತದೆ ಎಂದು ಮಠದ ಕ್ಯಾದ್ಗೇಂದ್ರರ ಶ್ರೀಗಳು ಸೋಮವಾರ ತಿಳಿಸಿದರು. ನಾಡಿನ ನಾನಾ ಭಕ್ತರ ಬಾಳು ಹಸನಾಗಿಸಿ ಮತ್ತು ಬಡವರ ಏಳ್ಗೆಗೆ ಸದಾ ತಮ್ಮ ಜೀವನವನ್ನೇ ತ್ಯಾಗ ಮಾಡಿದ ಶ್ರೀ ಸಿರಸಪ್ಪಯ್ಯ ಮಹಾಸ್ವಾಮಿಜೀ ಅವರನ್ನು ಕಳೆದುಕೊಂಡ ಜನತೆ ಕಳೆದ ಒಂದು ವರ್ಷದಿಂದ ಅನಾಥರಾಗಿ ಬದುಕುತ್ತಿದ್ದ ಭಕ್ತರಿಗೆ ಜೀವಕಳೆ ತುಂಬಿದ ಶ್ರೀಗಳು ಇಂದಿಗೂ ಸಮಾಜಮುಖಿ ಜೀವನ ಮೆಚ್ಚುವಂತದ್ದಾಗಿದೆ. ಹೀಗಾಗಿ ನಾಳೆ ಮಧ್ಯಾಹ್ನ 2ಗಂಟೆಗೆ ಮಠದಲ್ಲಿ ಜರುಗುವ ಪ್ರಥಮ ಪುಣ್ಯ ಕಾರ್ಯಕ್ರಮದಲ್ಲಿ ಎಲ್ಲರೂ ಭಾಗಿಯಾಗಿ ಶ್ರೀಗಳ ಕೃಪೆಗೆ ಪಾತ್ರರಾಗಬೇಕೆಂದು ಕ್ಯಾದ್ಗೆಂದ್ರ ಶ್ರೀಗಳು ಹಾಗೂ ಸಹೋದರರು ತಿಳಿಸಿದರು.

# 3.69 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.11-ಮದುವೆ ಸಮಾರಂಭದಲ್ಲಿ 3.69 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವಾಗಿರುವ ಘಟನೆ ನಗರದಲ್ಲಿ ನಡೆದಿದೆ. ನಗರದ ಮೋಮಿನಪೂರ ನಿವಾಸಿಯಾಗಿರುವ ಖಾಸಗಿ ಶಾಲಾ ಶಿಕ್ಷಕಿ ಮಹ್ಮದಿ ಬೇಗಂ ಅವರ ಚಿನ್ನಾಭರಣ ಕಳವಾಗಿದ್ದು, ಅವರು ಈ ಸಂಬಂಧ ಎಂ.ಬಿ.ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ಉಸ್ಮಾನೀಯಾ ಕಾಲೋನಿಯಲ್ಲಿರುವ ಫಂಕ್ಷನ್ ಹಾಲ್‌ನಲ್ಲಿ ಅತ್ತಿಗೆ ಸೈಯಧಾ ಉಮಯ್ಯಾ ಅವರ ಮದುವೆ ಸಮಾರಂಭ ಇದ್ದ ಪ್ರಯುಕ್ತ ಮಹ್ಮದಿ ಬೇಗಂ ಅವರು ಕುಟುಂಬ ಸಮೇತ ಮದುವೆ ಸಮಾರಂಭಕ್ಕೆ ಹೋಗಿದ್ದು, ಪಂಕ್ಷನ್ ಹಾಲ್‌ನಲ್ಲಿ ರೆಡಿಯಾಗಲು ಆಭರಣಗಳಿರುವ ಪರ್ಸನ್ನು ವಧುವಿನ ಕುರ್ಚಿಯ ಕೆಳಗಡೆ ಇಟ್ಟು ಸಂಬಂಧಿಕರೊಂದಿಗೆ ಮಾತನಾಡುತ್ತ ವೇದಿಕೆ ಬಳಿ ಕುಳಿತಿದ್ದಾಗ 1,62,500 ರೂ.ಮೌಲ್ಯದ 13 ಗ್ರಾಂ.ಬಂಗಾರದ ಲಾಕೆಟ್, 75 ಸಾವಿರ ರೂ.ಮೌಲ್ಯದ 6 ಗ್ರಾಂ.ಬಂಗಾರದ ಕಿವಿಯೋಲೆ, 1.25 ಲಕ್ಷ ರೂ.ಮೌಲ್ಯದ 10 ಗ್ರಾಂ.ಬಂಗಾರದ 4 ಉಂಗುರುಗಳು ಮತ್ತು 6,500 ರೂ.ಮೌಲ್ಯದ 25 ಗ್ರಾಂ.ಬೆಳ್ಳಿಯ ಕಾಲಚೈನ್‌ಗಳಿದ್ದ ಪರ್ಸ್ ಮಂಗಮಾಯವಾಗಿದೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ.

## ಐಟಿಐ ವಿವಿಧ ವೃತ್ತಿಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

**ಕಲಬುರಗಿ:** ಅಫಜಲಪೂರ (ಚೌಡಾಪೂರ) ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಎನ್.ಸಿ.ವಿ.ಟಿ. ಸಂಯೋಜನೆಯಡಿ ಸಿ.ಟಿ.ಎಸ್. ನಲ್ಲಿ 06 ವೃತ್ತಿ ಘಟಕಗಳು ಹಾಗೂ ಉದ್ಯೋಗ ಯೋಜನೆಯಡಿ 06 ವೃತ್ತಿಗಳಿಗೆ ಪ್ರವೇಶ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಅಫಜಲಪೂರ (ಚೌಡಾಪೂರ) ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಅರ್ಹ ಅಭ್ಯರ್ಥಿಗಳು www.cite.karnataka.gov.inವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ಸ್ವಂತ ಅಥವಾ ಚೌಡಾಪೂರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಭೇಟಿ ನೀಡಿ 2026ರ ಮೇ 15ರೊಳಗಾಗಿ ಅರ್ಜಿ ಸಲ್ಲಿಸಬೇಕು. ಸಿ.ಟಿ.ಎಸ್. ಮತ್ತು ಟಾಟಾ ವೃತ್ತಿ ಘಟಕಗಳ ವಿವರ ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಅಫಜಲಪೂರ (ಚೌಡಾಪೂರ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಹಾಗೂ ಸಂಸ್ಥೆಯ ಪ್ರಾಚಾರ್ಯರಾದ ಸುಭಾಷ ಯವಳೆ–9480360909ರನ್ನು ಸಂಪರ್ಕಿಸಲು ಕೋರಲಾಗಿದೆ.

## ಉದ್ಯೋಗ ಮೇಳ ಆಯೋಜನೆ

**ಕಲಬುರಗಿ:** ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಸಹಯೋಗದೊಂದಿಗೆ ಇದೇ ಮೇ 12ರಂದು ಬೆಳಿಗ್ಗೆ 8 ಗಂಟೆಯಿಂದ ಜೇವರ್ಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ "ಉದ್ಯೋಗ/ಶಿಶಿಕ್ಷು ಮೇಳ" ವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜೇವರ್ಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ. ಈ ಮೇಳದಲ್ಲಿ ಐ.ಟಿ.ಐ./ಡಿಪ್ಲೋಮಾ/ಪಿಯುಸಿ/ಪದವಿ ಸ್ನಾತಕೋತ್ತರ ಪದವಿ ವಿದ್ಯಾರ್ಹತೆಯುಳ್ಳ (ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ/ಅನುತ್ತೀರ್ಣರಾಗಿರುವ/ಕಳೆದ ವರ್ಷಗಳಲ್ಲಿ ಉತ್ತೀರ್ಣರಾಗಿ ನಿರುದ್ಯೋಗಿಗಳಾಗಿರುವ) ಉದ್ಯೋಗಾಕಾಂಕ್ಷಿ ವಿದ್ಯಾರ್ಥಿಗಳು ತಮ್ಮ ಗರಿಷ್ಠ ವಿದ್ಯಾರ್ಹತೆಗೆ ಸಂಬಂಧಿಸಿರುವ ಅಂಕಪಟ್ಟಿ ಪ್ರತಿ, ಆಧಾರ್ ಕಾರ್ಡ್ ಪ್ರತಿ ಹಾಗೂ ಇತ್ತೀಚಿನ 02 ಭಾವಚಿತ್ರಗಳೊಂದಿಗೆ ಖುದ್ದಾಗಿ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಗೆ ಭೇಟಿ ನೀಡಲು ಅಥವಾ ಮೊಬೈಲ್ ಸಂ. 9008312324/7338098008 /7063597045 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ಮೇ ತಿಂಗಳಲ್ಲಿಯೆ ಎರಡು ತಿಂಗಳ ಅಕ್ಕಿ ವಿತರಣೆ

**ಕಲಬುರಗಿ:** ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ 2013ರಡಿ ಸರ್ಕಾರದ ನಿರ್ದೇಶನದಂತೆ 2026ರ ಮೇ ಮತ್ತು ಜೂನ್ ಮಾಹೆಗಳ ಆಹಾರ ಧಾನ್ಯಗಳನ್ನು ಮೇ 2026 ರ ಮಾಹೆಯಲ್ಲಿಯೇ ವಿತರಣೆ ಮಾಡಲಾಗುತ್ತಿದ್ದು, ಪಡಿತರದಾರರು 2026ರ ಮೇ 31ರ ರೊಳಗಾಗಿ ಎರಡು ಬಾರಿ ಬಯೋಮೆಟ್ರಿಕ್ ನೀಡಿ ಪಡಿತರ ಧಾನ್ಯ ಪಡೆದುಕೊಳ್ಳುವಂತೆ ಎಂದು ಕಲಬುರಗಿ ತಹಶೀಲ್ದಾರರಾದ ಕೆ. ಆನಂದಶೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2026ರ ಮೇ ಮಾಹೆಯಲ್ಲಿ ಕಲಬುರಗಿ ತಾಲೂಕಿನ ಪ್ರತಿ ಅಂತ್ಯೋದಯ ಅನ್ನ ಯೋಜನೆಯ (ಎಎವೈ) ಪಡಿತರ ಚೀಟಿಗೆ 70 ಕೆ.ಜಿ ಅಕ್ಕಿ ಹಾಗೂ ಕೇಂದ್ರ ಮತ್ತು ರಾಜ್ಯ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 10 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುತ್ತಿದೆ. ಪ್ರತಿದಿನ ಬೆಳಿಗ್ಗೆ 6 ರಿಂದ ರಾತ್ರಿ 10 ಗಂಟೆಯವರೆಗೆ ನ್ಯಾಯಬೆಲೆ ಅಂಗಡಿಯಲ್ಲಿ ಸರ್ವರ್ ಲಭ್ಯವಿರುತ್ತದೆ. ಆದ್ದರಿಂದ ಪಡಿತರ ಚೀಟಿದಾರರು ಈ ಸಮಯದ ಸದ್ಬಳಕೆಮಾಡಿಕೊಂಡು ಸಂಬಂಧಪಟ್ಟ ನ್ಯಾಯಬೆಲೆ ಅಂಗಡಿಯ ಮುಖಾಂತರ ಪಡಿತರ ಪಡೆಯುವ ಸಮಯದಲ್ಲಿ 02 ಬಾರಿ ಬಯೋಮೆಟ್ರಿಕ್ ನೀಡುವುದನ್ನು ಕಡ್ಡಾಯಗೊಳಿಸಲಾಗಿದೆ ಮತ್ತು ಅನ್ನಸುವಿಧಾ ಯೋಜನೆಯ ಪಡಿತರ ಫಲಾನುಭವಿಗಳು ಮೇ ಮತ್ತು ಜೂನ್ 2026 ರ ಮಾಹೆಯಲ್ಲಿ ತಮ್ಮ ಹತ್ತಿರದ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ 02 ಬಾರಿ ಬಯೋಮೆಟ್ರಿಕ್ ನೀಡಿ ಪಡಿತರವನ್ನು ಪಡೆದುಕೊಳ್ಳಬಹುದಾಗಿದೆ. ಒಂದು ವೇಳೆ ಪಡಿತರ ಚೀಟಿದಾರರು ಕೇವಲ ಒಂದೇ ಬಾರಿ ಬಯೋಮೆಟ್ರಿಕ್ ನೀಡಿದ್ದಲ್ಲಿ ಸದರಿ ಯೋಜನೆಯಡಿ ಜೂನ್ 2026 ರ ಮಾಹೆಗೆ ಹಂಚಿಕೆಯಾದ ಆಹಾರ ಧಾನ್ಯಗಳನ್ನು ವಿತರಿಸಲು ಸಾಧ್ಯವಾಗುವುದಿಲ್ಲ ಮತ್ತು ಸದರಿ ಮಾಹೆಯ ಆಹಾರ ಧಾನ್ಯಗಳು ವ್ಯಪಗತವಾಗುತ್ತದೆ. ಪ್ರಯುಕ್ತ ಮೇ 2026 ರ ಮಾಹೆಯಲ್ಲಿ 02 ಬಾರಿ ಬಯೋಮೆಟ್ರಿಕ್ ನೀಡಿ ಪಡಿತರವನ್ನು ಪಡೆದುಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

## ಬಹಳ ಅದ್ದೂರಿಯಾಗಿ ನಡೆದ ಸಾಮೂಹಿಕ ವಿವಾಹ

**ಬಳ್ಳಾರಿ:** ಮಾತಂಗ ಸೇವಾ ಟ್ರಸ್ಟ್ ನ ವತಿಯಿಂದ ನಡೆದ ಮೊದಲನೆ ವರ್ಷದ ಸಾಮೂಹಿಕ ವಿವಾಹಗಳು ಬಹಳ ಅದ್ದೂರಿಯಾಗಿ ನಡೆದವು ಈ ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೆ ಉದ್ಘಾಟಕರಾಗಿ ಕೆಪಿಸಿಸಿ ಮಾಧ್ಯಮ ವಕ್ತಾರಾದ ವೆಂಕಟೇಶ್ ಹೆಗಡೆ ರವರು ಆಗಮಿಸಿ ನೂತನ ವಧು ವರರಿಗೆ ಶುಭ ಹಾರೈಸಿ ನಿಮ್ಮ ಜೀವನ ಸುಖಕರವಾಗಿರಲೆಂದು ಹಾರೈಸಿದರು ಮಾತಂಗ ಸೇವನೆ ಟ್ರಸ್ಟ್ ನ ಈ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹೆಚ್. ಮಾರೇಶ ವಹಿಸಿಕೊಂಡಿದ್ದರು.

ಮುಖ್ಯ ಅತಿಥಿಯಾಗಿ ಯೂತ್ ಕಾಂಗ್ರೆಸ್ನ ತಾಲೂಕ್ ಅಧ್ಯಕ್ಷರಾದ ಬಸುರಾಜ್ ಬ್ರೂಸ್ಲಿ ಹಾಜರಿದ್ದು ಮಾತನಾಡಿ ಸಂಡೂರು ತಾಲೂಕಿನಲ್ಲಿ ಎಂದು ಈ ರೀತಿ ಅಚ್ಚುಕಟ್ಟಾಗಿ ಮಾಡಿರುವುದು ನಾನು ನೋಡಿಲ್ಲ ಎಂದರು ಟ್ರಸ್ಟಿನ ಎಲ್ಲಾ ಸದಸ್ಯರಿಗೆ ಅಭಿನಂದನೆಗಳು ಎಂದರು ಗೌರವನ್ವಿತ ಅತಿಥಿಗಳಾಗಿ ಪುರಸಭೆಯ ಅಧ್ಯಕ್ಷರಾದ ಸೂರಿನಾರಾಯಣ ಮುಖ್ಯ ಅಧಿಕಾರಿಗಳಿಗೆ ಅರುಣ್ ಕುಮಾರ್ ಎನ್ ಸೋಮಪ್ಪ ಜೆಡಿಎಸ್ ಸ್ಟೇಟ್ ಸೆಕರಿಟರಿ ,ಹೆಚ್.ನಾರಯಣರೆಡ್ಡಿ ಕುರೇಕುಪ್ಪ ಪುರಸಭೆಯ ಬಿಜೆಪಿ ಮಂಡಲ ಅಧ್ಯಕ್ಷರು ಇವರು ಬಂದು ನೂತನ ವಧು ವರರಿಗೆ ಶುಭ ಹಾರೈಸಿದರು ಎನ್ ಸೋಮಪ್ಪ ಮಾತನಾಡಿ ಇಂತಹ ಸಾಮೂಹಿಕ ವಿವಾಹ ಮಾಡಿ ನಮ್ಮ ಕುರಕುಪ್ಪಕ್ಕೆ ಮಾತಂಗ ಸೇವ ಟ್ರಸ್ಟ ನ ಎಲ್ಲಾ ಸದಸ್ಯರು ಹೆಮ್ಮೆ ತಂದಿದ್ದಾರೆ ಎಂದರು.

ಇವರು ಎಲ್ಲರೂ ಸಾಕಷ್ಟು ಶ್ರಮಪಟ್ಟು ಇಷ್ಟು ಅಚ್ಚುಕಟ್ಟಗಿ ಮಾಡಿರುವ ಉದಾಹರಣೆ ಇಲ್ಲ ಎಂದರು ಮುಖ್ಯ ಅಧಿಕಾರಿಗಳಾದ ಅರುಣ್ ಕುಮಾರ್ ಅವರು ಮಾತನಾಡಿ Sc,STಯೋಜನೆ ಅಡಿಯಲ್ಲಿ ಬರುವ ಎಲ್ಲಾ ಯೋಜನೆಗಳು ಸಂಪೂರ್ಣವಾಗಿ ತಮ್ಮ ಕಾಲೋನಿಗೆ ಮಿಸಲಿಡಲಾಗುವುದು ಎಂದರು ಈ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷರಾದ ಕಲ್ಗಡಪ್ಪ,ಸಧಸ್ಯರಾದ ಕುಮಾರಪ್ಪ, ಊರಿನ ಮುಖಂಡರಾದ ಹೆಮ್ಮಿಗಿರಪ್ಪ, ಎಚ್ ಡಿ ಹೊನ್ನೂರಪ್ಪ ಪುಂಡಿ ಮಲ್ಲಿಕಾರ್ಜುನ, ಓಬರೆಡ್ಡಿ ವೆಂಕ್ಟರಾಮರೆಡ್ಡಿ, ಎಸ್ ಕೆ ಬಿ ಬಸವರಾಜ್, ಗಿರಪ್ಪ ,ದ್ಯಾವಣ್ಣ ,ಡಿ .ಮಂಜುನಾಥ್ ,ಎನ್ ಮಲ್ಲಿಕಾರ್ಜುನ, ಹನುಮಂತಪ್ಪ ಈರಣ್ಣ,ವಿರೇಶ, ಸಣ್ಣಮಾರೆಪ್ಪ ಮಾಹರುದ್ರಪ್ಪ ಮದುಗಪ್ಪ ಹಾಜರಿದ್ದರು ಈ ಕಾರ್ಯಕ್ರಮವನ್ನು ಟ್ರಸ್ಟಿನ ಕಾರ್ಯದರ್ಶಿಯಾದ ಹೆಚ್. ಪಂಪಾಪತಿಯವರು ನೆರೆವೆರಿಸಿಕೊಟ್ಟರು.

# ವಿಶ್ವಗುರು ಮಾಡುವುದು ಯುವಜನರಿಂದ ಸಾಧ್ಯ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**



ಭಾರತವನ್ನು ವಿಶ್ವ ಗುರುವನ್ನಾಗಿ ಮಾಡುವುದು ದೇಶದ ಒಟ್ಟು ಜನಸಂಖ್ಯೆಯಲ್ಲಿ ಸಿಂಹಪಾಲು ಹೊಂದಿರುವ ಯುವ ಸಮುದಾಯದ ಮೇಲಿದೆ ಎಂದು ರಾಜ್ಯ ಮಹಿಳಾ ವಿಶ್ವವಿದ್ಯಾಲಯದ ವಿಶ್ರಾಂತ ಉಪಕುಲಪತಿ ಡಾ.ಮೀನಾ ಚಂದಾವರಕರ ಅಭಿಪ್ರಾಯಪಟ್ಟರು.

ಸ್ಥಳೀಯ ವಿದ್ಯಾ ಪ್ರಸಾರಕ ಮಂಡಳದ ಎಸ್. ಆರ್. ನರಸಾಪೂರ ಕಲಾ ಹಾಗೂ ಎಂ.ಬಿ. ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಹಳೆಯ ವಿದ್ಯಾರ್ಥಿಗಳ ಸಂಘದ ಆಶ್ರಯದಲ್ಲಿ ಹಳೆಯ ವಿದ್ಯಾರ್ಥಿಗಳ ಸಮಾವೇಶ 'ನೆನಪಿನ ದೋಣಿಯಲಿ' ಮತ್ತು ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಮಾಜದ ಪ್ರಗತಿಯಲ್ಲಿ ಮಹತ್ವದ ಪಾತ್ರವನ್ನು ವಹಿಸುವ ಯುವಕರು ಸಾಧಿಸುವ ಛಲವನ್ನು ಬೆಳೆಸಿಕೊಳ್ಳಬೇಕು. ಯಶಸ್ಸು ಸಹಜವಾಗಿ ಸಿಗುವ ವಸ್ತುವಲ್ಲ. ಅದಕ್ಕೆ ಪ್ರಾಮಾಣಿಕ ಪ್ರಯತ್ನ ಮತ್ತು ಪರಿಶ್ರಮ ಬೇಕು ಎಂದರು.

ಹಳೆಯ ವಿದ್ಯಾರ್ಥಿಗಳು ಸಂಸ್ಥೆಯ ನಿಜವಾದ ಆಸ್ತಿ. ಸಾಧನೆಯ ಮೂಲಕ ಕಲಿತ ಕಾಲೇಜಿಗೆ ಹೆಮ್ಮೆ ತಂದಿರುವ ಅವರು ಸಂಸ್ಥೆಯ ಪ್ರಗತಿಯಲ್ಲಿ ಕೈಜೋಡಿಸಬೇಕು. ಹಲವರ ತ್ಯಾಗದಿಂದ ಸಂಸ್ಥೆ ಬೆಳೆದಿದೆ ಎಂಬ ಅಂಶವನ್ನು ಗಮನದಲ್ಲಿಟ್ಟುಕೊಂಡು ಸಂಸ್ಥೆ ಇನ್ನಷ್ಟು ಬೆಳೆಯಲು ಸಹಕರಿಸಬೇಕು ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಗೌರವ ಕಾರ್ಯದರ್ಶಿ ಡಾ.ಗಿರೀಶ ಮಸೂರಕರ, ಹಳೆಯ ವಿದ್ಯಾರ್ಥಿಗಳು ಆಗಾಗ ಆಗಮಿಸಿ ಕಾಲೇಜಿನ ಪ್ರಗತಿಯ ಅವಲೋಕನವನ್ನು ಮಾಡಬೇಕು. ಉತ್ತಮ ಸಲಹೆಗಳನ್ನು ನೀಡುವುದರ ಮೂಲಕ ಪ್ರಗತಿಗೆ ಸಹಕರಿಸಬೇಕು ಎಂದರು.

ಪ್ರಾಚಾರ್ಯ ಶ್ರೀನಿವಾಸ ನರಗುಂದ ಮಾತನಾಡಿ, ಇದು ಬರೀ ಸಮಾವೇಶವಲ್ಲ. ನೆನಪುಗಳ, ಸಾಧನೆಗಳ, ಗೆಳೆತನದ ಮತ್ತು ಸಂಸ್ಥೆಯ ಜೊತೆಗಿನ ಬಾಂಧವ್ಯದ ಸಂಭ್ರಮಾಚರಣೆಯಾಗಿದೆ. ಕಾಲೇಜಿನ ನಿಜವಾದ ರಾಯಭಾರಿಗಳಾಗಿರುವ ಹಳೆಯ ವಿದ್ಯಾರ್ಥಿಗಳು ತಮ್ಮ ಅನುಭವ,ಸಾಧನೆ,ಯಶೋಗಾಥೆಯನ್ನು ಈಗಿನ ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡು ಅವರಿಗೆ ಪ್ರೇರಣೆ ನೀಡಬೇಕು. ಜ್ಞಾನ,ಜೀವನ ಮೌಲ್ಯ ಹಾಗೂ ಸಂಸ್ಕಾರ ನೀಡಿರುವ ಮಾತೃಸಂಸ್ಥೆಯ ಬಗ್ಗೆ ಧನ್ಯತಾಭಾವ ಹೊಂದಬೇಕು ಎಂದರು.

ಯುಜಿಸಿ ನೆಟ್, ಸೆಟ್ ಪರೀಕ್ಷೆಯಲ್ಲಿ ತೇರ್ಗಡೆಯಾದ ಮತ್ತು ಪಿಎಚ್‌ಡಿ ಪಡೆದ ಹಳೆಯ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಹಳೆಯ ವಿದ್ಯಾರ್ಥಿಗಳ ಪರವಾಗಿ ಡಾ.ಎಸ್. ಆರ್.ನಾಗಣ್ಣವರ,ಡಾ.ಎಸ್.ಎಂ.ಖೋತ,ಪಿ.ಬಿ.ಭಜಂತ್ರಿ, ರವಿ ಕುಲಕರ್ಣಿ, ಎಸ್.ಟಿ.ಸಿದ್ದಲಿಂಗಪ್ಪನವರ, ಸಿ.ಎಲ್.ಹೂಗಾರ, ನಾಗಲಕ್ಷ್ಮೀ ರಾಯಚೂರ ಮತ್ತು ಪರಶುರಾಮ ಜಾಧವ, ನಿವೃತ್ತ ಪ್ರಾಧ್ಯಾಪಕ ಎಸ್.ಬಿ.ಪರ್ವತೀಕರ ಮಾತನಾಡಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾರ್ಯಾಧ್ಯಕ್ಷೆ ಶ್ರೀಲತಾ ಹೆರಂಜಲ, ಸಂಸ್ಥೆಯನ್ನು ಇನ್ನಷ್ಟು ಬೆಳೆಸಲು ಹಲವು ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ. ಅದಕ್ಕೆ ಪ್ರಯತ್ನಗಳೂ ನಡೆದಿವೆ. ಹುನ್ನೂರು ಸಹೋದರರು, ಮಾಜಿ ಸಚಿವ ಅರವಿಂದ ಲಿಂಬಾವಳಿ ಸಹಿತ ಅನೇಕರು ಆರ್ಥಿಕ ಬೆಂಬಲ ನೀಡಿದ್ದನ್ನು ಸ್ಮರಿಸಿದರು. ನವನಗರದಲ್ಲಿ ಒದಗಿಸಲಿರುವ ಶೈಕ್ಷಣಿಕ ಸೌಲಭ್ಯಗಳಿಗೆ ಹಳೆಯ ವಿದ್ಯಾರ್ಥಿಗಳು ಸಹಾಯ–ಸಹಕಾರ ನೀಡಬೇಕು ಎಂದರು.

ಕೀರ್ತಿ ದಾಸರ ಹಾಗೂ ಶ್ವೇತಾ ಕುಲಕರ್ಣಿ ಪ್ರಾರ್ಥಿಸಿದರು.ಡಾ.ಎಸ್.ಎಸ್.ಹಂಗರಗಿ ಪರಿಚಯಿಸಿದರು. ಸಂಯೋಜಕ ಎಸ್.ವಾಯ್.ಬೊಮ್ಮಣ್ಣವರ ವಂದಿಸಿದರು. ಎಂ.ಡಿ.ಕೋರವಾರ ನಿರೂಪಿಸಿದರು. ಕಾಲೇಜು ನಡೆದು ಬಂದ ಬಗೆ ಕುರಿತ ಕಿರು ಚಿತ್ರ ಗಮನ ಸೆಳೆಯಿತು.

ಕಾಲೇಜು ಉಪವಿಭಾಗದ ಅಧ್ಯಕ್ಷ ಡಾ.ಪಿ.ಆರ್. ಜೋಶಿ,ಉಪಾಧ್ಯಕ್ಷ ಜಿ.ಎನ್.ಕುಲಕರ್ಣಿ,ನಿವೃತ್ತ ಪ್ರಾಧ್ಯಾಪಕರಾದ ಡಾ.ಪಿ.ಎಸ್.ಹುಯಿಲಗೋಳ,ಆರ್. ಆರ್.ದೇಶಮುಖ,ಜಿ.ಜೆ.ಮೊರಬ,ಎಂ.ವಿ.ಮಹಾಡೀಕರ,ವಿ. ಎಸ್.ಮಠ, ಎಸ್.ಕೆ.ದೇಸಾಯಿ, ಆರ್.ಎಸ್. ದೇಸಾಯಿ ಉಪಸ್ಥಿತರಿದ್ದರು.

## ಅನ್ಯಾಯಕ್ಕೆ ಬೇಸತ್ತು ಲೋಕಾ ಮೊರೆ

• **ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್**



ತಾಲೂಕಿನ ಗೋಪಾಳಪುರ ಗ್ರಾಮದ ಮಾಜಿ ಗ್ರಾ.ಪಂ ಸದಸ್ಯ ಆನಂದ್ ತಂದೆ ಕಾಶಪ್ಪ ಭಜಂತ್ರಿ ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ತಮ್ಮ ಕುಟುಂಬಕ್ಕೆ ಸರ್ಕಾರದಿಂದ ಮಂಜೂರಾದ ಜಮೀನನ್ನು ಕೆಲವರು ದಾಖಲೆಗಳಿಲ್ಲದೆ ಅನಧಿಕೃತವಾಗಿ ತಮ್ಮ ಹೆಸರಿಗೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು.

1982–83ರಲ್ಲಿ ತಮ್ಮ ತಾತ ಗಂಗಪ್ಪ ಅವರಿಗೆ ಜಮೀನು ಮಂಜೂರಾಗಿದ್ದು, 1999ರಲ್ಲಿ ಅಪ್ರಾಪ್ತ ವಯಸ್ಸಿನಲ್ಲಿದ್ದ ವ್ಯಕ್ತಿಯ ಹೆಸರಿಗೆ ಪಹಣಿ ಮಾಡಲಾಗಿದೆ ಎಂದು ಹೇಳಿದರು. ಬಳಿಕ ಸಹಾಯಕ ಆಯುಕ್ತರ ಆದೇಶದಂತೆ ಮೂಲ ಪಟ್ಟೇದಾರರ ಹೆಸರಿಗೆ ಪಹಣಿ ಮರುಸ್ಥಾಪನೆ ಮಾಡಲಾಗಿತ್ತು ಎಂದು ತಿಳಿಸಿದರು.

ಜಮೀನು ವಿಚಾರವಾಗಿ ಎದುರುಪಕ್ಷದವರಿಂದ ಹಲ್ಲೆ, ಜಾತಿನಿಂದನೆ ಹಾಗೂ ಬೆದರಿಕೆ ನಡೆದಿದ್ದು, ಪೊಲೀಸ್ ಠಾಣೆಗೆ ದೂರು ನೀಡಿದರೂ ನ್ಯಾಯ ಸಿಗಲಿಲ್ಲ ಎಂದು ದೂರಿದರು. ತಮ್ಮ ಕುಟುಂಬದವರ ಮೇಲೆಯೇ ಸುಳ್ಳು ಪ್ರಕರಣ ದಾಖಲಿಸಲಾಗಿದೆ ಎಂದು ಆರೋಪಿಸಿದರು.

ಗುರುಮಠಕಲ್ ಠಾಣೆಯ ಪಿ.ಐ. ವೀರಣ್ಣ ದೊಡ್ಡಮನಿ ಅವರು ಒಂದು ಪ್ರಕರಣದಲ್ಲಿ ₹2 ಲಕ್ಷ ಲಂಚ ಕೇಳಿದ್ದರು ಎಂದು ಗಂಭೀರ ಆರೋಪ ಮಾಡಿದ ಆನಂದ್, ಈ ಬಗ್ಗೆ ಲೋಕಾಯುಕ್ತ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾಗಿ ಹೇಳಿದರು.

## ಬಡ್ತಿ ಮುಖ್ಯಗುರುಗಳಾಗಿ ಅಧಿಕಾರ, ಸನ್ಮಾನ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**



ನಗರದ ಮಹಾನಂದಿ ಕೊಟ್ಟಂನ ಡಾ. ಬಿ.ಆರ್. ಅಂಬೇಡ್ಕರ್ ನಗರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬಡ್ತಿ ಮುಖ್ಯಗುರುಗಳಾಗಿ ನೇಮಕಗೊಂಡ ಸಿದ್ದಲಿಂಗಮ್ಮ. ಎಲ್ ಅವರು ಸೋಮವಾರ ತಮ್ಮ ನೂತನ ಕರ್ತವ್ಯಕ್ಕೆ ಅಧಿಕೃತವಾಗಿ ಹಾಜರಾದರು.

ಈ ಹಿನ್ನೆಲೆಯಲ್ಲಿ ಶಾಲೆಯಲ್ಲಿ ಶಿಕ್ಷಕರು, ಶಿಕ್ಷಣಾಭಿಮಾನಿಗಳು ಹಾಗೂ ಸ್ಥಳೀಯ ಮುಖಂಡರಿಂದ ಆತ್ಮೀಯ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಸಿದ್ದಲಿಂಗಮ್ಮ ಅವರಿಗೆ ಶಾಲಾ ಸಿಬ್ಬಂದಿ ಪುಷ್ಪಗುಚ್ಛ ನೀಡಿ ಶಾಲು ಹೊದಿಸಿ ಗೌರವಿಸಿದರು.

ಹಲವು ವರ್ಷಗಳಿಂದ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಅವರು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ, ಶಿಸ್ತು ಹಾಗೂ ಸಾಮಾಜಿಕ ಮೌಲ್ಯಗಳ ಬೆಳವಣಿಗೆಗೆ ವಿಶೇಷ ಕೊಡುಗೆ ನೀಡಿದ್ದಾರೆ ಎಂದು ಗಣ್ಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಿಕ್ಷಕರ ಸಂಘದ ಅಧ್ಯಕ್ಷ ನಿಂಗಪ್ಪ, "ಸಿದ್ದಲಿಂಗಮ್ಮ ಅವರು ಶಿಕ್ಷಕ ವೃತ್ತಿಯಲ್ಲಿ ಶ್ರಮ, ಪ್ರಾಮಾಣಿಕತೆ ಮತ್ತು ವಿದ್ಯಾರ್ಥಿಗಳ ಮೇಲಿನ ಕಾಳಜಿಯಿಂದ ಗುರುತಿಸಿಕೊಂಡಿದ್ದಾರೆ.

ಅವರ ಬಡ್ತಿ ಶಿಕ್ಷಕರ ಸಮುದಾಯಕ್ಕೆ ಸಂತಸದ ವಿಷಯವಾಗಿದೆ. ಅವರ ಆಡಳಿತದಲ್ಲಿ ಶಾಲೆ ಇನ್ನಷ್ಟು ಅಭಿವೃದ್ಧಿ ಹೊಂದಲಿದೆ" ಎಂದು ಹೇಳಿದರು.

ದಲಿತ ಹಿರಿಯ ಸಾಹಿತಿ ಎನ್.ಡಿ. ವೆಂಕಮ್ಮ ಮಾತನಾಡಿ, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಮರ್ಪಿತ ಮನೋಭಾವದ ಶಿಕ್ಷಕರು ಅಗತ್ಯವಾಗಿದ್ದು, ಸಿದ್ದಲಿಂಗಮ್ಮ ಅವರು ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿರುವುದು ಶ್ಲಾಘನೀಯ ಎಂದರು.

## ಕಾಂಗ್ರೆಸ್ ಪಕ್ಷದ ಪಂಚೇಂದ್ರೀಯಗಳು ಕೆಲಸ ಮಾಡುತ್ತಿಲ್ಲ

• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**



ವಂದಿಗೆ ಗ್ರಾಮದಲ್ಲಿಯಕ್ಷಗಾನಕಾರ್ಯಕ್ರಮದಲ್ಲಿ ನಡೆದಘರ್ಷಣೆಗೆ ಸಂಬಂಧಿಸಿದಂತೆತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಹಾಗೇ ಗೃಹ ಸಚಿವ ಜಿ. ಪರಮೇಶ್ವರಅವರು ಸ್ಥಳಕ್ಕೆ ಆಗಮಿಸಬೇಕು ಎಂದುಯಕ್ಷಗಾನಕಲಾವಿದ ಹಾಗೂ ನ್ಯಾಯವಾದಿ ನಾಗರಾಜ ನಾಯಕಅವರು ಕಳೆದ ನಾಲ್ಕು ದಿನಗಳಿಂದ ತಹಸೀಲ್ದಾರ ಕಚೇರಿಎದುರುಧರಣಿ ಸತ್ಯಾಗ್ರಹ ನಡೆಸುತ್ತಿದ್ದರು.ಸೋಮವಾರಸಂಸದ ವಿಶ್ವೇಶ್ವರ ಹೆಗಡೆಕಾಗೇರಿ ಆಗಮಿಸಿ ಘಟನೆಯಕುರಿತು ಮಾಹಿತಿ ಪಡೆದುಕೊಂಡರು.

ನಂತರವಿಶ್ವೇಶ್ವರಹೆಗಡೆಕಾಗೇರಿ ಮಾತನಾಡಿ,ರಾಜ್ಯ ಸರಕಾರದಪಂಚೇಂದ್ರೀಯಗಳುಕಾರ್ಯನಿರ್ವಹಿಸುತ್ತಿಲ್ಲ. ಹೀಗಾಗಿ ಕೆಲವರುತಮಗೆ ಮನಸ್ಸಿಗೆ ಬಂದಂತೆ ವರ್ತನೆ ಮಾಡಿ ಸಮಾಜದಲ್ಲಿಗೊಂದಲ ವ್ಯಕ್ತಪಡಿಸುತ್ತಿದ್ದಾರೆ. ಗೃಹ ಸಚಿವರ ಆಪ್ತರೆನಿಸಿಕೊಂಡವರು ಪೊಲೀಸ್ ಇಲಾಖೆಯೇತಮ್ಮಕೈಯಲ್ಲಿದೆಎನ್ನುವಂತೆದರ್ಪತೋರಿಸುತ್ತಿರುವುದುಕಾಂಗ್ರೆಸ್ ಪಕ್ಷದಜನಪರ ಕಾಳಜಿ ಎಂತದ್ದುಎನ್ನುವುದುಇದರಿಂದ ತಿಳಿಯುವಂತಾಗಿದೆ ಎಂದರು. ನಾಗರಾಜ ನಾಯಕರುತಮ್ಮ ಸತ್ಯಾಗ್ರಹವನ್ನು ಸ್ಥಗಿತಗೊಳಿಸುವುದು ಒಳ್ಳೆಯದು.ನನ್ನ ಮಾತಿಗೆಗೌರವ ನೀಡುತ್ತಾರೆ ಎಂಬ ನಂಬಿಕೆಯಿದೆ. ಗೃಹ ಸಚಿವರು ಮತ್ತು ಸರಕಾರದಜನಪ್ರತಿನಿಧಿಗಳು ನ್ಯಾಯದ ಪರವಾಗಿಇರುವಜನರನ್ನು ಹತ್ತಿರ ಇಟ್ಟುಕೊಳ್ಳಲಿ.ಆದರೆ ಸಮಾಜಘಾತುಕ ವ್ಯಕ್ತಿಗಳನ್ನು ಇಟ್ಟುಕೊಂಡರೆಇಂತಹಅಹಿತಕರಘಟನೆ ನಡೆಯುತ್ತದೆ ಎನ್ನುವುದಕ್ಕೆನಾಗರಾಜ ನಾಯಕಅವರು ಮಾತನಾಡುವಾಗಅವರುತೋರಿಸುವಅಸಂಬದ್ಧ ಮಾತುಗಳೇ ಸಾಕ್ಷಿಯಾಗಿವೆಎಂದುಕಾಗೇರಿ ವಿವರಿಸಿದರು.

ನ್ಯಾಯವಾದಿ ನಾಗರಾಜ ನಾಯಕ ಮಾತನಾಡಿ, ನಾನು ಸಂಸದ ವಿಶ್ವೇಶ್ವರ ಹೆಗಡೆಕಾಗೇರಿಅವರ ಮಾತಿಗೆ ಬದ್ಧನಾಗಿದ್ದೇನೆ. ಆದರೆ ಸಮಾಜಘಾತುಕ ವ್ಯಕ್ತಿಗಳಿಗೆ ಹೇಗೆ ಪಾಠ ಕಲಿಸಬೇಕು ಅದನ್ನು ಮಾಡುತ್ತೇನೆ. ಅಂಕೋಲಾದಲ್ಲಿ ಈ ಹಿಂದೆ ಭಯದ ವಾತಾವರಣಇರಲಿಲ್ಲ. ಆದರೆ ಈಗ ಭಯದ ವಾತಾವರಣಕಂಡುಬರುತ್ತಿದೆಎಂದರು.

ಇದೇಸಂದರ್ಭದಲ್ಲಿನಾಗರಾಜನಾಯಕಅವರುಘಟನೆಗೆ ಸಂಬಂಧಿಸಿದಂತೆ ಮನವಿಯನ್ನು ಸಂದಸದರಿಗೆ ನೀಡಿದರು.ಜಿ.ಪಂ. ಮಾಜಿ ಸದಸ್ಯಜಗದೀಶ ನಾಯಕ ಮೊಗಟಾ, ಪ್ರಮುಖರಾದಉದಯ ವಾಮನ ನಾಯಕ, ನಿತ್ಯಾನಂದಗಾಂವಕರ, ಹನುಮಂತಗೌಡ, ರಾಮಚಂದ್ರ ಹೆಗಡೆ, ಜಯಾ ನಾಯ್ಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## 25 ವರ್ಷಗಳ ನಂತರ ಶಿಕ್ಷಕ ಸ್ನೇಹಿತರ ಸಮ್ಮಿಲನ

• **ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ**



ಮಕ್ಕಳನ್ನು ಕೇವಲ ಬುದ್ಧಿವಂತರನ್ನಾಗಿ ಮಾಡುವುದರ ಜೊತೆಗೆ ಹೃದಯವಂತರನ್ನಾಗಿ ಮಾಡಿದರೆ ಶಿಕ್ಷಣ ಕಲಿತದ್ದಕ್ಕೂ ಸಾರ್ಥಕತೆ ದೊರೆಯುತ್ತದೆ ಎಂದು ಶ್ರೀಮನ್ನಿರಂಜನ ಪ್ರಣವ ಸ್ವರೂಪಿ ಗವಿಮಠ ಕಡಲಾಬಾಳು ಶಾಖಾ ಮಠದ ಮರಿ ಶಾಂತವೀರ ಮಹಾಸ್ವಾಮಿಗಳು ಹೇಳಿದರು.

ಪಟ್ಟಣದ ರೇಣಿಕಾ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಭಾನುವಾರ 1999–2002 ನೇ ಸಾಲಿನ ಹಳೆಯ ವಿದ್ಯಾರ್ಥಿಗಳಿಂದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿ ಅವರು ಆಶಿರ್ವಚನ ನೀಡಿ ಮಾತನಾಡಿದರು. ರಸ್ತೆಯಲ್ಲಿ ಸಂಚರಿಸುವಾಗ ದಾರಿಯಲ್ಲಿ ಬಿದ್ದ ಮುಳ್ಳು ಚುಚ್ಚದಂತೆ ಪಕ್ಕಕ್ಕೆ ಸರಿದು ಸಾಗುತ್ತೆವೆ ಇದು ಸಾಮಾನ್ಯ ಆದರೆ ಆ ಮುಳ್ಳು ನನಗೂ ಸೇರಿದಂತೆ ಮತ್ತೊಬ್ಬರಿಗೂ ಚುಚ್ಚಬರದು ಎಂಬ ಮನೋಭಾವನೆಯನ್ನು ಹೊಂದಿ ಅದನ್ನೆ ತೆಗೆದು ಬೆರೆಡೆ ಹಾಕುವ ಮನೋಭಾವನೆ ನಮ್ಮಲ್ಲಿ ಬರಬೇಕು, ಅದು ಹೃದಯವಂತಿಕೆ ಕೆಲಸವಾಗಿದೆ ಎಂದರು.ಇನ್ನು ಶಿಕ್ಷಣ ಕಲಿಯುವಾಗ ಚಿತ್ತದಿಂದ ಕಲಿಯಬೇಕು, ಬೆರೆಯವರು ನಮ್ಮ ಬಗ್ಗೆ ಎನು ಮಾತನಾಡಿಕೊಳ್ಳುತ್ತಿದ್ದಾರೆ ಎನ್ನುವ ಭ್ರಮೆಯಿಮಂದ ಹೊರಬಂದು ಕಲಿಕೆಯ ಮೇಲೆ ಚಿತ್ತವಿಟ್ಟು ಸಾಧನೆಯ ಮೆಟ್ಟಿಲು ಎರೆಬೇಕು ಎಂದರು.

ರಿಂದ ನಿವೃತ್ತ ಮುಖ್ಯ ಶಿಕ್ಷಕ ಹೆಚ್.ಎಂ.ಕೊಟ್ರಯ್ಯ ಮಾತನಾಡಿ ಗುರು ಶಿಷ್ಯರ ಸಂಭಂಧ ಅನೂನ್ಯವಾಗಿದೆ ಎನ್ನುವುದಕ್ಕೆ ಇಂತಹ ಗುರುವಂದನಾ ಕರ್ಯಕ್ರಮಗಳು ಜೀವ ತುಂಬಿವೆ, ವಿದ್ಯಾರ್ಥಿ ಜೀವನದಲ್ಲಿ ಹುಡುಗಾಟ ಸಾಮಾನ್ಯವಾಗಿದೆ, ನಿವುಗಳು ಈ ಶಾಲೆಯಲ್ಲಿ ಒದುತ್ತಿರುವಾಗ ಅನೇಕ ತುಂಟಾಟಗಳು ಇಂದು ನೆನೆದು ಕಳೆದ ಸಂತೋಷದ ದಿನಗಳು ಮರುಕಳಿಸಿದ್ದು ಕಾಣಬಹುದು, ಗುರುಶಿಷ್ಯರ ಸಂಭಂಧಿಸಿದ ಅನೇಕ ಉದಾಹರಣೆಗಳು ನೀಡಿದರು, 25 ವರ್ಷಗಳ ಹಿಂದೆ ನೀವು ಒದಿದ ಶಾಲೆ ಹಾಗೂ ಸಹಪಾಠಿಗಳ ಸಮ್ಮಿಲನ, ವಿದ್ಯೆ ಕಲಿಸಿದ ಗುರುಗಳಿಗೆ ಗೌರವ ಸಮರ್ಪಣೆ ಇಂದಿನ ವಿದ್ಯಾರ್ಥಿಗಳಿಗೆ ಅನುಕರಣೀಯವಾಗಿದೆ ಎಂದರು.

ಶಿಕ್ಷಕ ಪದ್ಮಣ್ಣ ಮಾತನಾಡಿ ಕಲಿಕೆ ನಿರಂತರವಾಗಿದೆ, ಇಂದು ಕಳೆದ 25 ವರ್ಷಗಳ ಹಿಂದೆ ನಮ್ಮಿಂದ ಶಿಕ್ಷಣ ಪಡೆದು ಇಂದು ಒಂದೆಡೆ ಸೇರಿಸುವುದು ನಿಜಕ್ಕೂ ಸಹಾಸದ ಕೆಲಸವಾಗಿದೆ, ಕಳೆದ 25 ವರ್ಷಗಳಲ್ಲಿ ವಿಒದ್ಯಾರ್ಥಿಗಳು ಸೇರಿದಂತೆ ಶಿಕ್ಷಕರು ತಮ್ಮ ಜೀವನದಲ್ಲಿ ಅನೇಕ ತಿರುವುಗಳನ್ನು ಪಡೆದು ಬ

ಏರೆಡೆ ಹೋಗಿರುತ್ತೆವೆ,ಅವರನ್ನೆಲ್ಲ ಒಂದೆಡೆ ಸೇರಿಸಿ ಶಿಕ್ಷಕರಿಗೆ ಗೌರ ಸನ್ಮಾನ ಹಾಗೂ ನಿಮ್ಮಗಳ ಸ್ನೇಹ ಸಮ್ಮಿಲನಕ್ಕೆ ನಾಂದಿ ಹಡುವ ಕೆಲಸ ಮಡಿರುವುದು ನಿಜಕ್ಕೂ ಗೌರಯುತವಾಗಿದೆ ಎಂದರು.

ರಹೆಮಾನ್ ಶಿಕ್ಷಕರು ಮಾತನಾಡಿ ಕಳೆದ ಕೆಲ ವರ್ಷಗಳ ಹಿಂದೆ ಇದ್ದ ಗುರು ಶಿಷ್ಯರ ಸಂಭಂಧ ಪ್ರಸ್ತುತ ದಿನಗಳಲ್ಲಿ ಮಾಯವಾಗುತ್ತಿದೆ,ಗುರುಕುಲದಲ್ಲಿ ನೀಡುತ್ತಿದ್ದ ಶಿಕ್ಷಣ, ಗುರುಗಳಿಗೆ ದೊರಕುತ್ತಿದ್ದ ಗೌರವ ಸುಸಂಕೃತದಿಂದ ಕಲಿಸಲಾಗುತ್ತಿದ್ದು, ನಾವುಗಳು ಕಳೆದ 25 ವರ್ಷಗಳ ಹಿಂದೆ ಈ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ನೀಡಿದ ಶೈಕ್ಷಣಿಕ ಚಟುವಟಿಕೆಗಳು ನಮಗೆ ಮುಂದಿನ ಕಲಿಕೆಗೆ ದಾರಿಯಾಗಿದೆ , ಇಮದು ವಿದ್ಯೆ, ವಿನಯ,ಕಲಿಕೆಗೆ ಮನ್ನಣೆ ದೊರೆಯದ ಪರಿಸ್ಥಿತಿ ಎದುರಾಗಿದೆ ಎಂದು ಪ್ರಸ್ತುತ ಶಿಕ್ಷಣದಲ್ಲಿನ ಗುರುಶಿಷ್ಯರ ಬಗ್ಗೆ ಖೇದ ವ್ಯಕ್ತಪಡಿಸಿದರು.

ಶಿಕ್ಷಕ ಜಾತಪ್ಪ ಮಾತನಾಡಿ ನಾವು ಶಿಕ್ಕಕರಾಗಿ ಸಲ್ಲಿಸಿದ ಕಳೆದ 25 ವರ್ಷಗಳ ಹಿಂದಿನ ಪರಿಸ್ಥಿತಿ ಇಂದು ಕಣ್ಮರೆಯಾಗಿದೆ, ಅಂದು ವಿದ್ಯೆ ಕಲಿಸಿದ ಗುರುಗಳು ಮುಮದೆ ಬಂದರೆ ಕಣ್ಣಿಗೆ ಕಾಣದಂತೆ ಗೌರವ ಭಾವನೆಯಿಂದ ಕಾಣುತ್ತಿದ್ದರು, ಇಂದು ಶಿಕ್ಷಕರ ಮುಂದಯೇ ಯಾವುದೇ ಸೌಜನ್ಯವಿಲ್ಲದೆ ಉತ್ತರಿಸುವ ಕಾಲ ನಿಜಕ್ಕೂ ಸಂಸ್ಕಾರ ಮರೆಯಾಗುತ್ತಿದೆ ಎಂದು ಖೇದ ವ್ಯಕ್ತಪಡಿಸಿದರು.

ಶ್ರೀ ರೇಣುಕಾ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಮುಖ್ಯಸ್ಥ ಕೆ.ಎಂ.ಟಿ.ಸಿದ್ದೇಶ, ಶಿಕ್ಷಕ ಶಿವ ಪ್ರಕಾಶ, ಅಕ್ಕಿ ಪ್ರಕಾಶ, ಬಣಕಾರ, ಹರ್ಷವರ್ಧನ , ಶಂಭುಲಿಂಗಯ್ಯ, ಶಿವಮೂರ್ತಿ, ಶಂಕ್ರಪ್ಪ ಮಾತನಾಡಿದರು.ಪ್ರಸ್ತಾವಿಕವಾಗಿ ರೂಪದೇವಿ ಮಾತನಾಡಿದರು.ಈ ಸಂಧರ್ಭದಲ್ಲಿ ಶಿಕ್ಷಕರಾದ ಬೆಟ್ಟಪ್ಪ, ಆಶೋಕ, ವಿದ್ಯಾರ್ಥಿಗಳಾದ ಹೆಚ್. ಎಂ.ರವಿ, ಚೇತನ, ಹರೀಷ ರೆಡ್ಡಿ, ಗುಡದಯ್ಯ, ಲೋಕೇಶ, ಖಾಜಾ, ಕೊಟ್ರೇಶ, ಪಂಪಾಪತಿ, ಗಂಗಾಧರ,ವೀರಭದ್ರಯ್ಯ, ಹೊನ್ನೂರಪ್ಪ, ವಾಣಿ, ವೀಣಾ,ಜಗದೀಶ ಗೌಡ, ಬೆಣ್ಣಿಗೌಡ್ರ ಆನಂದ, ರಾಜಾವಲಿ ಗಡ್ಡದ್, ಪ್ರಮೋದಿನಿ, ಹರಿಣಾಕ್ಷಿ, ಕುಸುಮಾ, ನಂದಿನಿ, ಸುಮಿತ್ರ, ವೀಣಾ, ಮಮತಾ, ಜಾನ್ಹಾವಿ ಸೇರಿದಂತೆ ಇನ್ನು ಮುಂತಾದವರು ಉಪಸ್ಥಿತರಿದ್ದರು. ಆಯೇಷಾ ಗಡ್ಡದ್, ಸನಾ ಫರ್ಹಿನ್ ಗಡ್ಡದ್ ಪ್ರಾರ್ಥಿಸಿದರು. ಆಶ್ವಿನಿ ನಿರೂಪಿಸಿದರು, ಸುಮಿತ್ರಾ ಸ್ವಾಗತಿಸಿದರು.

# ಜನಸೇವೆಯ ಸಾಧನವಾಗಿ ಕಂಡ ಅಪರೂಪದ ನಾಯಕ



**ಹಳಿಯಾಳ:** ಕರ್ನಾಟಕದ ರಾಜಕೀಯ ರಂಗದಲ್ಲಿ ತಮ್ಮದೇ ಆದ ವ್ಯಕ್ತಿತ್ವ, ಸೇವಾ ಮನೋಭಾವ ಹಾಗೂ ಜನಪರ ಚಿಂತನೆಗಳ ಮೂಲಕ ಅಳಿಯದ ಗುರುತು ಮೂಡಿಸಿದ್ದ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಆತ್ಮೀಯರಾದ ಡಿ. ಸುಧಾಕರ್ ಅವರ ಅಗಲಿಕೆಯ ಸುದ್ದಿ ಮನಸ್ಸಿಗೆ ಅತೀವ ನೋವು ಉಂಟುಮಾಡಿದೆ. ಮೂರು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದ ಅವರು ಅಧಿಕಾರವನ್ನು ಪ್ರತಿಷ್ಠೆಯಾಗಿ ಅಲ್ಲ, ಜನಸೇವೆಯ ಸಾಧನವಾಗಿ ಕಂಡ ಅಪರೂಪದ ನಾಯಕರಾಗಿದ್ದರು. ಸರಳತೆ, ಸೌಜನ್ಯ ಮತ್ತು ಮಾನವೀಯತೆ ಅವರ ಬದುಕಿನ ಮೌಲ್ಯಗಳಾಗಿದ್ದವು.ಜನರ ನೋವಿಗೆ ಸ್ಪಂದಿಸುವ ಹೃದಯ,ಅಭಿವೃದ್ಧಿಯತ್ತ ಇರುವ ದೃಢ ಸಂಕಲ್ಪ ಮತ್ತು ಎಲ್ಲರೊಂದಿಗೆ ಆತ್ಮೀಯವಾಗಿ ಬೆರೆಯುವ ಗುಣದಿಂದ ಅವರು ಜನಮನಗಳಲ್ಲಿ ಚಿರಸ್ಥಾಯಿಯಾಗಿ ಉಳಿದಿದ್ದಾರೆ.

ಸಾರ್ವಜನಿಕ ಜೀವನದಲ್ಲಿ ಅವರು ತೋರಿದ ನಿಷ್ಠೆ, ಸೇವಾಭಾವ ಮತ್ತು ಕರ್ತವ್ಯಪರತೆ ಮುಂದಿನ ಪೀಳಿಗೆಗೆ ಪ್ರೇರಣೆಯಾಗಲಿದೆ. ಅವರ ಅಗಲಿಕೆಯಿಂದ ರಾಜ್ಯ ರಾಜಕೀಯ ಹಾಗೂ ಸಾರ್ವಜನಿಕ ಕ್ಷೇತ್ರಕ್ಕೆ ತುಂಬಲಾರದ ನಷ್ಟ ಉಂಟಾಗಿದೆ.

ಭಗವಂತನು ಅವರ ಆತ್ಮಕ್ಕೆ ಚಿರಶಾಂತಿ ನೀಡಲಿ. ಅವರ ಕುಟುಂಬದವರು, ಬಂಧು-ಬಳಗ ಹಾಗೂ ಅಪಾರ ಅಭಿಮಾನಿಗಳಿಗೆ ಈ ದುಃಖವನ್ನು ಸಹಿಸುವ ಧೈರ್ಯ ಮತ್ತು ಶಕ್ತಿಯನ್ನು ಕರುಣಿಸಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

# ನಂದಿನಿ ಶಾಲಾ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ



**ಚಿಟಗುಪ್ಪ:** ತಾಲೂಕಿನ ನಿರ್ಣಾ ಗ್ರಾಮದ ಕೆಇಬಿ ಹತ್ತಿರ ಪೂಜ್ಯ ನಾಗಯ್ಯಾ ವೀರಯ್ಯಾ ಮಠಪತಿ ಶಿಕ್ಷಣ ಸಂಸ್ಥೆಯ ನಂದಿನಿ ಆಂಗ್ಲ ಮಾಧ್ಯಮ ಶಾಲೆ ನೂತನ ಕಟ್ಟಡ ನಿರ್ಮಾಣಕ್ಕೆ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಶಂಕರಾವ್ ಪಾಟೀಲ್ ಬನ್ನಳ್ಳಿ ಸೋಮವಾರ ಶಂಕುಸ್ಥಾಪನೆ ನೆರವೇರಿಸಿ, ಮಾತನಾಡಿದ ಅವರು, ನಿರ್ಣಾ ಗ್ರಾಮದಲ್ಲಿ ಕಳೆದ 30 ವರ್ಷಗಳಿಂದ ನಂದಿನಿ ಆಂಗ್ಲ ಮಾಧ್ಯಮ ಪ್ರೌಢ ಶಾಲೆ ಕಾರ್ಯ ನಿರ್ವಹಿಸುತ್ತಿದ್ದು, ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ನೀಡಲು ಹೆಸರುವಾಸಿಯಾಗಿದೆ. ನಂದಿನಿ ಸಮೂಹ ಶಿಕ್ಷಣ ಸಂಸ್ಥೆಯ ಸ್ವಂತ ಕಟ್ಟಡಕ್ಕೆ ಅಡಿಪಾಯ ಹಾಕಿರುವುದು ತುಂಬಾ ಖುಷಿ ತಂದಿದೆ ಎಂದರು. ಪತ್ರಕರ್ತ ಸಂಜು ಬುಕ್ಕಾ ಮಾತನಾಡಿ, ನಂದಿನಿ ಶಿಕ್ಷಣ ಸಂಸ್ಥೆಯ ಕಟ್ಟಡಕ್ಕೆ ಶಂಕುಸ್ಥಾಪನೆ ನೇರವೇರಿಸಿದ್ದು, ಮುಂಬರುವ ದಿನಗಳಲ್ಲಿ ಬೃಹತ್ ಮಟ್ಟದಲ್ಲಿ ಕಟ್ಟಡ ನಿರ್ಮಾಣವಾಗಿ ತಲೆ ಎತ್ತಲಿದೆ. ಶಿಕ್ಷಣ ಸಂಸ್ಥೆಗೆ ಬೇಕಾದ ಎಲ್ಲಾ ಆಧುನಿಕ ಸೌಲಭ್ಯಗಳು ಈ ಕಟ್ಟಡದಲ್ಲಿ ಸಿಗಲಿವೆ. ಎರಡುವರೆ ಎಕರೆಯಲ್ಲಿ ನಿರ್ಮಾಣ ಕಾರ್ಯ ನಡೆಯಲಿದ್ದು ಈ ಭಾಗದ ಶೈಕ್ಷಣಿಕ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದು ಹೇಳಿದರು. ಶಾಲೆಯ ಆಡಳಿತಾಧಿಕಾರಿ ನಾಗೇಶ್ ಮಠಪತಿ, ನಂದಿನಿ ಮಠಪತಿ, ಲಕ್ಷ್ಮಿ ಮಠಪತಿ, ಗ್ರಾಮದ ಮುಖಂಡರಾದ ಬಸವರಾಜ್ ಬನ್ನಳ್ಳಿ, ಶಂಕ್ರಯ್ಯಾ ಸ್ವಾಮಿ ಹಿರೇಮಠ, ಆರ್ಕಿಟೆಕ್ಟ್ ಪ್ರಶಾಂತ, ನಂದಿನಿ ಶಾಲೆಯ ಶಿಕ್ಷಕಿಯರಾದ ಉಮಾಶ್ರೀ, ಮಮತಾ ಸೇರಿದಂತೆ ಇತರರು ಉಪಸ್ಥಿತರಿದ್ದರು. ಹಿರಿಯ ಪತ್ರಕರ್ತ ಓಂಕಾರ ಮಠಪತಿ ಎಲ್ಲರನ್ನು ಸ್ವಾಗತಿಸಿ ವಂದಿಸಿದ್ದರು.

# ಜನರಿಂದ ನಾನು ಮೇಲೆ ಬಂದೆ ಚಿತ್ರದ ಹಾಡು ರಿಲೀಸ್...



**ಬೆಂಗಳೂರು:** ವಿಶ್ವ ತಾಯಂದಿರ ದಿನದ ಅಂಗವಾಗಿ ಶ್ರೀ ಮಂಜುನಾಥ ಫಿಲಂಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ 'ಜನರಿಂದ ನಾನು ಮೇಲೆ ಬಂದೆ' ಕನ್ನಡ ಚಲನಚಿತ್ರದ 'ಜಗವೇ ಪೂಜಿಸುವ ಗುಡಿಯಿರದಾ ದೇವತೆ' ಎಂಬ ತಾಯಿ ಹಾಡನ್ನು ಜನ ನಾಯಕಿ, ಹಾಗೂ ಜನಪ್ರಿಯ ಕೇಂದ್ರ ಸಚಿವರಾದ ಶೋಭಾ ಕರಂದ್ಲಾಜೆ ಅವರು ಬಿಡುಗಡೆ ಮಾಡಿ ಹಾಡಿನಲ್ಲಿ ನಾಯಕ ನಟ ಗಂಧರ್ವ ರಾಜ್, ತಾಯಿ ಮಧುಶ್ರೀ ವಸಂತ, ಮಾಸ್ಟರ್ ರೋನಕ್, ಬೇಬಿ ಧನ್ವಿತಾ ತುಂಬಾ ಚೆನ್ನಾಗಿ ನಟಿಸಿದ್ದಾರೆಂದು ಚಿತ್ರ ತಂಡಕ್ಕೆ ಶುಭಕೋರಿದರು.

ಈ ಹಾಡಿನ ಸಾಹಿತ್ಯವನ್ನು ಪೃಥ್ವಿ ರಾಜ್ ಸಂಕಿ ಬರೆದಿದ್ದು, ಎ ಆರ್ ತನ್ವೀರ್ ಹಾಡಿದ್ದಾರೆ, ಸಂಗೀತ ನಿರ್ದೇಶನವನ್ನು ಪ್ರಣವ್ ಸತೀಶ್ ಮಾಡಿದ್ದಾರೆ. ಗಂಧರ್ವ ರಾಜ್ (ಶಂಕರ), ಅಭಿಜಿತ್, ಶೈಲಜಾ ದ್ವಾರಕೀಶ್, ಚಾಮರಾಜ ಮಾಸ್ಟರ್, ನವಿಲುಗರಿ ನವೀನ್ ಪಿ ಬಿ, ಶಿವಕುಮಾರ್ ಆರಾಧ್ಯ, ಜಯಪ್ರಕಾಶ್ ನಾಗತಿಹಳ್ಳಿ, ಪ್ರವೀಣ ಕುಲಕರ್ಣಿ, ಸಂದೀಪ್ ಮಲಾನಿ, ಅನಿಲ್ ಕುಮಾರ್ ಬಾಬಿ, ಮಧುಶ್ರೀ ವಸಂತ, ಶಿವಣ್ಣ, ಆಪ್ತಿ ಪಟವರ್ಧನ್, ಕೃತಿಕಾ ದಿವಾಕರ್, ಶಾಂತಾ ಪಾಪು, ಸುನಂದ ಕಲಬುರಗಿ, ಕಾಟೇರ ಕೇಶವ್, ಅಂಬೇಡ್ಕರ್ ಮಹೇಶ್, ಶಶಿರೇಖಾ ಸೇರಿದಂತೆ ದೊಡ್ಡ ತಾರಾಬಳಗವಿದೆ.

ಛಾಯಾಗ್ರಾಹಣ ಮತ್ತು ಸಂಕಲನ ಟಿ ಆರ್ ಗೌತಮ್ , ಸಾಹಿತ್ಯ ನವಿಲುಗರಿ ನವೀನ್ ಪಿ ಬಿ, ಪೃಥ್ವಿ ರಾಜ್ ಸಂಕಿ, ಭುವನ್ ಎಂ ಎಸ್ , ನೃತ್ಯ ನಿರ್ದೇಶನ , ಚಾಮರಾಜ ಮಾಸ್ಟರ್, ಅರುಣ್ ಮಾಸ್ಟರ್, ಸತೀಶ್ ಕೃಷ್ಣ ಶೆಟ್ಟಿ, ಪೂಜಾ ರಾಯಸಂ , ಡಿ ಐ ಮತ್ತು ಪೋಸ್ಟರ್ ಡಿಸೈನ್ ಟಿ ಆರ್ ಜಿ ಪಿಕ್ಸೆಲ್ಸ್ ಮಿಕ್ಸಿಂಗ್ ಮಾಸ್ಟರಿಂಗ್ ಪೂರ್ಣ ಶ್ರೀಖರ್ ಎಂ, ಪಿ ಆರ್ ಓ ಆರ್ ಚಂದ್ರಶೇಖರ್, ಡಾ ಪ್ರಭು ಗಂಜೀಹಾಳ, ಡಾ ವೀರೇಶ ಹಂಡಿಗಿ, ನವಿಲುಗರಿ ನವೀನ್ ಪಿ ಬಿ ಅವರು ಕಥೆ ಚಿತ್ರ ಕಥೆ ಸಂಭಾಷಣೆ ಜೊತೆ ನಿರ್ದೇಶನವನ್ನು ಮಾಡಿದ್ದಾರೆ. ಸಹಾಯಕ ನಿರ್ದೇಶನ ಲಲಿತ್‌ಕೃಷ್ಣ ಅವರದಿದ್ದು ಶ್ರೀಮತಿ ಬಿ ಹೇಮಾವತಿ ಬಂಡವಾಳ ಹೂಡಿದ್ದಾರೆ, ಮ್ಯೂಸಿಕ್ ಬಜಾರ್ ಯುಟ್ಯೂಬ್ ಚಾನೆಲ್ ಹಾಡು ಬಿಡುಗಡೆ ಮಾಡಲಾಗಿದ್ದು ಎಲ್ಲರೂ ನೋಡಿ ಪ್ರೋತ್ಸಾಹ ನೀಡಬೇಕು, ಚಿತ್ರವೂ ಕೂಡ ಅತೀ ಶೀಘ್ರದಲ್ಲೇ ಬೆಳ್ಳಿಪರದೆ ಮೇಲೆ ಬಿಡುಗಡೆಯಾಗಲಿದೆ ಎಂದು ಚಿತ್ರ ತಂಡದವರು ತಿಳಿಸಿದ್ದಾರೆ.

# ಅಕ್ರಮ ಗೋವುಗಳ ಸಾಗಾಣೆ ತಡೆಗೆ ಆಗ್ರಹಿಸಿ ಪ್ರತಿಭಟನೆ



• ಮಲ್ಲಮ್ಮ ನುಡಿ ವಾರ್ತೆ ಕಲಬುರ್ಗಿ

ಬಕ್ರೀದ್ ಹಬ್ಬದ ನಿಮಿತ್ಯ ಅಕ್ರಮವಾಗಿ ಗೋವುಗಳನ್ನ ಸಾಗಾಟ ಮಾಡುವವರ ಹಾಗೂ ಗೋವುಗಳನ್ನ ಹತ್ಯೆ ಮಾಡುವವರ ವಿರುದ್ಧ ಕಠಿಣ ಕ್ರಮ ಕೈ ಗೊಳ್ಳುವಂತೆ ಹಾಗೂ ನಗರದ ಸುತ್ತ ಮುತ್ತ ಬರುವ ರಿಂಗ್ ರಸ್ತೆಗಳಲ್ಲಿ ರಾತ್ರಿ ಚೆಕ್ ಪೋಸ್ಟ್ ಹಾಕಬೇಕು ಎಂದು ಒತ್ತಾಯಿಸಿ ಸೋಮವಾರ ಶ್ರೀರಾಮ್ ಸೇನಾ ಜಿಲ್ಲಾ ಘಟಕದ ಕಾರ್ಯಕರ್ತರು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನಾ ಪ್ರದರ್ಶನ ಮಾಡಿದರು.

ಸಂಘಟನೆಯ ಜಿಲ್ಲಾಧ್ಯಕ್ಷ ಲಕ್ಷ್ಮೀಕಾಂತ್ ಸ್ವಾದಿ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ವೀರೇಶ್ ಕೊರಳ್ಳಿ, ವೀರೇಶ್ ಗಣಮುಖಿ, ಶಿವು, ಉದಯ್ ಸುಲ್ತಾನಪುರ, ಚನ್ನವೀರ್ ಸಿಂಗಿ, ವೀರೇಶ್ ಬಿಂಗೆ, ಸೈಯದ್, ಪ್ರಶಾಂತ್ ಸಿರೂರ್, ಶರಣು ಸಿರೂರ್, ಸಾಯಿನಾಥ ಸಾಸಟ್ಟಿ, ಗಣೇಶ್ ರಾಠೋಡ್ ಅವರೂ ಸೇರಿದಂತೆ ಹಲವಾರು ಕಾರ್ಯಕರ್ತರು ಪಾಲ್ಗೊಂಡಿದ್ದರು.

ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ, ರಾಜ್ಯದಲ್ಲಿ ಗೋ ಹತ್ಯೆ ನಿಷೇದ ಜಾರಿಗೆ ಇದ್ದರು ಕೂಡ ನಗರದಲ್ಲಿ ಅಕ್ರಮವಾಗಿ ಗೋ ಹತ್ಯೆ ಮತ್ತು ಗೋ ಮಂಸಾ ಮಾರಾಟ ಎಗ್ಗಿಲದೇ ನಡೆಯುತ್ತಿರುವುದು ಖಂಡನಾರ್ಹ. ಇದೆ 28ರಂದು ಬಕ್ರೀದ್ ಹಬ್ಬ ಇದ್ದು ಕುರುಬಾನಿ ಹೆಸರಲ್ಲಿ ಸಾವಿರಾರು ಗೋವುಗಳನ್ನ ಅಕ್ರಮವಾಗಿ ಹತ್ಯೆ ಮಾಡುವುದು ಖಂಡನೀಯ ಎಂದು ಆಕ್ಷೇಪಿಸಿದರು.

ಹಿಂದೂಗಳು ಪೂಜಿಸುವ ಗೌರವಿಸುವ ಗೋವುಗಳನ್ನ ಹತ್ಯೆ ಮಾಡುವುದು ಖಂಡನಾರ್ಹ. ಹಾಗೂ ಗೋ ಹತ್ಯೆ ಮಾಡುವ ಮೂಲಕ ಹಿಂದೂ ಭಾವನೆಗಳಿಗೆ ದಕ್ಕೆ ತರುವ ಉದ್ದೇಶವಾಗಿದೆ. ಕಾರಣ ಸಂಬಂಧ ಪಟ್ಟ ಪೊಲೀಸ್ ಇಲಾಖೆ. ಪಶು ವೈದ್ಯ ಇಲಾಖೆ ಹಾಗೂ ಸಾರಿಗೆ ಇಲಾಖೆ (ಆರ್‌ಟಿಓ ) ಅಧಿಕಾರಿಗಳನ್ನು ಕರೆದು ಸಭೆ ನಡೆಸಿ ನಗರದ ಆಳಂದ್ ರಿಂಗ್ ರಸ್ತೆ, ಅಫಜಲಪುರ ರಿಂಗ್ ರಸ್ತೆ, ಹುಮನಾಬಾದ್ ರಿಂಗ್ ರಸ್ತೆ, ಸೇಡಂ ರಿಂಗ್ ರಸ್ತೆ, ಶಹಾಬಾದ್ ರಿಂಗ್ ರಸ್ತೆ, ಜೇವರ್ಗಿ ರಿಂಗ್ ರಸ್ತೆಗಳಲ್ಲಿ 24 ಘಂಟೆ ಚೆಕ್ ಪೋಸ್ಟ್ ನಿರ್ಮಿಸಿ, ಬೇರೆ ಜಿಲ್ಲೆ-ಬೇರೆ ರಾಜ್ಯದಿಂದ ಬರುವ ಅಕ್ರಮ ಗೋವುಗಳನ್ನ ಹಾಗೂ ಜಾನುವಾರುಗಳನ್ನ ರಕ್ಷಣೆ ಮಾಡಿ ಅಕ್ರಮವಾಗಿ ಸಾಗಿಸುವ ವಾಹನ ಮತ್ತು ವಾಹನ ಮಾಲೀಕರ ಮೇಲೆ ಕಾನೂನಿನ ಪ್ರಕಾರ ಕಠಿಣ ಕ್ರಮ ಕೈ ಗೊಳ್ಳಬೇಕು ಹಾಗೂ ರಾತ್ರಿ ಗೋ ರಕ್ಷಣೆ ಮಾಡುವ ಗೋ ರಕ್ಷಕರರಿಗೆ ಸೂಕ್ತ ಪೊಲೀಸ್ ಬಂದೋಬಸ್ತ್ ಒದಗಿಸಬೇಕು ಎಂದು ಅವರು ಒತ್ತಾಯಿಸಿದರು.

ನಗರದಲ್ಲಿ ಅಕ್ರಮವಾಗಿ ಕಸಾಯಿಖಾನೆಗಳು ನಡೆಸುತ್ತಿದ್ದೂ ಅಂತಹ ಕಸಾಯಿಖಾನೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ ಅವರು, ಒಂದು ವೇಳೆ ಎಲ್ಲಿಯಾದರೂ ಅಕ್ರಮವಾಗಿ ಗೋವುಗಳನ್ನ ಸಾಗಾಟ ಮಾಡುವುದು ಹತ್ಯೆ ಮಾಡುವುದು ಕಂಡು ಬಂದಲ್ಲಿ ಶ್ರೀ ರಾಮ್ ಸೇನೆ ಕಾರ್ಯಕರ್ತರು ಅಂತಹ ಸ್ಥಳಗಳಲ್ಲಿ ಖುದ್ದು ಹುಡುಕಿ ಪೊಲೀಸ್ ಇಲಾಖೆಗೆ ದೂರು ಸಲ್ಲಿಸುತ್ತೇವೆ. ಕಾರಣ ಪೋಲಿಸರು ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

# ಜಿಲ್ಲಾಡಳಿತ ಮತ್ತು ಪತ್ರಕರ್ತರ ಕ್ರಿಕೆಟ್ ಪಂದ್ಯಾವಳಿ



• ಮಲ್ಲಮ್ಮ ನುಡಿ ವಾರ್ತೆ ಹಾಸನ

ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘ ಮತ್ತು ಜಿಲ್ಲಾಡಳಿತದ 15 ಇಲಾಖೆಗಳ ತಂಡಗಳು ಹಾಸನದಲ್ಲಿ ಏರ್ಪಡಿಸಿದ್ದ ಸೌಹಾರ್ದಯುತ ಕ್ರಿ-ಕೆಟ್ ಪಂದ್ಯಾವಳಿಗಳಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಬ್ಯಾಟಿಂಗ್ ಮಾಡುವ ಮೂಲಕ ಚಾಲನೆ ನೀಡಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷರಾದ ಎಚ್.ಬಿ.ಮದನಗೌಡ, ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಜೆ.ಆರ್. ಕೆಂಚೇಗೌಡ, ಉಪಾಧ್ಯಕ್ಷರಾದ ಎನ್.ನಂಜುಂಡೇಗೌಡ, ಜಿ.ಪ್ರಕಾಶ್, ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆ.ಪಿ.ಎಸ್.ಪ್ರಮೋದ್, ಪದಾಧಿಕಾರಿಗಳಾದ ಹರೀಶ್, ಪ್ರಕಾಶ್ ಬೆಣಲವಾಡಿ, ಖುಷವಂತ್, ಮಾಜಿ ಅಧ್ಯಕ್ಷ ಬಾಳ್ಳು ಗೋಪಾಲ್, ಉದಯಕುಮಾರ್ ಮತ್ತಿತರರು ಹಾಜರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆಯುಡಬ್ಲೂಣಟಿಜಜಜಿಟಿಜಜಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಮಾನಸಿಕ ಒತ್ತಡ ನಿವಾರಿಸಿಕೊಳ್ಳಲು ಕ್ರೀಡೆ ಸರಿಯಾದ ಮಾರ್ಗ. ಈ ನಿಟ್ಟಿನಲ್ಲಿ ಪತ್ರಕರ್ತರೂ ಕೂಡ ಒತ್ತಡ ನಡುವೆ ಬಿಡುವಾಗಿ ತೊಡಗಿಸಿಕೊಳ್ಳುವಂತೆ ಕರೆ ನೀಡಿದರು.

ಹಾಸನ ಜಿಲ್ಲಾ ಪತ್ರಕರ್ತರ ಸಂಘದ ಜೊತೆಗೆ ಸರ್ಕಾರಿ ವಿವಿಧ ಇಲಾಖೆಯ 15 ತಂಡಗಳು ಕ್ರೀಡಾಕೂಟದಲ್ಲಿ ಭಾಗವಹಿಸಿರುವುದು ಇದೇ ಮೊದಲು ಎನ್ನುವುದು ವಿಶೇಷ. ಅದಕ್ಕಾಗಿ ಅಭಿನಂದಿಸುವುದಾಗಿ ತಗಡೂರು ಹೇಳಿದರು.

# ಹೊಲಗಳಿಗೆ ರಸ್ತೆ ಸಂಪರ್ಕ ಕಲ್ಪಿಸಲು ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಯಲಬುರ್ಗಾ

ಮಲಕಸಮುದ್ರ ಕೆರೆಯ ಹತ್ತಿರ ಇರುವ ಹಾಗು ಯಲಬುರ್ಗಾ ಸೀಮಾದ ರೈತರು ತಮ್ಮ ಹೊಲಗಳಿಗೆ ಹೋಗಿ ಬಿತ್ತನೆ ಮಾಡಬೇಕಾದರೆ ಕಷ್ಟ ಅನುಭವಿಸುತ್ತಿದ್ದಾರೆ ಆದ್ದರಿಂದ ರೈತರಿಗೆ ಸುಗಮ ರಸ್ತೆ ಸಂಪರ್ಕ ಕಲ್ಪಿಸಿ ಕೊಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗು ಹಸಿರು ಸೇನೆಯ (ವಾಸುದೇವ ಬಣದ) ಯಲಬುರ್ಗಾ ತಾಲೂಕು ಅಧ್ಯಕ್ಷ ಶರಣಬಸಪ್ಪ ದಾನಕೈ ಅವರು ಒತ್ತಾಯಿಸಿದ್ದಾರೆ.

ಯಲಬುರ್ಗಾದ ಗಣೇಶ ದೇವಸ್ಥಾನದಿಂದ ಮಲಕಸಮುದ್ರ ಕೆರೆಯವರೆಗೆ ಇರುವ ರಸ್ತೆಯನ್ನು ಸರಿಪಡಿಸಬೇಕು ,ಮಲಕ ಸಮುದ್ರಕೆರೆಯ ಪಕ್ಕದಲ್ಲಿರು ರಸ್ತೆಯಲ್ಲಿ ಹಾಪು ಹಾಗು ಮುಳ್ಳು ಕಂಠಿಗಳು ಬೆಳೆದು ದಾರಿ ಇಲ್ಲದೆ ರೈತರು ಪರದಾಡುತ್ತಿದ್ದಾರೆ. ಸರ್ವೆ ನಂವರ 255 ರ ಮುಂದಿನ ಹೊಲಗಳಿಗೆ ಹೋಗುವ ರೈತರಿಗೆ ದಾರಿಯಿಲ್ಲದೆ ರೈತರು ಜಗಳವಾಡುತ್ತಾ ಇದ್ದಾರೆ ,ಈ ಮಾರ್ಗವಾಗಿ ರಸ್ತೆ ಇರಲಾರದೆ ಬೆಸರಪಟ್ಟು 10 ವರ್ಷದಿಂದ ರೈತರು ಪಡ ಬಿದ್ದಿರುವ ತಮ್ಮ ಜಮೀನುಗಳಿಗೆ ಹೋಗಿ ಮುಳ್ಳು ಕಂಠಿ ಸ್ವಚ್ಚಗೋಳಿಸಿ ಬಿತ್ತನೆಗೆ ಹದಗೊಳಿಸಬೇಕಾದರೆ ಇಗ ಎರಡು ಎಕರೆ ಹೊಲಕ್ಕೆ ಒಂದು ಲಕ್ಷ ಅಧಿಕವಾಗಿ ಖರ್ಚು ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಇದರಿಂದ ರೈತರ ಬದುಕು ಸಾಲದಲ್ಲಿ ಹುಟ್ಟಿ ಸಾಲದಲ್ಲಿ ಸಾಯುವ ಪರಿಸ್ಥಿತಿ ನಿರ್ಮಾಣವಾಗಿದೆ ಆದ್ದರಿಂದ ಸುಗಮ ರಸ್ತೆ ಸಂಪರ್ಕ ಕಲ್ಲಿಸಲು ನಮ್ಮ ಹೊಲ ನಮ್ಮ ದಾರಿ ಯೋಜನೆಯನ್ನು ಜಾರಿಗೆ ತಂದಿದೆ,ಈ ಯೋಜನೆಯಡಿ ತೊಂದರೆಗೆ ಒಳಗಾದ ರೈತರ ಜಮೀನುಗಳಿಗೆ ಸುಗಮ ರಸ್ತೆ ಸಂಪರ್ಕ ಕಲ್ಪಿಸಲು ಮುಂದಾದರೆ , ಈ ಯೋಜನೆಯ ಸದುಪಯೋಗ ರೈತರಿಗೆ ದೊರೆತಾಗ ಮಾತ್ರ ಇಂತಹ ಯೋಜನೆಗಳಿಗೆ ಅರ್ಥ ಬರುತ್ತದೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಯಲಬುರ್ಗಾ ತಾಲೂಕು ಅದ್ಯಕ್ಷ ಶರಣಬಸಪ್ಪ ದಾನಕೈ ಅವರು ಸಂಬಂಧಿಸಿದಿಸಿದ ಅಧಿಕಾರಿಗಳು ,ಜನಪ್ರತಿನಿಧಿಗಳಲ್ಲಿ ಒತ್ತಾಯಿಸಿದ್ದಾರೆ,ಒಂದು ವೇಳೆ ರೈತರ ಸಮಸ್ಯೆಗಳಿಗೆ ಸ್ಪಂದಿಸದಿದ್ದರೆ ಮುಂದಿನ ದಿನಮಾನದಲ್ಲಿ ಬೀದಿಗಿಳಿದು ಹೊರಾಟ ಮಾಡಲಾಗುವದು ಎಂದು ತಿಳಿಸಿದ್ದಾರೆ.



# ನೂತನ ಜಿಲ್ಲಾಧಿಕಾರಿಯಾಗಿ ಇಕ್ರಮ್ ಶರೀಫ್ ಅಧಿಕಾರ ಸ್ವೀಕಾರ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಲಬುರಗಿ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ಕರ್ನಾಟಕ ಕೇಡರಿನ 2016ನೇ ಬ್ಯಾಚಿನ ಐ.ಎ.ಎಸ್. ಅಧಿಕಾರಿ ಇಕ್ರಮ ಶರೀಫ್ ಅವರು ಸೋಮವಾರ ನಿರ್ಗಮಿತ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರಿಂದ ಅಧಿಕಾರ ವಹಿಸಿಕೊಂಡರು.

ನಿರ್ಗಮಿತ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ನೂತನ ಜಿಲ್ಲಾಧಿಕಾರಿಗಳಿಗೆ ಅಧಿಕಾರ ಹಸ್ತಾಂತರಿಸಿ ಹೂಗುಚ್ಛ ನೀಡಿ ಶುಭ ಕೋರಿದರು.

ಸರ್ಕಾರ ಇತ್ತೀಚೆಗೆ ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರನ್ನು ಗ್ರಾಮೀಣ ಕುಡಿಯುವ ನೀರು ಮತ್ತು ಸರಬರಾಜು ಇಲಾಖೆಯ ಆಯುಕ್ತರಾಗಿ ವರ್ಗಾಯಿಸಿ ಅವರ ಸ್ಥಾನಕ್ಕೆ ಹಣಕಾಸು ಇಲಾಖೆಯ ಜಂಟಿ ಕಾರ್ಯದರ್ಶಿ (ಆಯವ್ಯಯ ಮತ್ತು ಸಂಪನ್ಮೂಲ) ಹುದ್ದೆಯಲ್ಲಿ




ಕಾರ್ಯನಿರ್ವಹಿಸುತ್ತಿದ್ದ ಇಕ್ರಮ್ ಶರೀಫ್ ಅವರನ್ನು ನಿಯೋಜಿಸಿತ್ತು.

ಕರ್ನಾಟಕ ಮೂಲದವರಾದ ಇಕ್ರಮ್ ಶರೀಫ್ ಅವರು ಬಿ.ಎ. (ಅರ್ಥಶಾಸ್ತ್ರ) ಪದವಿ ಪಡೆದಿದ್ದಾರೆ. ಈ ಹಿಂದೆ ರಾಮನಗರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದ ಸಂದರ್ಭದಲ್ಲಿ ಎಸ್.ಎಸ್. ಎಲ್.ಸಿ ಫಲಿತಾಂಶ ಸುಧಾರಣೆಗೆ ಕೈಗೊಂಡ ಕ್ರಮಗಳು ಶ್ಲಾಘನೆಗೆ ಪಾತ್ರವಾಗಿತ್ತು. ಇವರು ಕಳೆದ 2024ರ ಜುಲೈ ನಿಂದ ಇಲ್ಲಿಯವರೆಗೆ ಹಣಕಾಸು ಇಲಾಖೆಯಲ್ಲಿ ಆಯವ್ಯಯ ಸಿದ್ದಪಡಿಸುವ ಮಹತ್ವದ ಜವಾಬ್ದಾರಿಯಲ್ಲಿ ಕಾರ್ಯನಿರ್ವಹಿಸಿದ ಅನುಭವ ಹೊಂದಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಎಸ್.ಪಿ. ಅಡ್ಡೂರು ಶ್ರೀನಿವಾಸುಲು, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತರಾದ ಸಾಹಿತ್ಯ ಆಲದಕಟ್ಟಿ, ಪ್ರಭುರೆಡ್ಡಿ ಸೇರಿದಂತೆ ತಾಲೂಕಿನ ತಹಶೀಲ್ದಾರರು, ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಿದ್ದು ನೂತನ ಜಿಲ್ಲಾಧಿಕಾರಿಗಳಿಗೆ ಶುಭಕೋರಿದರು.

# ಕ್ರಾಂತಿಯ ಸಂಸಾರವೆಂಬ ಸುಳಿಯ ಭ್ರಾಂತಿ




ಈ ಪದ್ಯವು ಮನುಷ್ಯನ ಅಜ್ಞಾನ ಮತ್ತು ಮಾಯಾಪಾಶದ ಬಲೆಯನ್ನು ಕುರಿತು ಅತ್ಯಂತ ಮಾರ್ಮಿಕವಾಗಿ ವಿವರಿಸುತ್ತದೆ.

**ಭಾಮಿನಿ ಷಟ್ಪದಿ ಪದ್ಯ:**

**ಹಚ್ಚ ಹಸಿರಿನ ಮನವು ತಾನಾ ।**
**ನೀಚ ಸಂಸಾರ್ ಶೂಲದಾಡುತ ।**
**ಆಚೆ ಬರದೇ ಜೋಲುತಲ್ಲೆಯೆ ಸುಖವ ಬಯಸುವುದು ॥**
**ಎಚ್ಚರಿಲ್ಲದೆ ದುಃಖ ಜಾಲದಿ ।**
**ಬೆಚ್ಚನೆಯ ಸುಖ ಪಿಶಾಚಿ ತಬ್ಬಿ ।**
**ಹುಚ್ಚ ಕಿಚ್ಚನು ಪಿಡಿದು ನಗುವೊಲು ಮನುಜ ನಗುತಿಹನು ॥**

ಈ ಸಾಲುಗಳು ಸಂಸಾರವೆಂಬ ಸುಳಿಯಲ್ಲಿ ಸಿಲುಕಿದ ಜೀವಿಯ ವಿಪರ್ಯಾಸವನ್ನು ಎತ್ತಿ ತೋರಿಸುತ್ತವೆ. ಹಸಿರಾದ (ಚೈತನ್ಯಯುತವಾದ) ಮನಸ್ಸು ಹೇಗೆ ಕ್ಷಣಿಕ ಸುಖದ ಭ್ರಾಂತಿಯಲ್ಲಿ ಸಿಲುಕಿ ತನ್ನ ಅಸ್ತಿತ್ವವನ್ನೇ ಮರೆಯುತ್ತದೆ ಎಂಬುದು ಇಲ್ಲಿನ ಮುಖ್ಯ ಆಶಯ.

**ಸಂಸಾರದ ಸುಳಿ ಮತ್ತು ಭ್ರಾಂತಿ:**

**ಹಚ್ಚ ಹಸಿರಿನ ಮನವು ತಾನಾ ।**
**ನೀಚ ಸಂಸಾರ್ ಶೂಲದಾಡುತ ।**
**ಆಚೆ ಬರದೇ ಜೋಲುತಲ್ಲೆಯೆ ಸುಖವ ಬಯಸುವುದು ॥**

**ಭಾವಾರ್ಥ:** ಮನುಷ್ಯನ ಮನಸ್ಸು ಮೂಲತಃ ಹಚ್ಚ ಹಸಿರಿನಂತೆ (ಶುದ್ಧ ಮತ್ತು ಜೀವಂತಿಕೆ) ಇರುತ್ತದೆ. ಆದರೆ ಅದು ಈ 'ನೀಚ ಸಂಸಾರ' ಅಂದರೆ ಅಸ್ಥಿರವಾದ ಲೌಕಿಕ ಜೀವನವೆಂಬ ಶೂಲಕ್ಕೆ (ಕಷ್ಟಗಳ ಮೊನಚಾದ ಹರಿತಕ್ಕೆ) ಸಿಲುಕಿ ಒದ್ದಾಡುತ್ತಿದೆ.

**ತಾತ್ವಿಕಾರ್ಥ:** ಶೂಲದ ಮೇಲೆ ನಿಂತವನಿಗೆ ಸಾವು ನಿಶ್ಚಿತ, ಆದರೂ ಅಲ್ಲಿಯೇ ತೂಗಾಡುತ್ತಾ (ಜೋಲುತ) ಮನುಷ್ಯ ಅದರಲ್ಲಿಯೇ ಸುಖವನ್ನು ಹುಡುಕುತ್ತಿದ್ದಾನೆ. ಇಲ್ಲಿ ಸಂಸಾರವನ್ನು 'ನೀಚ' ಎನ್ನಲು ಕಾರಣ ಅದು ಆತ್ಮನನ್ನು ತನ್ನ ನಿಜಸ್ವರೂಪದಿಂದ ದೂರ ಮಾಡಿ, ನಶ್ವರವಾದ ದೇಹ ಮತ್ತು ಸಂಬಂಧಗಳಲ್ಲಿ ಬಂಧಿಸುವುದರಿಂದ. ಕಷ್ಟದ ನಡುವೆಯೂ 'ಇನ್ನಷ್ಟು ಸುಖ ಸಿಗಬಹುದು' ಎನ್ನುವ ಮರೀಚಿಕೆಯೇ ಅವನನ್ನು ಆಚೆ ಬರಗೊಡುತ್ತಿಲ್ಲ.

**ಮಾಯೆ ಮತ್ತು ದುಃಖದ ವಿಪರ್ಯಾಸ:**

**ಎಚ್ಚರಿಲ್ಲದೆ ದುಃಖ ಜಾಲದಿ ।**
**ಬೆಚ್ಚನೆಯ ಸುಖ ಪಿಶಾಚಿ ತಬ್ಬಿ ।**
**ಹುಚ್ಚ ಕಿಚ್ಚನು ಪಿಡಿದು ನಗುವೊಲು ಮನುಜ ನಗುತಿಹನು ॥**

**ಭಾವರ್ಥ:** ಅರಿವು ಅಥವಾ ಜಾಗೃತಿ (ಎಚ್ಚರ) ಇಲ್ಲದ ಮನುಷ್ಯ ದುಃಖದ ಬಲೆಯಲ್ಲಿ ಸಿಲುಕಿದ್ದಾನೆ. ಅಲ್ಲಿ ಸುಖವೆಂಬುದು ಒಂದು 'ಪಿಶಾಚಿ' ಇದ್ದಂತೆ. ಪಿಶಾಚಿ ಹೇಗೆ ಮೋಹಿಸಿ ಮನುಷ್ಯನ ಪ್ರಾಣ ಹೀರುತ್ತದೆಯೋ, ಹಾಗೆಯೇ ಲೌಕಿಕ ಸುಖವು ಮೇಲ್ನೋಟಕ್ಕೆ 'ಬೆಚ್ಚಗೆ' ಕಂಡರೂ ಅದು ಅಂತರಾಳದಲ್ಲಿ ಮನುಷ್ಯನನ್ನು ದಹಿಸುತ್ತದೆ.

**ಉಪಮೆ:** ಸುಖದ ಬೆನ್ನತ್ತಿದ ಮನುಷ್ಯನನ್ನು ಇಲ್ಲಿ 'ಹುಚ್ಚ' ನಿಗೆ ಹೋಲಿಸಲಾಗಿದೆ. ಬೆಂಕಿಯನ್ನು (ಕಿಚ್ಚು) ಮೈಮೇಲೆ ಹಾಕಿಕೊಂಡು ಅಥವಾ ಕೈಯಲ್ಲಿ ಹಿಡಿದುಕೊಂಡು ಅದು ಪ್ರಕಾಶ ಕೊಡುತ್ತಿದೆ ಎಂದು ಸಂಭ್ರಮಿಸುವ ಹುಚ್ಚನಂತೆ, ಮನುಷ್ಯನು (ಮನುಜ = ಮನಸಿನ ದಾಸ) ತನ್ನನ್ನೇ ಸುಡುವ ಕಾಮ-ಕ್ರೋಧಾದಿ ವಿಷಯಗಳನ್ನು ಅಪ್ಪಿಕೊಂಡು ಸಂಭ್ರಮಿಸುತ್ತಿದ್ದಾನೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)